13 June 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**


ಸಮಯಕ್ಕೆ ತಕ್ಕಂತೆ ನಾವು ಬದಲಾದರೆ ಮಾತ್ರ ನಮ್ಮ ಜೀವನದ ಹಾದಿ ಸುಗಮಗೊಳ್ಳುವುದು!

▸▸ ಸ್ನೇಹಾ ಆನಂದ್

info.varthaman@gmail.com



ಅನಿಲ್‌ಚಿಕ್ಕಮಾದುಗೆ ಸಚಿವ ಸ್ಥಾನ ತಪ್ಪಿದರೆ ಪ್ರತಿಭಟನೆ ಎಚ್ಚರಿಕೆ — ಪುಟ ಸಂ. 2



ರಾಮನಗರ ಮೂರು ಗ್ರಾಮಗಳ ಭೂ ಸ್ವಾಧೀನ — ಪುಟ ಸಂ. 3



ಭೇದಗಳ ತೊಲಗಿಸಿದರೆ ಸಮಸಮಾಜ: ಇಕ್ಬಾಲ್ ಹುಸೇನ್ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 89 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3


# ಮೇಕೆದಾಟುಗೆ ಅನುಮತಿ ಕೊಡಿ

## ರಾಜ್ಯದ ನೀರಾವರಿಗೆ ಅನುದಾನ: ಕೇಂದ್ರ ಸಚಿವರಿಗೆ ಸಿಎಂ ಡಿಕೆಶಿ ಮನವಿ

**ನವದೆಹಲಿ:** ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಾದ ಮೇಕೆದಾಟು, ಕೃಷ್ಣಾ ಮೇಲ್ದಂಡೆ, ಭದ್ರಾ ಮೇಲ್ದಂಡೆ, ಮಹದಾಯಿ ಯೋಜನೆಗಳಿಗೆ ಅನುಮತಿ ಮತ್ತು ಅನುದಾನ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಜಲಶಕ್ತಿ ಸಚಿವರಿಗೆ ಮನವಿ ಸಲ್ಲಿಸಿದರು.

ನವದೆಹಲಿಯಲ್ಲಿ ಶುಕ್ರವಾರ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರನ್ನು ಭೇಟಿ ಮಾಡಿ ನೀರಾವರಿ ಯೋಜನೆಗಳ ಜಾರಿಗೆ ಸಹಕಾರ ಕೋರಿದರು. ಬಳಿಕ ನೀರಾವರಿ ಯೋಜನೆಗಳ ಬಗ್ಗೆ ಸಮಾಲೋಚನೆ ನಡೆಸಿದರು.

ಸುಪ್ರೀಂ ಕೋರ್ಟ್ ತಮಿಳುನಾಡು ಅರ್ಜಿಗಳನ್ನು 13.11.2025ರಂದು ವಜಾಗೊಳಿಸಿದೆ. ಮೇಕೆದಾಟು ಯೋಜನೆಗೆ ಅನುಮತಿಯ ಬಗ್ಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದೆ. ಈ ಯೋಜನೆಗೆ ಶೀಘ್ರ ಅನುಮತಿ ಸಿಗುವಂತೆ





ನೋಡಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರ 2023–24 ರ ಕೇಂದ್ರ ಬಜೆಟ್‌ನಲ್ಲಿ 5,300 ಕೋಟಿ ರೂ.ಗಳ ನೆರವನ್ನು ಘೋಷಿಸಿತ್ತು. ಆದರೆ, 3 ವರ್ಷಗಳು ಕಳೆದರೂ ರಾಜ್ಯಕ್ಕೆ ಈ ಹಣಕಾಸಿನ ನೆರವು ಬಿಡುಗಡೆಯಾಗಿಲ್ಲ. ಈ ಯೋಜನೆಯ 21,167.93 ಕೋಟಿ ರೂ.ಗಳ ಪರಿಷ್ಕೃತ ವೆಚ್ಚದ ಅಂದಾಜಿನ ಪ್ರಸ್ತುತ ಪ್ರಸ್ತಾವನೆಯನ್ನು ಮೌಲ್ಯಮಾಪನ ಮಾಡಿದೆ. ಈ ಯೋಜನೆಗೆ ಕೇಂದ್ರದ ನೆರವನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.

ಕೃಷ್ಣಾ ನದಿ ನೀರು ಹಂಚಿಕೆಗೆ ಸಂಬಂಧಿಸಿದಂತೆ, ಕೃಷ್ಣಾ ನೀರು ವಿವಾದ ನ್ಯಾಯಾಧೀಕರಣ ತೀರ್ಪು ನೀಡಿ ಒಂದು ದಶಕಕ್ಕೂ ಹೆಚ್ಚು ಕಾಲ ಕಳೆದಿದೆ. ಕೇಂದ್ರ ಸರ್ಕಾರ ಇನ್ನೂ ಸಹ ಈ ತೀರ್ಪನ್ನು ಗೆಜೆಟ್‌ನಲ್ಲಿ ಅಧಿಸೂಚಿಸಿಲ್ಲ. ಕರ್ನಾಟಕ ರಾಜ್ಯವು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ 3ರ ಅನುಷ್ಠಾನದಲ್ಲಿ ಭಾರಿ ಮೊತ್ತವನ್ನು ಹೂಡಿಕೆ ಮಾಡಿದೆ. ಯೋಜನೆಯನ್ನು ಮುಂದುವರಿಸಲು ಹಾಗೂ ನಮ್ಮ ಪಾಲಿನ ನೀರನ್ನು ಬಳಸಿಕೊಳ್ಳಲು ಕೇಂದ್ರದ ಬೆಂಬಲದ ಅಗತ್ಯವಿದೆ ಎಂದು ತಿಳಿಸಿದರು.

ಏತ ನೀರಾವರಿ, ಕಾಲುವೆ ಕಾಮಗಾರಿಗಳಿಗೆ ಕೇಂದ್ರದ ನೆರವು ನೀಡಬೇಕು. ಏತ ನೀರಾವರಿ, ಇಂಡಿ ಶಾಖಾ ಕಾಲುವೆ, ಮಲಪ್ರಭಾ ಕಾಲುವೆ ಬಾಕಿ ಕಾಮಗಾರಿ, ಘಟಪ್ರಭಾ ಬಲದಂಡೆ ಕಾಲುವೆ ಮತ್ತು ಚಿಕ್ಕೋಡಿ ಶಾಖಾ ಕಾಲುವೆ, ತುಂಗಭದ್ರಾ ಎಡದಂಡೆ ಕಾಲುವೆ ಬಾಕಿ ಕಾಮಗಾರಿ, ಬೆಣ್ಣಿಹಳ್ಳ ನದಿಯ ಪ್ರವಾಹ ನಿಯಂತ್ರಣ ಮತ್ತು ಪ್ರವಾಹ ನಿರ್ವಹಣೆ ಯೋಜನೆಗಳಿಗೆ ಕೇಂದ್ರ ಸರ್ಕಾರ ನೆರವು ನೀಡಬೇಕು ಎಂದು ಮನವಿ ಮಾಡಿದ್ದಾರೆ.

### ನದಿ ಜೋಡಣೆ: ರಾಜ್ಯಕ್ಕೆ ನ್ಯಾಯಯುತ ಪಾಲು ಅಗತ್ಯ

**ಕೇಂದ್ರ ಸರ್ಕಾರದ ನದಿಗಳ ಜೋಡಣೆ ಪ್ರಸ್ತಾವನೆ ಅಡಿಯಲ್ಲಿ, ನದಿ ಜೋಡಣೆ ಯೋಜನೆಗಳಿಂದ ಸಮತೆ ಮತ್ತು ಸಮಾನ ಹಂಚಿಕೆಯ ತತ್ವದ ಮೇಲೆ ಕರ್ನಾಟಕ ರಾಜ್ಯಕ್ಕೆ ನ್ಯಾಯ ಸಮ್ಮತವಾದ ಪಾಲನ್ನು ಹಂಚಿಕೆ ಮಾಡಬೇಕು ಎಂದು ಡಿಕೆ ಶಿವಕುಮಾರ್ ಕೇಂದ್ರ ಸಚಿವರ ಬಳಿ ಮನವಿ ಮಾಡಿದರು.**

## ಗಾಳಿ ಸುದ್ದಿ ನಂಬಬೇಡಿ: ನಟ ಪ್ರಕಾಶ್ ರಾಜ್ ಸ್ಪಷ್ಟನೆ

**ಬೆಂಗಳೂರು:** ಶ್ರೀಕ್ಷೇತ್ರ ಧರ್ಮಸ್ಥಳದ ಬುರುಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಸ್ಕ್ ಮ್ಯಾನ್ ಚಿನ್ನಯ್ಯ ಪ್ರಕಾಶ್ ರಾಜ್ ಹೆಸರನ್ನು ರಿಟ್ ಅರ್ಜಿಯಲ್ಲಿ ಉಲ್ಲೇಖ ಮಾಡಿದ್ದಾನೆ. ಇದು



ಬಹುಭಾಷಾ ನಟ ಪ್ರಕಾಶ್ ರಾಜ್ ಎಂಬ ಸುದ್ದಿ ಹಬ್ಬಿದೆ. ಈ ಬಗ್ಗೆ ಶುಕ್ರವಾರ ಸಾಮಾಜಿಕ ಮಾಧ್ಯಮದಲ್ಲಿ ನಟ ಪ್ರಕಾಶ್ ರಾಜ್ ಪ್ರತಿಕ್ರಿಯಿಸಿದ್ದಾರೆ.

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ನನ್ನ ಬಗ್ಗೆ ಕೆಲವು ಸುದ್ದಿಗಳು ಚರ್ಚೆಯಾಗುತ್ತಿರುವುದು ಗಮನಕ್ಕೆ ಬಂದಿದೆ. ಇದು ಅತ್ಯಂತ ಸೂಕ್ಷ್ಮವಾದ ಪುಟ 2ಕ್ಕೆ

## 16ರಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ

ಬೆಂಗಳೂರು: ವಿಧಾನ ಪರಿಷತ್‌ಗೆ ಜೂನ್ 18ರಂದು ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ತನ್ನ ರಾಜಕೀಯ ಚಟುವಟಿಕೆ ಚುರುಕುಗೊಳಿಸಿದೆ.

ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ಮತ್ತು ಕಾರ್ಯತಂತ್ರ ರೂಪಿಸುವ ಸಲುವಾಗಿ ಜೂನ್ 16ರಂದು ಮಂಗಳವಾರ ಸಂಜೆ 6 ಗಂಟೆಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. ಬಿಡದಿ ಬಳಿಯಿರುವ ವಂಡರ್‌ಲಾ ರೆಸಾರ್ಟ್‌ನಲ್ಲಿ ಸಭೆ ಆಯೋಜನೆಗೊಂಡಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಈ ಉನ್ನತ ಮಟ್ಟದ ಸಭೆ ನಡೆಯಲಿದೆ. ಸಭೆಯಲ್ಲಿ ಪಕ್ಷದ ಹೈಕಮಾಂಡ್ ನಾಯಕರು ಮತ್ತು ರಾಜ್ಯದ ಪ್ರಮುಖ ಮುಖಂಡರು ಭಾಗವಹಿಸಲಿದ್ದಾರೆ.

ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿ ಪ್ರಸಾದ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಪಕ್ಷದ ಹಿರಿಯರು ಭಾಗವಹಿಸಲಿದ್ದಾರೆ. ವಿಧಾನ ಪರಿಷತ್ ಚುನಾವಣೆ ಯಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಕಡ್ಡಾಯವಾಗಿ ಮತ ಚಲಾಯಿಸುವಂತೆ ಶಾಸಕರಿಗೆ ನಿರ್ದೇಶನ ನೀಡಲು ಈ ಸಭೆ ಕರೆಯಲಾಗಿದೆ.

## ಧರ್ಮಸ್ಥಳದ ವಿರುದ್ಧ ಷಡ್ಯಂತ್ರ: ವಿದೇಶಿ ಶಕ್ತಿಗಳ ಕೈವಾಡ ಶಂಕೆ

**ನೂರಾರು ಕೋಟಿ ಬಂಡವಾಳದ ಬಗ್ಗೆ ತನಿಖೆ ಅಗತ್ಯ: ವಿಜಯೇಂದ್ರ ಆಗ್ರಹ**

**ಬೆಂಗಳೂರು:** ಧರ್ಮಸ್ಥಳ ಮಂಜುನಾಥೇಶ್ವರ ಸ್ವಾಮಿ ಸನ್ನಿಧಿಗೆ ಕಳಂಕ ತರುವ ಮತ್ತು ಹಿಂದೂಗಳ ಧಾರ್ಮಿಕ ಶ್ರದ್ಧೆಗೆ ಕೊಡಲಿ ಪೆಟ್ಟು




ಕೊಡುವ ಉದ್ದೇಶದಿಂದ ಷಡ್ಯಂತ್ರ ನಡೆದಿತ್ತು ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ಸುದ್ದಿಗಾರರ ಜತೆ ಶುಕ್ರವಾರ ಮಾತನಾಡಿದ ಅವರು, ಷಡ್ಯಂತ್ರದಲ್ಲಿ ನೂರಾರು ಕೋಟಿ ಹಣ ಬಳಕೆಯಾಗಿದೆ. ವಿದೇಶಿ ಶಕ್ತಿಗಳ ಕೈವಾಡದ ಬಗ್ಗೆಯೂ ತನಿಖೆ ಆಗಬೇಕಿದೆ. ಪುಟ 2ಕ್ಕೆ

## ಪ್ರಕಾಶ್ ವಿರುದ್ಧ ತನಿಖೆಗೆ ಮುತಾಲಿಕ್ ಆಗ್ರಹ

ಬೆಳಗಾವಿ: ಧರ್ಮಸ್ಥಳಕ್ಕೆ ಅಪಖ್ಯಾತಿ ತರುವ ಪಿತೂರಿಯಲ್ಲಿ ಬಹುಭಾಷಾ ನಟ ಪ್ರಕಾಶ್ ರಾಜ್ ಕೂಡ ಭಾಗಿಯಾಗಿದ್ದಾರೆ. ಈ ಬಗ್ಗೆ



ತನಿಖೆ ನಡೆಸಬೇಕೆಂದು ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ ಮುತಾಲಿಕ್ ಆಗ್ರಹಿಸಿದರು.

ತಲೆಬುರುಡೆ ಪ್ರಕರಣದ ಆರೋಪಿ ಚಿನ್ನಯ್ಯ, ಈ ನಟನನ್ನು ಪ್ರಕರಣದ ಸಂಚು ಕೋರ ಎಂದು ಹೆಸರಿಸಿದ್ದಾರೆ. ಹಾಗಾಗಿ ಎಸ್‌ಐಟಿಯವರು ಪುಟ 2ಕ್ಕೆ

## ರಾಜಿ ಮಾಡಿಕೊಳ್ಳಿ : ಸಿಂಧೂರಿ, ರೂಪಾಗೆ ಸುಪ್ರೀಂ ಕೋರ್ಟ್ ಸಲಹೆ

ನವದೆಹಲಿ: ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಹಾಗೂ ಐಪಿಎಸ್ ಅಧಿಕಾರಿ ಡಿ. ರೂಪಾ ಮೌದ್ಗಿಲ್ ನಡುವಿನ ಜಗಳಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಶುಕ್ರವಾರ ಮಹತ್ವದ ಸಲಹೆ ನೀಡಿದೆ.

**▸▸ ಇಬ್ಬರು ಅಧಿಕಾರಿಗಳ ಸಂಧಾನಕಾರಾಗಿ ನಿವೃತ್ತ ನ್ಯಾಯಮೂರ್ತಿ ಜೋಸೆಫ್ ನೇಮಕ**

ಇಬ್ಬರೂ ಅಧಿಕಾರಿಗಳು ತಮ್ಮ ನಡುವಿನ ವಿವಾದವನ್ನು ಸಂಧಾನದ ಮೂಲಕ ಬಗೆಹರಿಸಿಕೊಳ್ಳುವಂತೆ ನ್ಯಾಯಾಲಯ ಸೂಚಿಸಿದೆ.

ಡಿ. ರೂಪಾ ತಮ್ಮ ವಿರುದ್ಧ ಮಾಡಿರುವ ಮಾನನಷ್ಟ ಮೊಕದ್ದಮೆಯ ವಿಚಾರಣೆಯನ್ನು ಎದುರಿಸಬೇಕು ಎಂದು ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರೋಹಿಣಿ ಸಿಂಧೂರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಶುಕ್ರ ವಾರ ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಮತ್ತು ನ್ಯಾಯಮೂರ್ತಿ ಸಂಜೀವ್ ಸಚ್‌ದೇವ ಅವರಿದ್ದ ಪೀಠವು ವಿಚಾರಣೆ ನಡೆಸಿತು.



**ಸುಪ್ರೀಂ ಕೋರ್ಟ್ ಹೇಳಿದ್ದೇನು?:**

ಇಬ್ಬರು ಉನ್ನತ ಅಧಿಕಾರಿಗಳ ನಡುವಿನ ಸುದೀರ್ಘ ಜಗಳದ ಬಗ್ಗೆ ಕಳವಳ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, “ಇಬ್ಬರೂ ಅತ್ಯುತ್ತಮ ಅಧಿಕಾರಿಗಳು. ಆದರೆ ಈ ರೀತಿ ನ್ಯಾಯಾಲಯದ ಮೆಟ್ಟಿಲೇರಿ ಜಗಳ ಮಾಡುವ ಮೂಲಕ ಪರಸ್ಪರ ತಮ್ಮ ವೃತ್ತಿ ಜೀವನವನ್ನು (ಕೆರಿಯರ್) ಹಾಳು ಮಾಡಿಕೊಳ್ಳುತ್ತಿದ್ದಾರೆ. ಈ ಪ್ರಕರಣವನ್ನು ಸಂಧಾನದ ಮೂಲಕ ಬಗೆಹರಿಸಿಕೊಳ್ಳಬಹುದು ಪುಟ 2ಕ್ಕೆ

## ಅನುದಾನ ತಾರತಮ್ಯ ಮಾಡಿಲ್ಲ

**ಕುರುಬ ಸಮುದಾಯಕ್ಕೆ ಹೆಚ್ಚು ಹಣ: ಸಿದ್ದರಾಮಯ್ಯ ಸ್ಪಷ್ಟನೆ**

**ಬೆಂಗಳೂರು:** ಯಾವುದೇ ಸಮುದಾಯದ ವಿರುದ್ಧ ಉದ್ದೇಶಪೂರ್ವಕ ತಾರತಮ್ಯ ಮಾಡಿಲ್ಲ. ವಿವಿಧ ಹಿಂದುಳಿದ ವರ್ಗಗಳ ಸಂಘಟನೆಗಳು ಮತ್ತು ಸಂಘಗಳ ಮನವಿಗಳನ್ನು ಪರಿಶೀಲಿಸಿ ಸುಮಾರು 155 ಸಂಘ–ಸಂಸ್ಥೆಗಳಿಗೆ ಸಮುದಾಯ ಭವನ ಹಾಗೂ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕಾಗಿ 71.85 ಕೋಟಿ ರೂ. ವೆಚ್ಚದ ಅನುಮೋದನೆ ನೀಡಲಾಗಿದೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಸಮುದಾಯ ಭವನಗಳು ಹಾಗೂ ವಿದ್ಯಾರ್ಥಿ ನಿಲಯಗಳ ಪೈಕಿ ಹೆಚ್ಚಿನವು ಕುರುಬ ಸಮುದಾಯದ ಸಂಘ–ಸಂಸ್ಥೆಗಳಿಗೆ ಸಿಕ್ಕಿವೆ ಎಂಬ ವಿವಾದ ಕೇಳಿ ಬಂದಿರುವ ಬೆನ್ನಲ್ಲೇ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸ್ಪಷ್ಟನೆ ನೀಡಿದ್ದಾರೆ.

ಇದು ಫಲಾನುಭವಿಗಳ ಅಂತಿಮ ಪಟ್ಟಿ ಅಲ್ಲ. ಬೇರೆ ಬೇರೆ ಹಿಂದುಳಿದ ಜಾತಿಗಳು ನೀಡಿರುವ ಮನವಿ ಕೂಡ ಪರಿಶೀಲಿಸಿ, ಅವುಗಳಿಗೆ ಮುಂದಿನ ದಿನಗಳಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು. ಇಲಾಖೆಗೆ ಸಲ್ಲಿಸಲಾ



ಗಿರುವ ಮನವಿಗಳಲ್ಲಿ ಕುರುಬ ಸಮುದಾಯಕ್ಕೆ ಸೇರಿರುವ ಮನವಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದ ಕಾರಣ ಹೆಚ್ಚಿನ ಅನುದಾನ ಸಂದಾಯವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕುರುಬ ಜನಾಂಗದ ಜೊತೆಗೆ ಮಡಿವಾಳ, ಲಿಂಗಾಯತ, ಒಕ್ಕಲಿಗ, ಬೆಸ್ತ, ಬಲಿಜ, ಗೊಲ್ಲ, ಜೆಟ್ಟಿ, ಕುಂಬಾರ, ಅರಸು, ಹೆಳವ, ಸವಿತಾ ಸಮಾಜ, ಉಪ್ಪಾರ, ಗಾಣಿಗ, ಕುರುಹಿನ ಶೆಟ್ಟಿ, ಹಾಲಕ್ಕಿ, ರೆಡ್ಡಿ ಈ ಜನಾಂಗದವರ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯಗಳ ಪುಟ 2ಕ್ಕೆ

## ಶೌಚಗುಂಡಿ ಸ್ವಚ್ಛತೆಗೆ ಯಂತ್ರ ಬಳಸಿ: ಸಚಿವ ಖಂಡ್ರೆ ಸೂಚನೆ

**ಬೆಂಗಳೂರು:** ಗ್ರಾಮಾಂತರ ಜಿಲ್ಲಾ ವ್ಯಾಪ್ತಿಗೆ



ಸೇರಿದ ಮತ್ತು ಪಂಚಾಯ್ತಿ ಸೃಜಿಸಿರುವ ಎಲ್ಲ ಸರ್ಕಾರಿ ಆಸ್ತಿಗಳನ್ನು ಜಿಯೋಟ್ಯಾಗ್ ಮಾಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದರು. ಪುಟ 2ಕ್ಕೆ

## ಹಾಸ್ಟೆಲ್‌ನಲ್ಲಿ ಮಗುವಿಗೆ ಜನ್ಮ ನೀಡಿದ ವಿದ್ಯಾರ್ಥಿನಿ



**ಕಾರವಾರ:** ಶಿರಸಿ ತಾಲೂಕಿನ ಹಾಸ್ಟೆಲ್‌ನಲ್ಲಿ 9ನೇ ತರಗತಿ ವಿದ್ಯಾರ್ಥಿನಿಯೊಬ್ಬಳು ಮಗುವಿಗೆ ಜನ್ಮ ನೀಡಿದ ಆಘಾತಕಾರಿ ಘಟನೆ ನಡೆದಿದೆ. ಮಗುವಿನ ಸ್ಥಿತಿ ಗಂಭೀರವಾಗಿದೆ. ಕಳೆದ ವಾರ ಶಾಲೆಗಳು ಪ್ರಾರಂಭವಾಗಿವೆ. 10 ದಿನದಲ್ಲೇ ಮಗುವಿಗೆ ಜನ್ಮ ನೀಡಿರುವುದು ಅಚ್ಚರಿ ಮೂಡಿಸಿದೆ. ಸ್ಥಳಕ್ಕೆ ಶಿರಸಿ ತಹಶಿಲ್ದಾರ್ ಹಾಗೂ ಶಿರಸಿ ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಹಾಸ್ಟೆಲ್‌ಗೆ ಭೇಟಿ ಮಾಹಿತಿ ಪಡೆದುಕೊಂಡಿದ್ದಾರೆ.

## ಮೂಕಾಂಬಿಕೆಗೆ ಬೆಳ್ಳಿ ಖಡ್ಗ ನೀಡಿದ ಸಿಎಂ ವಿಜಯ್

**ಉಡುಪಿ:** ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು ಶುಕ್ರವಾರ ಪ್ರಸಿದ್ಧ ಮೂಕಾಂಬಿಕೆ ದೇವಿ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.


ಶಕ್ತಿ ದೇವತೆಗೆ 1 ಕೆಜಿ 600 ಗ್ರಾಮ ತೂಕದ ಬೆಳ್ಳಿ ಖಡ್ಗ, ರೇಷ್ಮೆ ಸೀರೆ, ಫಲ–ತಾಂಬೂಲ ಅರ್ಪಿಸಿ ವಿಜಯ್ ಪ್ರಾರ್ಥನೆ ಸಲ್ಲಿಸಿದರು. ಸಂಕಲ್ಪ ಪೂಜೆ ಬಳಿಕ ದೀಪಾರಾಧನೆ ಮಾಡಲಾಯಿತು. ಪುಟ 2ಕ್ಕೆ



## ಮಾವು ಸೇವಿಸಿ ಸಹೋದರಿಯರ ಸಾವು

**ಬೀದರ್:** ಮಾವಿನ ಹಣ್ಣು ಸೇವಿಸಿ ಅಸ್ವಸ್ಥಗೊಂಡಿದ್ದ ಇಬ್ಬರು ಸಹೋದರಿಯರು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ. ಔರಾದ್ ತಾಲೂಕಿನ ಶೆಂಬೆಳ್ಳಿ ಗ್ರಾಮದ 17 ವರ್ಷದ ಭವಾನಿ ವೈಜಿನಾಥ ಮೇತ್ರೆ ಮತ್ತು 14 ವರ್ಷದ ಸಂಧ್ಯಾರಾಣಿ ಮೃತಪಟ್ಟವರು.

ಕುಟುಂಬದ ಹಲವು ಸದಸ್ಯರು ಜೂನ್ 9ರಂದು ಮನೆಯಲ್ಲಿ ಊಟ ಮಾಡಿದ ಬಳಿಕ ಮಾವಿನ ಹಣ್ಣು ಸೇವಿಸಿದ್ದಾರೆ. ಬಳಿಕ ಹಲವರ ಆರೋಗ್ಯದಲ್ಲಿ ಏರುಪೇರಾಗಿದೆ. ತಾಯಿ ಇಂದುಮತಿ ಹಾಗೂ ಐವರು ಪುತ್ರಿಯರು ಮಾವಿನ ಹಣ್ಣು ಸೇವಿಸಿದ ಬಳಿಕ ವಾಂತಿ ಮತ್ತು ಭೇದಿಯಿಂದ ಅಸ್ವಸ್ಥಗೊಂಡಿದ್ದರು. ಕುಟುಂಬದ ಎಲ್ಲಾ ಸದಸ್ಯರನ್ನು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿ



ಯಾಗದೆ ಭವಾನಿ ಮತ್ತು ಸಂಧ್ಯಾರಾಣಿ ಮೃತಪಟ್ಟಿದ್ದಾರೆ. ಇನ್ನೊಬ್ಬ ಸಹೋದರಿ ವಿಜಯಶ್ರೀ (19) ಗಂಭೀರ ಸ್ಥಿತಿಯಲ್ಲಿದ್ದಾರೆ. ತಾಯಿ ಹಾಗೂ ಮತ್ತೊಬ್ಬ ಸಹೋದರಿ ಚೇತರಿಸಿಕೊಂಡಿದ್ದಾರೆ.

ಸಾವಿಗೆ ನಿಖರ ಕಾರಣ ಏನು ಎಂಬುದು ಮರಣೋತ್ತರ ಪರೀಕ್ಷೆ ವರದಿ ಬಂದ ಬಳಿಕ ತಿಳಿಯಲಿದೆ. ಹೈದರಾಬಾದ್‌ನ ನಾರಾಯಣಗುಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಾವಿನ ವದಂತಿ: ಸುಮ್ಮನೆ ಬಿಡಲ್ಲ ಎಂದ ದೊಡ್ಡಣ್ಣ

**ಬೆಂಗಳೂರು:** ಕಿಡಿಗೇಡಿಗಳು ಹಿರಿಯ ನಟ ದೊಡ್ಡಣ್ಣ ಅವರು ಸಾವನ್ನಪ್ಪಿದ್ದಾರೆ ಎಂದು ಸುಳ್ಳು ಸುದ್ದಿ ಹಬ್ಬಿಸಿದ್ದರು. ಈಗ ದೊಡ್ಡಣ್ಣ ಅವರೇ, ನಾನು ಆರೋಗ್ಯವಾಗಿದ್ದೇನೆ. ಸುಳ್ಳು ಸುದ್ದಿ ಹಬ್ಬಿಸಿದವರನ್ನು ಸುಮ್ಮನೇ



ಬಿಡಲ್ಲ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

ವಿಡಿಯೋ ಮೂಲಕ ಮಾಹಿತಿ ನೀಡಿರುವ ಅವರು, ಬೆಳಿಗ್ಗೆ ನಾನು ಎದ್ದೇಳುವ ಮುಂಚೆಯೇ ಯಾರೋ ಅವಿವೇಕಿಗಳು ನಾನು ನಿಧನ ಎಂದು ಸುದ್ದಿ ಹಬ್ಬಿಸಿದ್ದರು. ಅದು ಶುದ್ಧ ಸುಳ್ಳು. ನಾನು ಆರೋಗ್ಯವಾಗಿ, ನೆಮ್ಮದಿಯಾಗಿದ್ದೇನೆ. ಬೆಳಿಗ್ಗೆಯಿಂದಲೂ ಮಕ್ಕಳು, ಮೊಮ್ಮಕ್ಕಳು ಸೇರಿದಂತೆ ಎಲ್ಲರೂ ಬಿಟ್ಟುಬಿಡದೇ ಕರೆ ಮಾಡುತ್ತಿದ್ದಾರೆ. ನಿಮ್ಮ ಆಶೀರ್ವಾದ ಇರುವವರೆಗೂ ನೂರುಕಾಲ ಚೆನ್ನಾಗಿರುತ್ತೇನೆ ಅಂತಾ ನಂಬಿದ್ದೇನೆ ಎಂದು ಹೇಳಿದ್ದಾರೆ. ಈ ರೀತಿ ಸುಳ್ಳು ಸುದ್ದಿ ಹಬ್ಬಿಸಿದ ಕಿಡಿಗೇಡಿಗಳನ್ನು ಸುಮ್ಮನೇ ಬಿಡಲ್ಲ. ಪುಟ 2ಕ್ಕೆ

## ಮಗು ಕೊಲೆ ಪ್ರಕರಣ: 3 ಪೊಲೀಸರ ಅಮಾನತು


**ಬೆಂಗಳೂರು:** ತಾಯಿ ಮತ್ತು ಆಕೆಯ ಪ್ರಿಯಕರನಿಂದ ಮಗುವಿನ ಕೊಲೆ ಪ್ರಕರಣದಲ್ಲಿ ಕರ್ತವ್ಯ ಲೋಪ ಎಸಗಿದ ಮತ್ತು ಕಾನೂನು ಉಲ್ಲಂಘಿಸಿದ ಮೂವರು ಪೊಲೀಸ್ ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಗೃಹ ಸಚಿವರು, ಇಲಾಖೆಯ ಉದಾಸೀನತೆ ಹಾಗೂ ಕಾನೂನು ಬಾಹಿರ ನಡೆಗಳನ್ನು ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಸಂದೇಶ ರವಾನಿಸಿದ್ದಾರೆ.

ಕಳೆದ ಏಪ್ರಿಲ್ 4ರಂದೇ ಮಗುವಿನ ಮರಣೋತ್ತರ ಪರೀಕ್ಷೆ ವರದಿ ಬಂದಿತ್ತು. ವರದಿಯಲ್ಲಿ ಅದು ಅನುಮಾನಾಸ್ಪದ ಸಾವು ಎಂದು ದೃಢಪಟ್ಟ ತಕ್ಷಣವೇ ಅಧಿಕಾರಿಗಳು ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಬೇಕಾಗಿತ್ತು.

ಆದರೆ, ಕಾನೂನುಬಾಹಿರವಾಗಿ ಪ್ರಕರಣವನ್ನು ಯುಡಿಆರ್ ವ್ಯಾಪ್ತಿಯಲ್ಲೇ ಇಟ್ಟುಕೊಂಡು ವಿಳಂಬ ಧೋರಣೆ ಅನುಸರಿಸಿದ್ದಾರೆ. ಇದು ಗಂಭೀರ ಕರ್ತವ್ಯ ಲೋಪ ಎಂದು ಸಚಿವರು ತಿಳಿಸಿದರು.

ಕರ್ತವ್ಯ ನಿರ್ಲಕ್ಷ್ಯ ತೋರಿದ ಕಾಡುಗೋಡಿ ಠಾಣೆ



ಪೊಲೀಸ್ ಇನ್ಸ್ಪೆಕ್ಟರ್, ಸಬ್ ಇನ್ಸ್ಪೆಕ್ಟರ್ ಹಾಗೂ ರೈಟರ್ ಸೇರಿದಂತೆ ಮೂವರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ. ಪ್ರಕರಣದ ಪ್ರಮುಖ ಆರೋಪಿಗಳಾದ ಮೋಹನ್ ಮತ್ತು ಪ್ರಿಯಾಂಕ ಅವರನ್ನು ಪೊಲೀಸರು ಬಂಧಿಸಿದ್ದು ತನಿಖೆ ಪ್ರಗತಿಯಲ್ಲಿದೆ ಎಂದು ಹೇಳಿದರು.

## ರಾಜ್ಯದ ಅಭಿವೃದ್ಧಿಗೆ ಸಹಕಾರ ಅಗತ್ಯ

### ಪ್ರಧಾನಿ ಮೋದಿ ಭೇಟಿ ಮಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

**ನವದೆಹಲಿ:** ದೆಹಲಿಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ರಾಜ್ಯದ ಮೂಲಸೌಕರ್ಯ, ನೀರಾವರಿ ಮತ್ತು ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರದ ಅನುಮೋದನೆ, ಆರ್ಥಿಕ ನೆರವು ಹಾಗೂ ಸಹಕಾರ ಕೋರಿ 18 ಅಂಶಗಳ ಮನವಿಪತ್ರ ಸಲ್ಲಿಸಿದರು.

ಬೆಂಗಳೂರಿನ ಹೆಚ್ಚುತ್ತಿರುವ ಮೂಲಸೌಕರ್ಯ ಅಗತ್ಯಗಳನ್ನು ಪೂರೈಸಲು 26,000 ಕೋಟಿ ರೂ. ವಿಶೇಷ ಅನುದಾನವನ್ನು ನೀಡುವಂತೆ ಸಿಎಂ ಮನವಿ ಮಾಡಿದ್ದಾರೆ. ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಯೋಜನೆಗೆ ಶೀಘ್ರ ಅನುಮೋದನೆ ನೀಡುವುದು ಹಾಗೂ ಬೆಂಗಳೂರು ಮೆಟ್ರೋ ಮತ್ತು ಉಪನಗರ ರೈಲು ಜಾಲದ ವಿಸ್ತರಣೆಗೆ ಹೆಚ್ಚುವರಿ ಆರ್ಥಿಕ ನೆರವು ಒದಗಿಸುವಂತೆ ಕೋರಿದ್ದಾರೆ.

ಪ್ರಮುಖ ನೀರಾವರಿ ಯೋಜನೆಗಳಿಗೆ ಕೇಂದ್ರದ ಬೆಂಬಲ, ಬಾಕಿ ಅನುದಾನಗಳ ಬಿಡುಗಡೆ, ಬೆಂಗಳೂರಿನ



ಮೂಲಸೌಕರ್ಯ ಅಭಿವೃದ್ಧಿ ಹಾಗೂ ರಾಯಚೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ ಸ್ಥಾಪನೆಗೆ ಒತ್ತು ನೀಡಲಾಗಿದೆ.

ಸ್ಥಳೀಯ ಸಂಸ್ಥೆಗಳಿಗೆ ಬಾಕಿ ಇರುವ ಅನುದಾನ ವಿಷಯವನ್ನೂ ಅವರು ಪ್ರಸ್ತಾಪಿಸಿದ್ದಾರೆ. 2025–26ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಡಿ ಗ್ರಾಮ ಪಂಚಾಯಿತಿಗಳಿಗೆ ನೀಡಬೇಕಿರುವ 2,860 ಕೋಟಿ ರೂಪಾಯಿ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡುವಂತೆ ಅವರು ಮನವಿ ಮಾಡಿದ್ದಾರೆ. ಈ ವಿಳಂಬದಿಂದ ಗ್ರಾಮೀಣ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಮೂಲಸೌಕರ್ಯ ಅಭಿವೃದ್ಧಿ ಪುಟ 2ಕ್ಕೆ

## ಮೊದಲ ಪುಟದಿಂದ

## ಶೌಚಗುಂಡಿ ಸ್ವಚ್ಛತೆಗೆ ಯಂತ್ರ ಬಳಸಿ: ಸಚಿವ ಖಂಡ್ರೆ ಸೂಚನೆ

ದೇವನಹಳ್ಳಿಯಲ್ಲಿ ಶುಕ್ರವಾರ ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇಂದಿಗೂ 7483 ಶೌಚಗುಂಡಿ ಕಾರ್ಮಿಕರು (ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್) ಇದ್ದಾರೆ ಎಂದು ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ತಿಳಿಸಿದ್ದಾರೆ. ಮಲಗುಂಡಿ ಸ್ವಚ್ಛತೆಯನ್ನು ಕರ್ಮಚಾರಿಗಳ ಕೈಯಿಂದ ಮಾಡಿಸಿದರೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು. ಯಂತ್ರಗಳ ಮೂಲಕವೇ ಸ್ವಚ್ಛತೆ ಮಾಡಬೇಕೆಂದು ಸೂಚಿಸಲಾಗಿದೆ. ಇದಕ್ಕಾಗಿ ಅಗತ್ಯವಿರುವ ಜೆಟ್ಟಿಂಗ್, ಸಕ್ಕಿಂಗ್ ಯಂತ್ರ ಖರೀದಿಸಲಾಗುವುದು ಎಂದು ತಿಳಿಸಿದರು. ನಾನು ಪೌರಾಡಳಿತ ಸಚಿವರಾಗಿದ್ದಾಗ ಮಲತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಿಸಲು ಯೋಜನೆ ರೂಪಿಸಿದ್ದೆ ಎಂದರು.

## ರಾಜ್ಯದ ಅಭಿವೃದ್ಧಿಗೆ ಸಹಕಾರ ಅಗತ್ಯ

ಹಾಗೂ ಸಾರ್ವಜನಿಕ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಮುಖ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದ ಸಹಕಾರ ಮತ್ತು ಸಕಾಲಿಕ ಆರ್ಥಿಕ ನೆರವು ಅಗತ್ಯವಾಗಿದೆ ಎಂದು ಡಿ.ಕೆ ಶಿವಕುಮಾರ್ ಮನವಿ ಮಾಡಿದ್ದಾರೆ.

## ಸಾವಿನ ವದಂತಿ: ಸುಮ್ಮನೆ ಬಿಡಲ್ಲ ಎಂದ ದೊಡ್ಡಣ

ಅವರನ್ನು ಬೆನ್ನತ್ತಿ ತಕ್ಕ ಶಿಕ್ಷೆ ಕೊಡಿಸುತ್ತೇನೆ ಎಂದು ತಿಳಿಸಿದ್ದಾರೆ.

## ಮೂಕಾಂಬಿಕೆಗೆ ಬೆಳ್ಳಿ ಖಡ್ಗ ನೀಡಿದ ಮುಖ್ಯಮಂತ್ರಿ ವಿಜಯ್

ಸಿಎಂಗೆ ಅರ್ಚಕರು ರಕ್ಷಾ ದಾರ ಕಟ್ಟಿದರು. ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು, ಹೂಗುಚ್ಛ ನೀಡಿ ಸ್ವಾಗತಿಸಿದರು. ಮಂತ್ರಘೋಷದೊಂದಿಗೆ ಕ್ಷೇತ್ರದೊಳಗೆ ಅರ್ಚಕ ವೃಂದ ಬರಮಾಡಿಕೊಂಡಿತು. ವಿಜಯ್ ಅವರು ಸಹ ದೇವಸ್ಥಾನದ ಸಂಪ್ರದಾಯದಂತೆ ಶರ್ಟ್ ಬಿಚ್ಚಿ, ಶಲ್ಯ ಧರಿಸಿ ದೇವಸ್ಥಾನ ಪ್ರವೇಶಿಸುವ ಮೂಲಕ ಶಿಷ್ಟಾಚಾರ ಪಾಲನೆ ಮಾಡಿದರು. ಪ್ರಧಾನ ಅರ್ಚಕ ರಾಮಚಂದ್ರ ಅಡಿಗ ಅವರ ನೇತೃತ್ವದಲ್ಲಿ ಸಂಕಲ್ಪ ಪೂಜೆ ನೆರವೇರಿಸಲಾಯಿತು. ಸಿಎಂ ವಿಜಯ್ ಸಂಕಲ್ಪ ಪೂಜೆ ಮಾಡಿದರು. ವಿಶೇಷ ವಿಮಾನದಲ್ಲಿ ಶುಕ್ರವಾರ ಮಧ್ಯಾಹ್ನ ದೆಹಲಿಯಿಂದ ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ವಿಜಯ್ ಅವರು, ಅಲ್ಲಿಂದ ಕಾರಿನಲ್ಲಿ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿದರು.

## ಗಾಳಿ ಸುದ್ದಿ ನಂಬಬೇಡಿ:

ವಿಷಯವಾಗಿರುವುದರಿಂದ ಮತ್ತು ಕೋಟ್ಯಂತರ ಭಕ್ತರ ನಂಬಿಕೆಗೆ ಸಾಕ್ಷಿಯಾಗಿರುವುದರಿಂದ ಇಂತಹ ಅನುಮಾನಗಳಿಗೆ ಉತ್ತರಿಸುವುದು ನನ್ನ ಕರ್ತವ್ಯವೂ ಆಗಿದೆ ಎಂದು ಪ್ರಕಾಶ್ ರಾಜ್ ಪೋಸ್ಟ್ ಆರಂಭಿಸಿದ್ದಾರೆ. ನಾನು ಸದ್ಯ ಊರಿನಲ್ಲಿ ಇಲ್ಲ. ಇನ್ನೆರಡು ದಿನಗಳಲ್ಲಿ ನಾನೇ ಖುದ್ದಾಗಿ ಬಂದು ಮಾಧ್ಯಮ ಮಿತ್ರರ ಮೂಲಕ ಇದಕ್ಕೆ ಸೂಕ್ತ ಪ್ರತಿಕ್ರಿಯೆ ನೀಡಲಿದ್ದೇನೆ. ಅಲ್ಲಿಯವರೆಗೆ ಗಾಳಿ ಸುದ್ದಿಗಳನ್ನು ದಯವಿಟ್ಟು ಯಾರೂ ನಂಬಬೇಡಿ ಎಂದು ಕೋರಿದ್ದಾರೆ.

ಧರ್ಮಸ್ಥಳ ಬುರುಡೆ ಪ್ರಕರಣದ ಪ್ರಮುಖ ಆರೋಪಿಯಾಗಿದ್ದ ಚಿನ್ನಯ್ಯ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಪ್ರಕರಣದ ಹಿಂದೆ ನಟ ಪ್ರಕಾಶ್ ರಾಜ್, ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ವಿಠಲ್ ಗೌಡ, ಜಯಂತ್, ಯೂಟ್ಯೂಬರ್‌ಗಳಾದ ಸಮೀರ್ ಎಂ.ಡಿ, ಅಜಯ್, ದಿನೇಶ್ ಸೇರಿದಂತೆ ಹಲವು ಪ್ರಭಾವಿ ವ್ಯಕ್ತಿಗಳಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾನೆ.

## ಅನುದಾನ ತಾರತಮ್ಯ ಮಾಡಿಲ್ಲ

ಕಟ್ಟಡಗಳ ನಿರ್ಮಾಣಕ್ಕೆ ಪೂರ್ವಭಾವಿ ಆದೇಶವನ್ನು ಹೊರಡಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಈ ಆದೇಶವು ಅನುದಾನದ ಬಿಡುಗಡೆಯ ಆದೇಶ ಅಲ್ಲ. ಅನುದಾನ ಬಿಡುಗಡೆ ಮಾಡಲು ಸರ್ಕಾರದಿಂದ ಮಾರ್ಗ ಸೂಚಿಗಳನ್ನು ಹೊರಡಿಸಲಾಗಿದೆ. ಈ ಮಾರ್ಗಸೂಚಿಗಳ ಅನುಸಾರ ಅನುದಾನವನ್ನು 3 ಹಂತದಲ್ಲಿ ಪ್ರಗತಿಯನ್ನು ಪರಿಶೀಲನೆ ಮಾಡಿ ಅನುದಾನ ಬಿಡುಗಡೆ ಮಾಡಲಾಗುವುದು. ಈ ರೀತಿ ಅನುದಾನವನ್ನು ಬಿಡುಗಡೆ ಮಾಡುವಾಗ ಸರ್ಕಾರದ ಆದೇಶಕ್ಕೆ ಪ್ರವರ್ಗ 1 ಮತ್ತು ಪ್ರವರ್ಗ 2ಎನಲ್ಲಿ ಬರುವ ಜಾತಿಗಳಿಗೆ ಶೇ.70ರಷ್ಟು ಮತ್ತು ಪ್ರವರ್ಗ 3ಎ ಮತ್ತು 3ಬಿನಲ್ಲಿ ಬರುವ ಜಾತಿಗಳಿಗೆ ಶೇ.30ರಷ್ಟು ಅನುದಾನವನ್ನು ಮಂಜೂರು ಮಾಡಲಾಗುವುದು ಎಂದು ತಿಳಿಸಿದ್ದಾರೆ.

## ಮೀನಾಕ್ಷಿಗೆ ಹಿನ್ನಡೆ

ಪ್ರಕಾಶ್ ರಾಜ್ ಅವರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಬೇಕು. ಹಿಂದೂಗಳ ಧಾರ್ಮಿಕ ಭಾವನೆಗೆ ನೋವುಂಟು ಮಾಡಿದ್ದಕ್ಕಾಗಿ ಪೊಲೀಸರು ಪ್ರಕಾಶ್ ರಾಜ್ ವಿರುದ್ಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಬೇಕು ಎಂದು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು. ಕಾಂಗ್ರೆಸ್ ನಾಯಕರು, ಎಡಪಂಥೀಯರು, ಬುದ್ಧಿಜೀವಿಗಳು, ಮುಸ್ಲಿಮರು ಮತ್ತು ಕ್ರಿಶ್ಚಿಯನ್ನರ ಒಂದು ಭಾಗ ಹಿಂದೂ ಧರ್ಮಕ್ಕೆ ಅಪಖ್ಯಾತಿ ತರುವ ಪಿತೂರಿಯಲ್ಲಿ ಭಾಗಿಯಾಗಿದೆ ಎಂದು ಆರೋಪಿಸಿದರು.

## ರಾಜಿ ಮಾಡಿಕೊಳ್ಳಿ ಸುಪ್ರೀಂ ಸಲಹೆ

ಎಂಬುದು ನ್ಯಾಯಾಲಯದ ಅಭಿಪ್ರಾಯವಾಗಿದೆ" ಎಂದು ಹೇಳಿದೆ.

**ಸಂಧಾನಕಾರರಾಗಿ ನಿವೃತ್ತ ನ್ಯಾಯಮೂರ್ತಿ ನೇಮಕ :**

ಇಬ್ಬರು ಉನ್ನತ ಅಧಿಕಾರಿಗಳ ನಡುವಿನ ವಿವಾದ ಮತ್ತು ಅವರ ಹುದ್ದೆಗಳ ಘನತೆಯನ್ನು ಗಮನದಲ್ಲಿಟ್ಟುಕೊಂಡ ಸುಪ್ರೀಂ ಕೋರ್ಟ್, ಈ ಪ್ರಕರಣವನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಲು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಕುರಿಯನ್ ಜೋಸೆಫ್ ಅವರನ್ನು ಸಂಧಾನಕಾರರನ್ನಾಗಿ ನೇಮಿಸಿದೆ.

## ವಿದೇಶಿ ಶಕ್ತಿಗಳ ಕೈವಾಡ ಶಂಕೆ

ಕಾಂಗ್ರೆಸ್ ಸರ್ಕಾರ ಇಂಥ ಷಡ್ಯಂತ್ರಗಳಿಗೆ ಶಕ್ತಿ ತುಂಬುವ ಕೆಲಸ ಮಾಡಿರುವುದು ನಮಗೆ ನೋವು ತಂದಿದೆ ಎಂದು ಟೀಕಿಸಿದರು.

ಯಾರು ಷಡ್ಯಂತ್ರದ ಹಿಂದಿದ್ದರು? ಯಾರು ಬಂಡವಾಳ ಹಾಕಿದ್ದರು? ಅಂದಿನ ಸಿಎಂ ಯಾಕೆ ಕಣ್ಮುಚ್ಚಿ ಎಸ್‌ಐಟಿಗೆ ಕೊಟ್ಟರು? ಇದೆಲ್ಲಾ ಸತ್ಯಾಸತ್ಯತೆ ಹೊರಕ್ಕೆ ಬರಬೇಕು ಎಂದು ಆಗ್ರಹಿಸಿದರು.

ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದನ್ನೂ ಪರಾಮರ್ಶೆ ಮಾಡದೇ ಯಾರೋ ಬೀದಿಯಲ್ಲಿ ಹೋಗುವವರು ಹೇಳಿದರೆಂದು ಎಸ್‌ಐಟಿ ತನಿಖೆಗೆ ಆದೇಶಿಸಿದ್ದು ಸಮರ್ಪಕ ನಿರ್ಧಾರ ಆಗಿರಲಿಲ್ಲ ಎಂದು ಆಕ್ಷೇಪಿಸಿದರು.

ಧರ್ಮಸ್ಥಳದ ಪ್ರಕರಣದಲ್ಲಿ ಸಾಕಷ್ಟು ವಿಷಯಗಳು ಈಗ ಬೆಳಕಿಗೆ ಬಂದಿವೆ. ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದಾಗ ಏಕಾಏಕಿ ಎಸ್‌ಐಟಿ ತನಿಖೆಗೆ ಆದೇಶಿಸಿದಾಗ ಸಾಕಷ್ಟು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿತ್ತು. ಸಿದ್ದರಾಮಯ್ಯ ಒಂದು ದಿನ ಮೊದಲು ಯಾವುದೇ ತನಿಖೆ ಅವಶ್ಯಕತೆ ಇಲ್ಲ ಎಂದಿದ್ದರು. ಪಟ್ಟಭದ್ರ ಹಿತಾಸಕ್ತಿಗಳು ಅವರನ್ನು ಸ್ವಗೃಹದಲ್ಲಿ ಭೇಟಿ ಮಾಡಿದ ನಂತರ ಮುಖ್ಯಮಂತ್ರಿಗಳೇ ಎಸ್‌ಐಟಿ ತನಿಖೆಗೆ ಆದೇಶಿಸಿದ್ದರು ಎಂದು ಆರೋಪಿಸಿದರು.

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಎಸ್‌ಐಆರ್ ಬಗ್ಗೆ ಚರ್ಚೆಗಳಾಗಿವೆ. ಕೇಂದ್ರ ಚುನಾವಣಾ ಆಯೋಗ ತೀರ್ಮಾನಿಸಿದ ಬಳಿಕ ಎಸ್‌ಐಆರ್ ನಡೆಯುತ್ತಿದೆ. ರಾಜ್ಯ ಸರ್ಕಾರ ಇದಕ್ಕೆ ಕಲ್ಲು ಹಾಕುವ ಕೆಲಸ ಮಾಡುತ್ತಿದೆ ಎಂಬ ಅಭಿಪ್ರಾಯ ಎಲ್ಲ ಮುಖಂಡರಿಂದ ವ್ಯಕ್ತವಾಗಿದೆ ಎಂದು ಪ್ರಶ್ನೆಗೆ ಉತ್ತರಿಸಿದರು.

ರಾಜ್ಯ ಸರಕಾರವು ಬಿಎಲ್‌ಒಗಳಿಗೆ ಸಮರ್ಪಕ ಆದೇಶ, ಮಾರ್ಗದರ್ಶನ ಮಾಡುತ್ತಿಲ್ಲ. ಡೂಪ್ಲಿಕೇಟ್ ಹೆಸರು, ಸತ್ತವರ ಹೆಸರು ಕೈಬಿಡುವ ಕೆಲಸ ನಡೆಯಬೇಕಿದೆ. ಬಿಎಲ್‌ಒಗಳನ್ನು ದುರುಪಯೋಗ ಪಡಿಸಿಕೊಂಡು, ಸ್ವಚ್ಛಗೊಳಿಸುವ ಕಾರ್ಯ ಕರ್ನಾಟಕದಲ್ಲಿ ಸಮರ್ಪಕವಾಗಿ ಆಗುತ್ತಿಲ್ಲ ಎಂದು ಆರೋಪಿಸಿದರು.

# ಅದ್ದೂರಿಯಾಗಿ ಲಲಿತಾಭಿಮಾನಂದನೆ

ಮೈಸೂರು: ಕರ್ನಾಟಕ ರಾಜ್ಯ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಲಲಿತಾ ಜಿ.ಟಿ.ದೇವೇಗೌಡರನ್ನು ಸ್ವಾಮೀಜಿಗಳ ಸಮ್ಮುಖದಲ್ಲಿ ಸಂಭ್ರಮದಿಂದ ಗೌರವಪೂರ್ವಕ ಅಭಿನಂದಿಸುವ ಮೂಲಕ ಲಲಿತಾಭಿನಂದನೆ ಕಾರ್ಯಕ್ರಮ ಜರುಗಿತು.

ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ನೆನಪಿನ ಸುರಳಿ ಕಿರು ಹೊತ್ತಿಗೆ ಬಿಡುಗಡೆ ಮಾಡಿ ಮಾತನಾಡಿ, ಲಲಿತಕ್ಕ ಸರಳತೆ ಮತ್ತು ಎಲ್ಲರೊಂದಿಗೆ ಅನ್ಯೋನ್ಯತೆಯಿಂದ ಬೆರೆಯುವಂತ ಗುಣಗಳ ಗುಣಗಾನ ಮಾಡಿ ಜಿ.ಟಿ.ದೇವೇಗೌಡರ ರಾಜಕೀಯ ಬೆಳವಣಿಗೆಯಲ್ಲಿ ಲಲಿತಕ್ಕನ ಪ್ರೇರಣೆ ಮತ್ತು ಪ್ರೋತ್ಸಾಹ ಅಗಾಧವಾಗಿದೆ. ಸಾಮಾಜಿಕ ಅಥವಾ ರಾಜಕೀಯ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರಬೇಕೆಂದರೆ ಹೆಚ್ಚು, ಹೆಚ್ಚು ಮಾತಾಡಬೇಕು. ಮಾತಾಡದಿದ್ದರೆ ಹಿಂದೆ ತಳ್ಳಿಬಿಡಿತ್ತಾರೆ. ಸುಳ್ಳೋ ನಿಜವೋ ಮಾತಾಡುತ್ತಿರಬೇಕು. ಸಹಕಾರ ಕ್ಷೇತ್ರದಲ್ಲಿರುವ ಲಲಿತಕ್ಕ ಹೆಚ್ಚು ಮಾತಾಡಬೇಕು. ಆ ದಿಕ್ಕಿನಲ್ಲಿ ಆಲೋಚನೆ ಮಾಡಬೇಕು. ನೀವು ಅನೇಕ ಮಹಿಳೆಯರಿಗೆ ಪ್ರೇರಣೆ ಆಗಿದ್ದೀರಿ. ನಿಮ್ಮ ಗುಣವನ್ನು ಇತರರು ಬಳಸಿಕೊಳ್ಳಬೇಕಿದೆ ಎಂದು ಸಲಹೆ ನೀಡಿದರು.

ಅಭಿನಂದನಾ ಭಾಷಣ ಮಾಡಿದ ವಿಶ್ರಾಂತ ಪ್ರಾಂಶುಪಾಲ ಪ್ರೊ. ಎಂ.ಕೃಷ್ಣೇಗೌಡ, ಲಲಿತಕ್ಕನಿಗೆ ಪ್ರಶಸ್ತಿ ಬಂದ ನೆಪದಲ್ಲಿ ಅಭಿನಂದನೆ ಏರ್ಪಡಿಸಿರುವುದು ಒಂದು ನೆಪ. ಕವಿ ಕುವೆಂಪು ಹೇಳಿದಂತೆ ಮನೆ ಮನೆಯ ತಪಸ್ವಿನಿಯರಾದ ಗೃಹಣಿಯರನ್ನು ಗೌರವಿಸುವ ಕೆಲಸವನ್ನು ಈ ಮೂಲಕ ಮಾಡಲಾಗುತ್ತಿದೆ. ಕುವೆಂಪು ಅವರು ಹೇಳಿದಂತೆ ಶ್ರಮಿಕರು, ಸತ್ಕಾರ್ಯದಲ್ಲಿ ತೊಡಗಿಸಿಕೊಂಡವರು, ನಾಯಕರ ಮನೆಯ ಮಹಿಳೆಯರು ಕೇವಲ ಮಹಿಳೆಯರಲ್ಲ ಅವರು ಆ ಕುಟುಂಬದಲ್ಲಿ ಸರ್ವಸ್ವವೂ ಆಗಿರುವ ಮನೆ ಮನೆ ತಪಸ್ವಿನಿಗಳಾಗಿದ್ದಾರೆ. ಲಲಿತಾ ಅವರು ಅಂತಹ ತಪಸ್ವಿನಿಯರಲ್ಲಿ ಒಬ್ಬರಾಗಿದ್ದಾರೆ ಎಂದರು. ಕೃಷಿ ಸಾಧಕಿ ಡಾ.ಕವಿತಾ ಮಿಶ್ರಾ ಮಾತನಾಡಿ, ಹೆಣ್ಣು ಮಗಳು ಸಮಾಜದಲ್ಲಿ ಸಾಧಿಸಲು ಸುಲಭದಲ್ಲಿ ಬಿಡುವುದಿಲ್ಲ. ಬಹಳಷ್ಟು ನಿರೀಕ್ಷಿಸಲ್ಪಟ್ಟವರು



ಹೆಣ್ಣು ಮಕ್ಕಳು. ಎಲ್ಲ ಸವಾಲುಗಳ ನಡುವೆ ಸಾಧಿಸಿದ ಲಲಿಕ್ಕ ಸಹಕಾರ ಬ್ಯಾಂಕ್ ಆರಂಭಿಸಿ ಹೆಣ್ಣು ಮಕ್ಕಳಿಗೆ ದಾರಿದೀಪವಾಗಿದ್ದಾರೆ ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಲಲಿತಾ ಜಿ.ಟಿ.ದೇವೇಗೌಡ, ಬಯಸದೇ ಸಹಕಾರ, ರಾಜಕೀಯ ಕ್ಷೇತ್ರಕ್ಕೆ ಬಂದೆ. ಮನೆ ಕೊಡಿಸುವುದು ರಸ್ತೆ, ಸೇರಿದಂತೆ ನಾನಾ ಕೆಲಸ ಮಾಡಿದೆ. ಇದಲ್ಲದೇ ಸಹಕಾರ ಕಟ್ಟಡ ಕಟ್ಟಿಸುವುದು ಸೇರಿ ನಾನಾ ಕೆಲಸ ಮಾಡಿದೆ. ಇದೆಲ್ಲವೂ ನನ್ನಿಂದ ಸಾಧ್ಯವಾಗುತ್ತದೆ ಎಂದು ನಾನು ಭಾವಿಸಿರಲಿಲ್ಲ ಎಂದರು. ಆದಿಚುಂಚನಗಿರಿ ಮಠದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ರಾಮಕೃಷ್ಣ ಆಶ್ರಮದ ಶ್ರೀ ಮುಕ್ತಿದಾನಂದಜೀ ಮಹಾರಾಜ್, ಬೇಬಿ ಮಠದ ಶ್ರೀ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ, ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಚಿತ್ರ ನಿರ್ಮಾಪಕಿ ಅಶ್ವಿನಿ ಪುನೀತ್ ರಾಜ್‌ಕುಮಾರ್, ವಿಧಾನ ಪರಿಷತ್ ಸದಸ್ಯ ವಿವೇಕಾನಂದ, ಮುಡಾ ಮಾಜಿ ಅಧ್ಯಕ್ಷ ವಿಜಯಕುಮಾರ್, ಸೌಮ್ಯ ರಮೇಶ್ ಮುಂತಾದವರಿದ್ದರು. ಲೇಖಕ ಹಾಲತಿ ಸೋಮಶೇಖರ್ ಸ್ವಾಗತಿಸಿದರು. ಸಭಾ ಕಾರ್ಯಕ್ರಮದ ಬಳಿಕ ನೃತ್ಯ ಚೂಡಾಮಣಿ ನಿರುಪಮಾ ರಾಜೇಂದ್ರ ಮತ್ತು ತಂಡದಿಂದ ನೃತ್ಯ ಸಂಭ್ರಮ ವೈಭವ ನೆರವೇರಿತು

# ಮಕ್ಕಳು ಭವಿಷ್ಯದ ನಿರ್ಮಾತೃಗಳು

## ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರ.ನ್ಯಾಯಾಧೀಶ ಬಸವರಾಜ್ ಕರೆ

ಮಡಿಕೇರಿ: ಮಕ್ಕಳು ನಾಳಿನ ಭವಿಷ್ಯದ ಪ್ರಜೆಗಳಾಗಿದ್ದು, ಅವರಿಗೆ ಸೂಕ್ತ ಶಿಕ್ಷಣ, ಆರೋಗ್ಯ, ಆಟ-ಪಾಠ ಹಾಗೂ ಸುರಕ್ಷಿತ ಬಾಲ್ಯ ದೊರಕಿಸಿಕೊಡುವುದು ಮೂಲಭೂತ ಹಕ್ಕಾಗಿದೆ ಎಂದು ಮಡಿಕೇರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಸಿ.ಕೆ. ಬಸವರಾಜ್ ಅವರು ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಡತನ, ಅಜ್ಞಾನ, ನಿರುದ್ಯೋಗ ಮತ್ತು ಸಾಮಾಜಿಕ ಸಮಸ್ಯೆಗಳ ಕಾರಣದಿಂದ ಅನೇಕ ಮಕ್ಕಳು ಕಾರ್ಖಾನೆ, ಹೋಟೆಲ್ ಹಾಗೂ ಅಂಗಡಿಗಳಲ್ಲಿ ದುಡಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದನ್ನು ಕಟ್ಟುನಿಟ್ಟಾಗಿ ತಪ್ಪಿಸಿ, 14 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳುಹಿಸಬೇಕು ಎಂದು ಅವರು ಸಲಹೆ ನೀಡಿದರು.

### ಶಿಕ್ಷಣ ವಂಚಿತರಾಗಬಾರದು: ಸರ್ಕಾರದ ಯೋಜನೆಗಳ ಸದುಪಯೋಗ

ಮಕ್ಕಳು ರಾಷ್ಟ್ರದ ಅಮೂಲ್ಯ ಆಸ್ತಿ. ಶಾಲೆಯಲ್ಲಿ ಕಲಿತು, ಆಟವಾಡಿ ತಮ್ಮ ಪ್ರತಿಭೆಯನ್ನು ಬೆಳೆಸಿಕೊಳ್ಳಬೇಕಾದ ಎಳೆಯ ವಯಸ್ಸಿನಲ್ಲಿ ಅವರು ದುಡಿಮೆಗೆ ತಳ್ಳಲ್ಪಡುತ್ತಿರುವುದು ಅತ್ಯಂತ ವಿಷಾದನೀಯ ಸಂಗತಿ. ಬಡತನ ಹಾಗೂ ಅನಕ್ಷರತೆಯ ನೆಪವೊಡ್ಡಿ ಮಕ್ಕಳನ್ನು ಶಾಲೆಗೆ ಕಳುಹಿಸುವುದನ್ನು ಯಾವುದೇ ಕಾರಣಕ್ಕೂ ನಿಲ್ಲಿಸಬಾರದು. ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರವು ಮಧ್ಯಾಹ್ನದ ಬಿಸಿಯೂಟ, ಉಚಿತ ವಿದ್ಯಾರ್ಥಿನಿಲಯ, ಶಿಷ್ಯವೇತನ ಹಾಗೂ



### ಸಂವಿಧಾನದ ರಕ್ಷಣೆ, ಮಕ್ಕಳ ಹಕ್ಕುಗಳು

ಬಾಲಕಾರ್ಮಿಕ ಪದ್ಧತಿಯಿಂದ ಮಕ್ಕಳ ದೈಹಿಕ, ಮಾನಸಿಕ ಹಾಗೂ ಬೌದ್ಧಿಕ ಬೆಳವಣಿಗೆ ಸಂಪೂರ್ಣವಾಗಿ ಕುಂಠಿತವಾಗುತ್ತದೆ. ಇದರಿಂದ ಅವರ ಭವಿಷ್ಯದ ಕನಸುಗಳು ನಶಿಸಿಹೋಗುತ್ತವೆ. ಸಂವಿಧಾನದ ಅನುಚ್ಛೇದ 24ರ ಅನ್ವಯ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಯಾವುದೇ ಅಪಾಯಕಾರಿ ಉದ್ಯೋಗಗಳಲ್ಲಿ ನೇಮಿಸಿಕೊಳ್ಳುವುದನ್ನು ನಿಷೇಧಿಸಲಾಗಿದೆ ಹಾಗೂ ಅನುಚ್ಛೇದ 21-ಎ ಅಡಿಯಲ್ಲಿ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕು ನೀಡಲಾಗಿದೆ. "ಮಕ್ಕಳ ಕೈಯಲ್ಲಿ ಪುಸ್ತಕ ಇರಬೇಕು, ಕೆಲಸದ ಸಾಧನಗಳಲ್ಲ" ಎಂಬ ಸಂದೇಶ ಎಲ್ಲೆಡೆ ಪಸರಿಸಬೇಕು ಎಂದು ಬಸವರಾಜ್ ಅವರು ವಿವರಿಸಿದರು.

ಉಚಿತ ಬಸ್‌ಪಾಸ್ ವ್ಯವಸ್ಥೆಯಂತಹ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಎಷ್ಟೇ ಕಷ್ಟ ಬಂದರೂ ಪೋಷಕರು ಈ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು ಎಂದು ನ್ಯಾಯಾಧೀಶರು ಕಿವಿಮಾತು ಹೇಳಿದರು.

### ಜಿಲ್ಲೆಯಲ್ಲಿ ರಕ್ಷಣಾ ಕಾರ್ಯಾಚರಣೆ ಹಾಗೂ ಸನ್ಮಾನ

ವಕೀಲ ಯಾಲದಾಳು ಮನೋಜ್ ಬೋಪಯ್ಯ ಅವರು ಬಾಲಕಾರ್ಮಿಕ ಕಾಯ್ದೆಯ ತಿದ್ದುಪಡಿಗಳ ಕುರಿತು ಜಾಗೃತಿ ಮೂಡಿಸಿದರು. ಹಿರಿಯ ಕಾರ್ಮಿಕ ನಿರೀಕ್ಷಕ ಎಂ.ಎಂ. ಯತ್ನಟ್ಟಿ ಮಾತನಾಡಿ, ಕೊಡಗು ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿಸುವ ನಿಟ್ಟಿನಲ್ಲಿ 2017ರಿಂದ ಈವರೆಗೆ 3,455 ತಪಾಸಣೆಗಳನ್ನು ಕೈಗೊಂಡು, 30 ಬಾಲಕಾರ್ಮಿಕರು ಹಾಗೂ 64 ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ ಎಂದು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಮಕ್ಕಳ ರಕ್ಷಣೆಗಾಗಿ ಶ್ರಮಿಸಿದ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಆರ್. ಶೀರಾಝ್ ಅಹ್ಮದ್ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ವಿ. ಅಂಬಿಕಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.


### ಬಾಲ್ಯದ ಹಕ್ಕು, ಮಾದಕ ವಸುಗಳ ಬಗ್ಗೆ ಎಚ್ಚರಿಕೆ

ಕಾರ್ಯಕ್ರಮದಲ್ಲಿ ಪ್ರತಿಜ್ಞಾವಿಧಿ ಬೋಧಿಸಿದ ಹಿರಿಯ ಸಿವಿಲ್ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶುಭ ಅವರು ಮಾತನಾಡಿ, ಮಕ್ಕಳಿಂದ ಬಾಲ್ಯವನ್ನು ಕಸಿದುಕೊಳ್ಳಬಾರದು. ಇತ್ತೀಚೆಗೆ ಮಕ್ಕಳು ಮಾದಕ ವಸ್ತುಗಳಿಗೆ ತುತ್ತಾಗುತ್ತಿರುವುದು ಆತಂಕಕಾರಿ ವಿಷಯವಾಗಿದ್ದು, ಇದಕ್ಕೆ ಕಡಿವಾಣ ಹಾಕಬೇಕಿದೆ. ಮಾದಕ ವಸ್ತುಗಳ ಮಾರಾಟ ಕಂಡುಬಂದಲ್ಲಿ ತಕ್ಷಣವೇ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಎಚ್ಚರಿಸಿದರು. ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ ಅವರು ಮಾತನಾಡಿ, ಮಕ್ಕಳಿಗೆ ಒಳ್ಳೆಯ ನೀತಿ ಮತ್ತು ಮೌಲ್ಯಗಳನ್ನು ಕಲಿಸುವ ಮೂಲಕ ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಬೇಕು ಎಂದರು. ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಬಸವರಾಜು ಅವರು ಪ್ರಸಕ್ತ ಸಾಲಿನ 'ಉತ್ತಮ ಕಲಿಕೆ, ಉಜ್ವಲ ಭವಿಷ್ಯ' ಘೋಷವಾಕ್ಯದ ಕುರಿತು ಮಾಹಿತಿ ನೀಡಿದರು.

# ಬಿಡದಿ ಟೌನ್‌ಶಿಪ್ ಯೋಜನೆ: ಅಂತಿಮ ಅಧಿಸೂಚನೆ ಪ್ರಕಟ

**ಬೆಂಗಳೂರು:** ವಿವಾದದ ನಡುವೆಯೂ ಬಿಡದಿ ಟೌನ್ ಶಿಪ್ ಯೋಜನೆ ಭೂ ಸ್ವಾಧೀನಕ್ಕೆ ರಾಜ್ಯ ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿದೆ. ಈ ಯೋಜನೆಯ ಮೊದಲ ಹಂತದಲ್ಲೇ 500 ಎಕರೆ ಭೂಮಿಯನ್ನು ಸ್ವಾಧೀನಪಡಿಸಿ ಕೊಳ್ಳಲು ಸರ್ಕಾರ ಮುಂದಾಗಿದೆ.

ಮೊದಲ ಹಂತದ ಭೂ ಸ್ವಾಧೀನ ರಾಮನಗರ ಹಾಗೂ ಹಾರೋಹಳ್ಳಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ನಡೆಯಲಿದೆ. ಯೋಜನಾ ವ್ಯಾಪ್ತಿಯ 9 ಕಂದಾಯ ಗ್ರಾಮಗಳ ಪೈಕಿ ಪ್ರಾರಂಭಿಕವಾಗಿ 3 ಗ್ರಾಮಗಳ 518 ಎಕರೆ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿದೆ. ಬಿಡದಿ ಹೋಬಳಿಯ ಕೆಂಪಯ್ಯನಪಾಳ್ಯ, ಮಂಡಲ ಹಳ್ಳಿ ಹಾಗೂ ವಡೇರಹಳ್ಳಿ ಗ್ರಾಮದ ಸುಮಾರು 754 ರೈತರ ಜಮೀನುಗಳ ಭೂಸ್ವಾಧೀನಕ್ಕೆ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಭೂಸ್ವಾಧೀನಕ್ಕೆ ಪರಿಹಾರವಾಗಿ ಪ್ರತಿ ಎಕರೆ ಭೂಮಿಗೆ ಕನಿಷ್ಠ 2.07 ಕೋಟಿಯಿಂದ 2.5 ಕೋಟಿ ರೂಪಾಯಿ ವರೆಗೆ ನೀಡುವಂತೆ ಪ್ರಸ್ತಾಪಿಸಲಾಗಿದೆ. ಮತ್ತೊಂದು ಆಯ್ಕೆಯಾಗಿ ಶೇ.50ರಷ್ಟು ಅಭಿವೃದ್ಧಿಪಡಿಸಿದ ಭೂಮಿಯನ್ನು ರೈತರಿಗೆ ಹಿಂತಿರುಗಿಸಿ ನೀಡುವ ವ್ಯವಸ್ಥೆಯನ್ನೂ ಸರ್ಕಾರ ಸೂಚಿಸಿದೆ. ರೈತರು ಹಣ ಅಥವಾ ಅಭಿವೃದ್ಧಿಪಡಿಸಿದ ಭೂಮಿ ಈ ಎರಡರಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳಬಹುದು.




ರೈತರಿಗೆ ತಮ್ಮ ಭೂಮಿಗೆ ಸಂಬಂಧಿಸಿದ ಎಲ್ಲಾ ಸೂಕ್ತ ದಾಖಲೆಗಳನ್ನು ಸಲ್ಲಿಸಿ ನಿರ್ದಿಷ್ಟ ಸಮಯದಲ್ಲಿ ಪರಿಹಾರ ವನ್ನು ಪಡೆಯಲು ಸೂಚಿಸಲಾಗಿದೆ. ಉದ್ದೇಶಿತ ಬಿಡದಿ ಟೌನ್ ಶಿಪ್ ಯೋಜನೆಗೆ ರೈತರಿಂದ ವಿರೋಧ ವ್ಯಕ್ತವಾಗಿದೆ. ಆದರೂ ನಗರಾಭಿವೃದ್ಧಿ ಇಲಾಖೆ ಅಂತಿಮ ಅಧಿಸೂಚನೆ ಹೊರಡಿಸಿರುವುದು ಗಮನಾರ್ಹವಾಗಿದೆ.

## ಬಾಲಕಾರ್ಮಿಕ ಪದ್ಧತಿ ಸಾಮಾಜಿಕ ಪಿಡುಗು: ರವಿಶಂಕರ್

ಮೈಸೂರು: ಬಾಲಕಾರ್ಮಿಕ ಪದ್ಧತಿ ಸಾಮಾಜಿಕ ಪಿಡುಗಾಗಿದೆ, ಅದು ನಿರ್ಮೂಲನೆ ಯಾದಾಗ ಮಾತ್ರ ದೇಶ ಅಭಿವೃದ್ಧಿ ಸಾಧ್ಯ ಎಂದು ಲಕ್ಷ್ಮಿಪುರಂ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ರವಿಶಂಕರ್ ಹೇಳಿದರು.

ಚಾಮುಂಡಿಪುರಂನಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಾಲ ಭೋಧಿನಿ ಶಾಲೆಯಲ್ಲಿ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಹಾಗೂ ಅಪೂರ್ವ ಸ್ನೇಹ ಬಳಗದವತಿಯಿಂದ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಅಂಗವಾಗಿ ಮಕ್ಕಳಲ್ಲಿ ಜಾಗೃತಿ ಮೂಡಿಸಿ ಮಾತನಾಡಿದ ಅವರು ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲ ನಾಗರಿಕರ ಸಹಕಾರ ಬಹಳ ಮುಖ್ಯ. ಶಿಕ್ಷಣ ಪಡೆಯುವ ವಯಸ್ಸಿನಲ್ಲಿ ಕಟ್ಟಡಗಳ ಕೆಲಸಗಳಲ್ಲಿ, ಅಂಗಡಿಗಳಲ್ಲಿ, ಗ್ಯಾರೇಜ್, ಹೋಟೆಲ್, ಕಾರ್ಖಾನೆಗಳಲ್ಲಿ, ಬೇಕರಿ ಮತ್ತಿತರ ಸ್ಥಳಗಳಲ್ಲಿ ಕೆಲಸಗಳನ್ನು ಮಾಡುತ್ತಿದ್ದಾರೆ. ಇಂತಹ ಪ್ರಕರಣಗಳನ್ನು ಕಂಡರೆ ತಕ್ಷಣವೇ ಸಕ್ಷಮ ಇಲಾಖೆಯ ಅಧಿಕಾರಿಗಳಿಗೆ ಅಥವಾ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಸಾರ್ವಜನಿಕರು ಸಾಮಾಜಿಕ ಹೊಣೆಗಾರಿಕೆಯನ್ನು ನಿರ್ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಅಪೂರ್ವ ಸ್ನೇಹ ಬಳಗದ ವತಿಯಿಂದ ಮಕ್ಕಳಿಗೆ ಪುಸ್ತಕ ಲೇಖನಿಗಳನ್ನು ವಿತರಿಸಲಾಯಿತು.

ಲಕ್ಷ್ಮಿಪುರಂ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ರವಿಶಂಕರ್, ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಬಿ.ಲಿಂಗರಾಜು, ಕರ್ನಾಟಕ ಬ್ಯಾಂಕ್ ನ ನಿವೃತ್ತ ಸಹಾಯಕ ಪ್ರಧಾನ ವ್ಯವಸ್ಥಾಪಕ ವಿಶ್ವನಾಥ್, ಅಪೂರ್ವ ಸುರೇಶ್, ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಉಪಾಧ್ಯಕ್ಷ ವಿಕ್ರಂ ಅಯ್ಯಂಗಾರ್, ಕೆ ಆರ್ ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಅರಿವು ಸಂಸ್ಥೆಯ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್, ಶಾಲೆಯ ಮುಖ್ಯ ಶಿಕ್ಷಕ ಲತಾ, ದೂರ ರಾಜಣ್ಣ, ಎಸ್.ಎನ್.ರಾಜೇಶ್, ಶಿಕ್ಷಕರಾದ ಲತಾಕುಮಾರಿ, ಮೊಸಿನ್ ತಾಜ್, ಲೀಲಾವತಿ, ಮಮತಾ ಇನ್ನಿತರರು ಹಾಜರಿದ್ದರು.



## ಮೈಸೂರು- ಚಾಮರಾಜನಗರ ಜಿಲ್ಲೆ ಎಸ್ ಚಿಕ್ಕ ಮಾದು ಅಭಿಮಾನಿ ಬಳಗದ ಎಚ್ಚರಿಕೆ

# ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ತಪ್ಪಿದರೆ ಪ್ರತಿಭಟನೆ ಎಚ್ಚರಿಕೆ

ಎಚ್.ಡಿ.ಕೋಟೆ: ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಶಾಸಕ ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ನೀಡಬೇಕು. ಇಲ್ಲವಾದರೆ ಮೈಸೂರಿನ ಪುರಭವನದ ಮುಂದೆ ಎಸ್ ಚಿಕ್ಕಮಾದು ಅಭಿಮಾನಿ ಬಳಗದ ನೇತೃತ್ವದಲ್ಲಿ ನಾಯಕ ಸಮುದಾಯ ಬೃಹತ್ ಪ್ರತಿಭಟನೆ ಮಾಡಲಿದೆ ಎಂದು ಮೈಸೂರು- ಚಾಮರಾಜನಗರ ಜಿಲ್ಲೆ ಎಸ್ ಚಿಕ್ಕಮಾದು ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಕ್ಯಾತನಹಳ್ಳಿ ನಾಗರಾಜು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಪಟ್ಟಣದ ವಾಲ್ಮೀಕಿ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕ್ಯಾತನಹಳ್ಳಿ ನಾಗರಾಜು. ಅನಿಲ್ ಚಿಕ್ಕಮಾದು ಅವರು ಹಳೇ ಮೈಸೂರು ಭಾಗದಲ್ಲಿ ಎಸ್ಟಿ ಸಮುದಾಯದ ಪ್ರಭಾವಿ ಶಾಸಕರು. ತನ್ನದೇ ಆದ ವರ್ಚಸ್ಸು ಹೊಂದಿರುವ ಪ್ರಮುಖ ನಾಯಕರು. ಪ್ರತಿ ಚುನಾವಣೆಯಲ್ಲೂ ಶೇ. 70 ರಷ್ಟು ನಾಯಕ ಸಮುದಾಯ ಕಾಂಗ್ರೆಸ್ ಬೆಂಬಲಿಸುತ್ತಾ ಬರುತ್ತಿದೆ. ಮೈಸೂರು ಚಾಮರಾಜನಗರ,



ಕೊಡಗು, ಮಂಡ್ಯ ಹಾಗೂ ಹಾಸನ ಜಿಲ್ಲೆಯಲ್ಲಿ 6 ಲಕ್ಷ ನಾಯಕ ಸಮುದಾಯದ ಜನಸಂಖ್ಯೆ ಇದ್ದು, 8 ಕ್ಷೇತ್ರಗಳಲ್ಲಿ ನಮ್ಮ ಸಮುದಾಯದ ಮತಗಳೇ ನಿರ್ಣಾಯಕವಾಗಿವೆ. ಕಳೆದ 30 ವರ್ಷಗಳಿಂದಲೂ ಈ ಭಾಗದಲ್ಲಿ ನಮ್ಮ ಸಮಾಜದ ಶಾಸಕರಿಗೆ ಸಚಿವ ಸ್ಥಾನ ನೀಡಿಲ್ಲ. ಹೀಗಾಗಿ ಈ ಬಾರಿ ಶಾಸಕ ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ. ಶಾಸಕರಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಖಾತೆ ಅಥವಾ ಕ್ರೀಡಾ ಇಲಾಖೆ ಖಾತೆ ಸಿಗುವ ಭರವಸೆ ಇದೆ. ಒಂದು ವೇಳೆ ನಮ್ಮ ನಿರೀಕ್ಷೆ ಹುಸಿ ಮಾಡಿದರೆ, ನಾಯಕ ಸಮುದಾಯ ಬೀದಿಗಿಳಿಯಲಿದೆ. ತಾಲೂಕು ಮಟ್ಟ, ಜಿಲ್ಲಾ ಕೇಂದ್ರಗಳಲ್ಲೂ ಉಗ್ರ ಹೋರಾಟ ಮಾಡಲಿದೆ. ಈ ಸರ್ಕಾರಕ್ಕೆ ಇನ್ನು ಎರಡು ವರ್ಷ ಅಧಿಕಾರ ಇರುವುದರಿಂದ ಸದ್ಯ ದುಡುಕಿನ ನಿರ್ಧಾರ ತೆಗೆದುಕೊಳ್ಳುವುದಿಲ್ಲ. 2028ಕ್ಕೆ ಚುನಾವಣೆಯಲ್ಲಿ ಅನಿಲ್ ಚಿಕ್ಕಮಾದು ಯಾವ ಪಕ್ಷದಿಂದ ಸ್ಪರ್ಧೆ ಮಾಡಬೇಕು ಎಂಬುದನ್ನು ನಮ್ಮ ನಾಯಕ ಸಮುದಾಯ ನಿರ್ಧಾರ ಮಾಡಲಿದೆ ಎಂದು ಹೇಳಿದರು.

ಮೈಸೂರು- ಚಾಮರಾಜನಗರ ಜಿಲ್ಲೆ ಎಸ್ ಚಿಕ್ಕಮಾದು ಅಭಿಮಾನಿ ಬಳಗದ ಕಾರ್ಯದರ್ಶಿ ಮಹೇಶ್ ನಾಯಕ, ಗೌರವಾಧ್ಯಕ್ಷ ದೊರೆಸ್ವಾಮಿ ನಾಯಕ, ಟಿ. ಅಂಕನಾಯಕ, ಯಜಮಾನರಾದ ನಾಗರಾಜ, ಎಸ್ಸಿ ಎಸ್ಟಿ ಜಾಗೃತಿ ಸಮಿತಿಯ ಸದಸ್ಯ ವೇಣು, ನಿರ್ದೇಶಕರಾದ ಬೆಟ್ಟ ನಾಯಕ, ಅಗತ್ತೂರು ಅಂಕನಾಯಕ, ನಿಂಗರಾಜು , ಬೈರನಾಯಕ, ಶ್ರೀನಿವಾಸ್, ಮಾಗುಡಿಲು ಮಣಿ, ರಾಮ ನಾಯಕ, ಜಯಪ್ಪ, ಗೋವಿಂದ, ಚೆಲುವರಾಜು, ದೊಡ್ಡವೀರ ನಾಯಕ, ದಾಸನಾಯಕ, ನಾಗನಾಯಕ, ಕಾಳಿಂಗ ನಾಯಕ, ಕೃಷ್ಣ, ಬೀರೇಶ್ ಮಡಿವಾಳ್, ಸಿದ್ದು, ಕುಮಾರ್, ಕೆಂಪ, ಗೋಪಾಲ್, ರವಿಶಂಕರ್, ಕುಮಾರ್, ಚೆನ್ನನಾಯಕ, ಪುರುಷೋತ್ತಮ್, ವಕೀಲ ಲೋಕೇಶ್ ಸೇರಿದಂತೆ ನಾಯಕ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಸಿಸಿ ರಸ್ತೆ, ಚರಂಡಿ, ಸಮುದಾಯ ಭವನಗಳ ಗುದ್ದಲಿಪೂಜೆ



ಗುಂಡ್ಲುಪೇಟೆ: ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಸುಮಾರು 1 ಕೋಟಿ 90 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ, ಹಾಗೂ ಸಮುದಾಯ ಭವನಗಳ ನಿರ್ಮಾಣಕ್ಕೆ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಗುದ್ದಲಿಪೂಜೆ ನೆರವೇರಿಸಿದರು.

ತಾಲ್ಲೂಕಿನ ಹುಣಸಿನಪುರ ಗ್ರಾಮದಲ್ಲಿ 30 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಬೀದಿಗೆ ಸಿಸಿರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ, ಸೋಮಹಳ್ಳಿ ಗ್ರಾಮದಲ್ಲಿ ಪರಿಶಿಷ್ಟ ಪಂಗಡ ಬೀದಿಯಲ್ಲಿ 25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ, 20 ಲಕ್ಷ ವೆಚ್ಚದಲ್ಲಿ ಬಾಬು ಜಗಜೀವನ ರಾಮ್ ಭವನ ನಿರ್ಮಾಣಕ್ಕೆ ಗುದ್ದಲಿಪೂಜೆ, ಶ್ಯಾನಡ್ರಹಳ್ಳಿ ಗ್ರಾಮದಲ್ಲಿ 30 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ, ತೆರಕಣಾಂಬಿ ಗ್ರಾಮದ ಪರಿಶಿಷ್ಟ ಪಂಗಡಗಳ ಬೀದಿಯಲ್ಲಿ 50 ಲಕ್ಷ ವೆಚ್ಚ ದಲ್ಲಿ ಗುದ್ದಲಿಪೂಜೆ, ಸೋಮನಪುರ ಗ್ರಾಮದಲ್ಲಿ ಪರಿಶಿಷ್ಟ ಪಂಗಡದ ಬೀದಿಯಲ್ಲಿ 25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಎಚ್ ಎಂ ಗಣೇಶ ಪ್ರಸಾದ್ ರವರು. ತಾಲ್ಲೂಕಿನ ಅಭಿವೃದ್ಧಿ ಗೆ 110 ಕೆರೆಗಳ ಅಭಿವೃದ್ಧಿ ಗೆ 475 ಕೋಟಿ ಅನುದಾನ ಬಿಟ್ಟು ಬೇರೆ ಅಭಿವೃದ್ಧಿ ಕೆಲಸ ಗಳಿಗೆ 500 ಕೋಟಿ ಅನುದಾನ ತರಲಾಗಿದೆ ನಮ್ಮ ಸರ್ಕಾರದಲ್ಲಿ ಅವಧಿಯಲ್ಲಿ ತಾಲ್ಲೂಕಿನ ಅಭಿವೃದ್ಧಿ ಗೆ ಹೆಚ್ಚಿನ ಅನುದಾನ ಸಿಕ್ಕಿದೆ ಎಂದರು. ಮಾಜಿ ಕಾಡಾ ಅಧ್ಯಕ್ಷ ನಂಜಪ್ಪ, ಟಿಎಪಿಸಿಎಂಎಸ್ ನಿರ್ದೇಶಕ ಕೆ ಎಂ ಮಹದೇವಸ್ವಾಮಿ, ತಾ.ಪಂ ಮಾಜಿ ಅಧ್ಯಕ್ಷ ಮಧುಶಂಕರ್, ಎಪಿಎಂಸಿ ಅಧ್ಯಕ್ಷ ನಾಗರಾಜು, ಪುಟ್ಟಣ್ಣ, ಹುಣಸಿನಪುರ ಮಾದಪ್ಪ, ಉಮೇಶ್, ಮಲ್ಲೇಶ್, ಸೋಮಹಳ್ಳಿ ಗ್ರಾಮದ ಮಾಜಿ ಎಪಿಎಂಸಿ ಅಧ್ಯಕ್ಷ ಶಿವನಾಗಪ್ಪ, ಸದಾನಂದಸ್ವಾಮಿ, ಸದಾಶಿವಪ್ಪ, ರವಿ, ವಿಷಕಂಠ 'ಮೂರ್ತಿ, ಬಸವರಾಜು, ಪುಟ್ಟಸ್ವಾಮಿ ನಾಯಕ, ಸ್ವಾಮಿ, ಮಹದೇವಯ್ಯ, ಶ್ಯಾನಡ್ರಹಳ್ಳಿ ಗ್ರಾಮದ ಮೃತ್ಯುಂಜಯ, ಬಸವೇಗೌಡ, ಮಹದೇವಯ್ಯ, ಪ್ರಭುಸ್ವಾಮಿ, ತೆರಕಣಾಂಬಿ, ಮಹದೇವಪ್ಪ, ನಾಗರಾಜು ಮತ್ತಿತರರಿದ್ದರು


ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ,
ಮೈಸೂರು ಅರಮನೆ ಮಂಡಳಿ, ಮೈಸೂರು
Phone: 0821-2421051, Fax: 2434425,
e-mail : ddmysorepalace@gmail.com,
GST :29AAAGM0484M1ZX
ಟೆಂಡರ್ ಸಂಖ್ಯೆ : ಕಾನಿಅ/ಮೈಅಮಂ/ಉನಿ/ಸಿವಿಲ್/ಟೆಂಡರ್–01/2026–27, ದಿನಾಂಕ: 09/06/2026

ಅಲ್ಪಾವಧಿ ಟೆಂಡರ್ ಪ್ರಕಟಣೆ

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಉಪ–ನಿರ್ದೇಶಕರು, ಮೈಸೂರು ಅರಮನೆ ಮಂಡಳಿ, ಮೈಸೂರು ಇವರಿಂದ ಮೈಸೂರು ಅರಮನೆಯ ಆವರಣದಲ್ಲಿ ಯೋಗ ದಿನಾಚರಣೆಯ ಪ್ರಯುಕ್ತ ಸಿವಿಲ್ ವಿಭಾಗದಿಂದ 01 ಕಾಮಗಾರಿಯನ್ನು ಕೈಗೊಳ್ಳುವ ಸಂಬಂಧ ರೂ.2.22 ಲಕ್ಷ + ಜಿ.ಎಸ್.ಟಿ ಗಳ ಕೆಲಸಕ್ಕೆ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಿರುವ ಹಾಗೂ ಮೈಸೂರು ಅರಮನೆ ಮಂಡಳಿ ಅಥವಾ ರಾಜ್ಯ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ ಅಥವಾ ಕೇಂದ್ರ ಪ್ರಾಚ್ಯವಸ್ತು ಇಲಾಖೆಯಲ್ಲಿ ಕಾಮಗಾರಿಗಳನ್ನು ನಿರ್ವಹಿಸಿ ಹಾಗೂ ಸದರಿ ಕೆಲಸದಲ್ಲಿ ಅನುಭವವಿರುವ ಅರ್ಹ ಗುತ್ತಿಗೆದಾರರು/ ಏಜೆನ್ಸಿ/ ಸಂಸ್ಥೆಗಳಿಂದ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿವುಳ್ಳ ಅರ್ಜಿದಾರರು 1) ಖಾಲಿ ಟೆಂಡರ್ ಫಾರಂ ಕೋರಿ ಅರ್ಜಿ ಸಲ್ಲಿಸಲು ಕೊನೆಯ ದಿ: 16.06.2026 ಸಂಜೆ 4.00 ಗಂಟೆಯವರೆಗೆ. 2) ಖಾಲಿ ಟೆಂಡರ್ ಫಾರಂಗಳನ್ನು ಗುತ್ತಿಗೆದಾರರಿಗೆ ನೀಡುವ ದಿ: 16.06.2026 ಸಂಜೆ: 5.00 ಗಂಟೆವರೆಗೆ. 3) ಭರ್ತಿ ಮಾಡಿದ ಟೆಂಡರ್ ಸ್ವೀಕರಿಸುವ ದಿ: 17.06.2026 ಸಂಜೆ: 4.00 ಗಂಟೆವರೆಗೆ 4) ಭರ್ತಿ ಮಾಡಿದ ಟೆಂಡರನ್ನು ತೆರೆಯುವ ದಿ: 17.06.2026 ಸಂಜೆ : 5.00 ಗಂಟೆಗೆ. ಮೈಸೂರು ಅರಮನೆ ಮಂಡಳಿ/ ರಾಜ್ಯ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ / ಕೇಂದ್ರ ಪ್ರಾಚ್ಯವಸ್ತು ಇಲಾಖೆಯಲ್ಲಿ ಕಾಮಗಾರಿಗಳನ್ನು ನಿರ್ವಹಿಸಿ ಹಾಗೂ ಸದರಿ ಕೆಲಸದಲ್ಲಿ ಅನುಭವವಿರುವ ಗುತ್ತಿಗೆದಾರರಿಗೆ ಮಾತ್ರ ಸಂಬಂಧಿಸಿದ ಕಾಮಗಾರಿಯ ಟೆಂಡರ್ ಫಾರಂ ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ಉಪ ನಿರ್ದೇಶಕರ ಕಛೇರಿ, ಮೈಸೂರು ಅರಮನೆ ಮಂಡಳಿ, ಮೈಸೂರು ರಲ್ಲಿ ಕಛೇರಿಯ ಸಮಯದಲ್ಲಿ ಮಾಹಿತಿ ಪಡೆಯಬಹುದು.


ಸಹಿ/– ಉಪ ನಿರ್ದೇಶಕರು, ಮೈಸೂರು ಅರಮನೆ ಮಂಡಳಿ, ಮೈಸೂರು
DIPR/DDMYS/300/KSMCA/210/2026-27


# ಮೂರು ಗ್ರಾಮಗಳ ಭೂ ಸ್ವಾಧೀನ

## ಬಿಡದಿ ಸಮಗ್ರ ನಗರ ಯೋಜನೆ। ರಾಜ್ಯ ಸರ್ಕಾರದಿಂದ ಅಂತಿಮ ಅಧಿಸೂಚನೆ ಪ್ರಕಟ। ಪರ–ವಿರೋಧದ ನಡುವೆ ಸರ್ಕಾರದ ಆದೇಶ। ಮೊದಲ ಹಂತದಲ್ಲಿ

## 7881 ಎಕರೆ ಪೈಕಿ 498 ಎಕರೆ ಭೂ ಸ್ವಾಧೀನಕ್ಕೆ ಆದೇಶ

ರಾಮನಗರ: ಬಿಡದಿ ಸಮಗ್ರ ನಗರ ಯೋಜನೆಗೆ ಭೂಸ್ವಾಧೀನ ವಿರೋಧಿಸಿ ಹೋರಾಟಗಳು ನಡೆಯುತ್ತಲೇ ಇವೆ. ಪರ–ವಿರೋಧದ ನಡುವೆ ರಾಜ್ಯ ಸರ್ಕಾರ 9 ಕಂದಾಯ ಗ್ರಾಮಗಳ ಪೈಕಿ 3 ಗ್ರಾಮಗಳ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿದೆ.




ಭಾರತದ ಮೊದಲ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ (ಬಿಡದಿ ಟೌನ್ ಶಿಪ್) ಯೋಜನೆಗಾಗಿ ರಾಜ್ಯ ಸರ್ಕಾರ ಬಿಡದಿ ಹೋಬಳಿ ಮತ್ತು ಹಾರೋಹಳ್ಳಿ ತಾಲ್ಲೂಕಿನ ಬೈರಮಂಗಲ, ಕಂಚುಗಾರನಹಳ್ಳಿ ಸೇರಿದಂತೆ 9 ಕಂದಾಯ ಗ್ರಾಮಗಳ ಪೈಕಿ 3 ಗ್ರಾಮಗಳ ಭೂ ಸ್ವಾಧೀನಕ್ಕಾಗಿ ಅಂತಿಮ ಅಧಿಸೂಚನೆ ಹೊರಡಿಸಿದೆ.

ವರ್ಕ್–ಲೀವ್–ಪ್ಲೇ ಮಾದರಿಯಲ್ಲಿ ಅಭಿವೃದ್ಧಿ

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ವರ್ಕ್–ಲೀವ್–ಪ್ಲೇ ಮಾದರಿಯಲ್ಲಿ ಅಭಿವೃದ್ಧಿ ಪಡಿಸುತ್ತಿರುವ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗಾಗಿ ಮೊದಲ ಹಂತದಲ್ಲಿ ಕೆಂಪಯ್ಯನಪಾಳ್ಯ – 367 ಎಕರೆ 15 ಗುಂಟೆ , ಮಂಡಲಹಳ್ಳಿ – 70 ಎಕರೆ 37 ಗುಂಟೆ ಹಾಗೂ ವಡೇರಹಳ್ಳಿ – 61 ಎಕರೆ 2 ಗುಂಟೆ ಭೂಮಿ ಸ್ವಾಧೀನಕ್ಕೆ ಅಧಿಸೂಚನೆ ಹೊರ ಬಿದ್ದಿದೆ.

ಈ ಯೋಜನೆಗೆ ರಾಮನಗರ ತಾಲೂಕು ಬಿಡದಿ ಹೋಬಳಿ ವ್ಯಾಪ್ತಿಯಲ್ಲಿ ಬೈರಮಂಗಲ, ಬನ್ನಿಗಿರಿ, ಹೊಸೂರು, ಕಂಚುಗಾರನಹಳ್ಳಿ, ಕೆಂಪಯ್ಯನಪಾಳ್ಯ, ಕೆ.ಜಿ.ಗೊಲ್ಲರಪಾಳ್ಯ, ಮಂಡಲಹಳ್ಳಿ, ಅರಳಾಳುಸಂದ್ರ ಹಾಗೂ ಹಾರೋಹಳ್ಳಿ ತಾಲೂಕು ಹಾರೋಹಳ್ಳಿ ಹೋಬಳಿಯ ವಡೇರಹಳ್ಳಿ ಸೇರಿ ಒಟ್ಟು 9 ಕಂದಾಯ ಗ್ರಾಮಗಳ ಸುಮಾರು 7881 ಎಕರೆ ಸ್ವಾಧೀನಕ್ಕೆ ಒಳಪಡಲಿದ್ದು, ಇದರಲ್ಲಿ ಖಾಸಗಿ ಮಾಲೀಕತ್ವದ 6731 ಎಕರೆ ಜಮೀನು ಇದೆ.

### 498 ಎಕರೆ 54 ಗುಂಟೆ ಭೂ ಸ್ವಾಧೀನ

ಬಿಡದಿ ಹೋಬಳಿಯಲ್ಲಿ ಸುಮಾರು 20 ಸಾವಿರ ಕೋಟಿ ವೆಚ್ಚದಲ್ಲಿ ಅನುಷ್ಠಾನಕ್ಕೆ ತರುತ್ತಿರುವ ಸಮಗ್ರ ಉಪನಗರ ನಿರ್ಮಾಣಕ್ಕಾಗಿ ಒಟ್ಟು 7881 ಎಕರೆ ಭೂ ಸ್ವಾಧೀನಕ್ಕಾಗಿ 2025ರ ಮಾ.12ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿತ್ತು. ಭೂ ಸ್ವಾಧೀನ ಕಾಯ್ದೆಗಳ ಪ್ರಕಾರ ಪ್ರಾಥಮಿಕ ಅಧಿಸೂಚನೆ ಹೊರಡಿಸಿ ಒಂದು ವರ್ಷದೊಳಗಾಗಿ ಅಂತಿಮ ಅಧಿಸೂಚನೆ ಹೊರಡಿಸಬೇಕು. ಒಂದು ವೇಳೆ ಆಡಳಿತಾತ್ಮಕ ಕಾರಣಗಳಿಂದಾಗಿ ಇದು ಸಾಧ್ಯವಾಗದಿದ್ದಲ್ಲಿ, ಅವಧಿಯನ್ನು ವಿಸ್ತರಿಸುವ ಅವಕಾಶ ಸರ್ಕಾರಕ್ಕೆ ಇತ್ತು. ಅದರಂತೆಯೇ ನಗರಾಭಿವದ್ಧಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಅಂತಿಮ ಅಧಿಸೂಚನೆ ಪ್ರಕಟಿಸುವ ಅವಧಿಯನ್ನು 2027ರ ಮಾ. 11ರವರೆಗೆ ವಿಸ್ತರಿಸಿದ್ದರು. ಇದೀಗ 498 ಎಕರೆ 54 ಗುಂಟೆ ಭೂ ಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿದೆ. ಅಂತಿಮ ಅಧಿಸೂಚನೆಯಲ್ಲಿ ಆಕಾರ್ ಬಂದ್ ಹಾಗೂ ಪಹಣಿಯಲ್ಲಿ ವ್ಯತ್ಯಾಸವಿದ್ದರೆ ಆಕಾರ್ ಬಂದ್ ವಿಸ್ತೀರ್ಣವೇ ಅಂತಿಮವೆಂದು ಪರಿಗಣಿಸಲಾಗಿದೆ.

ಸರ್ಕಾರಿ ಸರ್ವೆ ನಂಬರ್‌ಗಳಲ್ಲಿ ಭೂ ಮಂಜೂರಾತಿಯಾಗಿ ದುರಸ್ಥಿಯಾಗದೇ ಇರುವ ಪ್ರಕರಣಗಳಲ್ಲಿ ಭೂಮಾಲೀಕತ್ವದ ವಿಸ್ತೀರ್ಣದ ನಿರ್ಧರಣೆಯನ್ನು 2012ರ ಸರ್ಕಾರದ ಸುತ್ತೋಲೆಯಂತೆ ನಿರ್ಣಯಿಸಲಾಗಿದೆ. ಅಲ್ಲದೆ, ಸರ್ಕಾರಿ ಸರ್ವೆ ನಂಬರ್‌ಗಳಲ್ಲಿನ ಭೂ ಮಂಜೂರಾತಿ ಪ್ರಕರಣಗಳಲ್ಲಿ ಪರಿಹಾರ ಅರ್ಹತೆಯನ್ನು ಕಂದಾಯ ಇಲಾಖೆಯ ನೈಜತೆ ವರದಿಯನುಸಾರ ತೀರ್ಮಾನಿಸಿ ಕ್ರಮವಹಿಸಲು ಸೂಚಿಸಲಾಗಿದೆ.

| ಎಲ್ಲಿ? | ಎಷ್ಟು | ಎಕರೆ? |
|---|---|---|
| ಗ್ರಾಮ | ಭೂಸ್ವಾಧೀನ ವಿಸ್ತೀರ್ಣ | ನಿಗದಿ ಪಡಿಸಿರುವ ದರ (ಪ್ರತಿ ಎಕರೆಗೆ) |
| ಕೆಂಪಯ್ಯನಪಾಳ್ಯ | 367 ಎಕರೆ 15 ಗುಂಟೆ | 207.30 ಲಕ್ಷ |
| ಮಂಡಲಹಳ್ಳಿ | 70 ಎಕರೆ 37 ಗುಂಟೆ | 214.50 ಲಕ್ಷ |
| ವಡೇರಹಳ್ಳಿ | 61 ಎಕರೆ 02 ಗುಂಟೆ | 214.50 ಲಕ್ಷ |

# ಎಸ್ಸಿ ಪ್ರವರ್ಗ–ಬಿಗೂ ಅವಕಾಶ ಕಲ್ಪಿಸಿ

ಚಾಮರಾಜನಗರ, ಜಿಲ್ಲೆಯ ವಸತಿ ಶಾಲೆಗಳು, ಆದರ್ಶ ಶಾಲೆಗಳು ಹಾಗೂ ಪ್ರತಿಷ್ಠಿತ ಶಾಲೆಗಳ ಪ್ರವೇಶಾತಿಗೆ ಪರಿಶಿಷ್ಠ ಜಾತಿಯ ಪ್ರವರ್ಗ – ಎ ಮತ್ತು ಸಿ ವರ್ಗದ ವಿದ್ಯಾರ್ಥಿಗಳು ಲಭ್ಯವಿಲ್ಲದ ಸ್ಥಾನಗಳಿಗೆ ಪ್ರವರ್ಗ–ಬಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಅವಕಾಶ ಕಲ್ಪಿಸಿ ಕೊಡಬೇಕು ಎಂದು ಪ್ರಗತಿಪರ ಮತ್ತು ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಗುರುವಾರ ಮನವಿ ಸಲ್ಲಿಸಲ್ಲಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿ ಶ್ರೀ ರೂಪಾ ಅವರಿಗೆ ಮನವಿ ಸಲ್ಲಿಸಲಾಯಿತು. ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಸೇರಿದ ವಸತಿ ಶಾಲೆಗಳು, ಆದರ್ಶ ಶಾಲೆಗಳು ಮತ್ತು ಪ್ರತಿಷ್ಠಿತ ಶಾಲೆಗಳ ಪ್ರವೇಶಾತಿಗಾಗಿ ಪರಿಶಿಷ್ಠ ಜಾತಿಯ ಸಾವಿರಾರು ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆ ಬರೆದಿದ್ದಾರೆ. ಆದರೆ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಪ್ರವರ್ಗ– ಬಿಗೆ ಸೇರಿದ ಶೇ.80 ಕ್ಕೂ ಹೆಚ್ಚಿನ ಜನಸಂಖ್ಯೆ ಇರುವುದರಿಂದ ಮೇಲ್ಕಂಡ ಶಾಲೆಗಳಿಗೆ ಪ್ರವೇಶ ಕೋರಿ ಶೇ. 75 ರಿಂದ 80 ಕ್ಕೂ ಅಧಿಕ ಪರಿಶಿಷ್ಟ ಜಾತಿಯ ಪ್ರವರ್ಗ– ಬಿ ಗೆ ಸೇರಿದ ವಿದ್ಯಾರ್ಥಿಗಳೇ ಪ್ರವೇಶಾತಿ ಕೋರಿ ಪ್ರವೇಶ ಪರೀಕ್ಷೆ ಬರೆದಿದ್ದಾರೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಇತ್ತೀಚಿಗೆ ಪರಿಶಿಷ್ಟ ಜಾತಿಯ ಪ್ರವರ್ಗ – ಎ ಗುಂಪಿಗೆ ಶೇ. 5.25, ಪ್ರವರ್ಗ– ಬಿ ಗುಂಪಿಗೆ ಶೇ.5.25 ಹಾಗೂ ಪ್ರವರ್ಗ ಸಿ ಗುಂಪಿಗೆ ಶೇ. 4 ರಷ್ಟು ಒಳ ಮೀಸಲಾತಿ ವಿಂಗಡನೆ ಮಾಡಿರುವುದರಿಂದ ಜಿಲ್ಲೆಯಲ್ಲಿ ಪ್ರವರ್ಗ – ಬಿ ಗೆ ಸೇರಿದ ನೂರಾರು ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳು, ಆದರ್ಶ ಶಾಲೆಗಳು ಮತ್ತು ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶಾತಿ ಸಿಗದೆ ಸಂಕಷ್ಟಕ್ಕೆ ಸಿಲುಕಿ ಪರಿತಪಿಸುತ್ತಿದ್ದಾರೆ. ಹಾಗೆಯೇ



ಪ್ರವರ್ಗ ? ಎ ಮತ್ತು ಪ್ರವರ್ಗ– ಸಿ ಗೆ ಮೀಸಲಾದ ಅನೇಕ ಸ್ಥಾನಗಳು ವಿದ್ಯಾರ್ಥಿಗಳ ಕೊರತೆಯಿಂದ ಭರ್ತಿಯಾಗದೆ ಖಾಲಿ ಉಳಿದಿವೆ.

ಆದ್ದರಿಂದ ಈ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ ಪರಿಶಿಷ್ಟ ಜಾತಿಯ ಪ್ರವರ್ಗ – ಎ ಮತ್ತು ಪ್ರವರ್ಗ ? ಸಿ ವಿದ್ಯಾರ್ಥಿಗಳಿಗೆ ಮೀಸಲಾಗಿ ಭರ್ತಿಯಾಗದೆ ಖಾಲಿ ಉಳಿದಿರುವ ಸ್ಥಾನಗಳಿಗೆ ಪ್ರವರ್ಗ– ಬಿ ವಿದ್ಯಾರ್ಥಿಗಳ ಪ್ರವೇಶಾತಿಗೆ ಅವಕಾಶ ಕಲ್ಪಿಸಿ ಕೊಟ್ಟು ಅನೇಕ ವಿದ್ಯಾರ್ಥಿಗಳು ವಿದ್ಯಾಭ್ಯಾಸದಿಂದ ವಂಚಿತರಾಗದಂತೆ ಕ್ರಮ ವಹಿಸಬೇಕೆಂದು ಮುಖಂಡರು ಆಗ್ರಹಿಸಿದರು. ಈ ಸಂದರ್ಭದಲ್ಲಿ ಪ್ರಗತಿಪರ ಮತ್ತು ದಲಿತ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಸಿ.ಎಂ. ಕೃಷ್ಣಮೂರ್ತಿ), ಸಾಹಿತಿ ಮಂಜು ಕೋಡಿ ಉಗನೆ, ಕುಮಾರ್ ಕುಂಭೇಶ್ವರ ಕಾಲೋನಿ, ಕೆ.ಆರ್.ನಾರಾಯಣ, ನಟಶೇಖರಮೂರ್ತಿ, ಕೊಡಸೋಗೆ ಪ್ರಸಾದ್, ಎಸ್.ಅಶೋಕ್, ರವಿಚಂದ್ರ ಪ್ರಸಾದ್, ಕಲೆ ನಟರಾಜ್, ಸಿ.ಎಂ.ಮಹದೇವಸ್ವಾಮಿ ಇತರರು ಹಾಜರಿದ್ದರು.

# ತಂದೆಯರ ದಿನ: ವಂಡರ್‌ಲಾದಿಂದ ಕೊಡುಗೆ

ರಾಮನಗರ: ಇದೇ ಜೂನ್ 21ರಂದು ವಿಶ್ವ ತಂದೆಯರ ದಿನದ ಅಂಗವಾಗಿ ತಾಲ್ಲೂಕಿನ ಬಿಡದಿ ಹೋಬಳಿಯಲ್ಲಿರುವ ವಂಡರ್‌ಲಾ ಅಮ್ಯೂಸ್‌ಮೆಂಟ್ ಪಾರ್ಕ್ ವಿಶೇಷ ರಿಯಾಯಿತಿ ಘೋಷಿಸಿದೆ. ಎರಡು ಟಿಕೆಟ್ ಕೊಂಡರೆ ಎರಡು ಟಿಕೆಟ್ ಉಚಿತ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ವಿಶೇಷ ಕೊಡುಗೆಗೆ ನೋಂದಾವಣೆ ಆರಂಭವಾಗಿದೆ. ಕೊಡುಗೆ ಜೂನ್ 20 ಮತ್ತು 21ಕ್ಕೆ ಮಾತ್ರ ಅನ್ವಯಿಸುತ್ತದೆ. ಈ ಕೊಡುಗೆಯು, ತಂದೆಯರು, ಅವರ ಮಕ್ಕಳು, ಸ್ನೇಹಿತರು ಹಾಗೂ "ನಾವು ಹೆಚ್ಚು ಸಮಯ ಒಟ್ಟಿಗೆ ಕಳೆಯಬೇಕು" ಎಂದು ಹಲವಾರು ದಿನಗಳಿಂದ ಯೋಚಿಸುತ್ತಿರುವ ಗುಂಪುಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಇದನ್ನು ಕಾರ್ಯರೂಪಕ್ಕೆ ತರಲು ಇದು ಸೂಕ್ತ ಅವಕಾಶವನ್ನೂ ಒದಗಿಸುತ್ತದೆ ಎಂದು ವಂಡರ್‌ಲಾ ಆಡಳಿತ ಅಭಿಪ್ರಾಯಪಟ್ಟಿದೆ.




ಈ ವಿಚಾರದಲ್ಲಿ ವಂಡರ್‌ಲಾದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಧೀರನ್ ಚೌದರಿ ಹೇಳಿಕೆ ನೀಡಿದ್ದು, ಬಹುತೇಕ ತಂದೆಯರು ಸಾಮಾನ್ಯವಾಗಿ ತಮ್ಮ ಸಮಯವನ್ನು ಇತರರ ಆರೈಕೆ, ಯೋಜನೆ ರೂಪಿಸುವುದು, ಸಮಸ್ಯೆಗಳನ್ನು ಪರಿಹರಿಸುವುದು ಹಾಗೂ ಎಲ್ಲವೂ ಸರಾಗವಾಗಿ ನಡೆಯುವಂತೆ ನೋಡಿಕೊಳ್ಳುವುದರಲ್ಲಿ ಕಳೆಯುತ್ತಾರೆ. ತಂದೆಯರ ದಿನದಂದು, ತಂದರೆಯರು ಬಜೆಟ್ ಬಗ್ಗೆ ಯೋಚನೆ ಇಲ್ಲದೆ, ಕುಟುಂಬದೊಂದಿಗೆ ಸಮಯವನ್ನು ಕಳೆಯಲು ವಂಡರ್‌ಲಾ ಸ್ವಾಧ್ಯವಾಗಿಸುತ್ತಿದೆ. ಇಲ್ಲಿ ಕಳೆಯುವ ಪ್ರತಿಯೊಂದು ಕ್ಷಣವೂ ರಂಜನೀಯ, ಆನಂದದಾಯಕ ಹಾಗೂ ನೆನಪಿನಲ್ಲಿರುವಂತಾಗುತ್ತದೆ ಎಂದು ತಿಳಿಸಿದ್ದಾರೆ. ಆಸಕ್ತರು ಆನ್‌ಲೈನ್ ಮೂಲಕ ಬುಕ್ಕಿಂಗ್ ಮಾಡಬಹುದು. ಹೆಚ್ಚಿನ ವಿವರಗಳಿಗಾಗಿ ವಂಡರ್‌ಲಾದ ಜಾಲತಾಣದಲ್ಲಿ ಪಡೆಯಬಹುದು ಎಂದು ಪ್ರಕಟಣೆ ತಿಳಿಸಿದೆ.

# ಮಾಂದಲಪಟ್ಟಿಗೆ 60 ಲಕ್ಷ ರೂ.ವೆಚ್ಚದಲ್ಲಿ ಸುಸಜ್ಜಿತ ರಸ್ತೆ

ಮಡಿಕೇರಿ:–ರಾಜ್ಯದ ಅತ್ಯಂತ ಪ್ರಸಿದ್ಧ ಮತ್ತು ಸುಂದರಪ್ರವಾಸಿ ತಾಣಗಳಲ್ಲಿ ಒಂದಾದ ಮಡಿಕೇರಿಯ ಮಾಂದಲಪಟ್ಟಿ(ಮುಗಿಲುಪೇಟೆ) ಗಿರಿಧಾಮಕ್ಕೆ ಮಡಿಕೇರಿ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ ಅವರ ನಿರ್ದೇಶನದ ಮೇರೆಗೆ ನಿರ್ಮಿಸಲಾದ 60 ಲಕ್ಷ ರೂ ವೆಚ್ಚದ 4 ಕಿ.ಮೀ ರಸ್ತೆಯನ್ನು ಹೊದ್ದೂರು ಪಂಚಾಯತ್ ಮಾಜಿ ಅಧ್ಯಕ್ಷರಾದ ಎಚ್.ಎ.ಹಂಸ ರವರು ಸ್ಥಳೀಯ ಮುಖಂಡರೊಂದಿಗೆ ಶಾಸಕರ ಅನುಪಸ್ಥಿತಿಯಲ್ಲಿ ಉದ್ಘಾಟನೆ ಮಾಡಿದರು.

ಸ್ಥಳೀಯ ನಿವಾಸಿಗಳು, ಗ್ರಾಮಸ್ಥರು ಹಾಗೂ ಬಾಡಿಗೆ ಜೀಪ್ ಮಾಲಿಕರ ಕೋರಿಕೆ ಮೇರೆಗೆ ಶಾಸಕರು ಈ ರಸ್ತೆಯನ್ನು ನಿರ್ಮಾಣ ಮಾಡಲು ಅವಕಾಶ ಮಾಡಿದ್ದು ನಿಯಮ ಬಾಹಿರ ಚಟುವಟಿಕೆಗಳು ಪ್ರವಾಸಿ ತಾಣದಲ್ಲಿ ನಡೆಯದಂತೆ ಎಚ್ಚರವಹಿಸಬೇಕು ಎಂದು ಸ್ಥಳಿಯರಿಗೆ ಹಂಸ ರವರು ಮನವಿ ಮಾಡಿದರು.

ಕಾಲೂರು ಗ್ರಾಮಕ್ಕೆ ಬಸ್ ಬರುವ ರಸ್ತೆ ಹದಗೆಟ್ಟಿದ್ದು ತಕ್ಷಣಕ್ಕೆ ತಾತ್ಕಾಲಿಕ ದುರಸ್ತಿ ಕಾರ್ಯಕ್ಕೆ ಡಾ. ಮಂತರ್ ಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದು ಮಾಹಿತಿ ನೀಡಿದರು. ರಾಜೀವ್ ಗಾಂಧಿ



ಪಂಚಾಯತ್ ರಾಜ್ ಸಂಘಟನೆಯ ಜಿಲ್ಲಾಧ್ಯಕ್ಷರಾದ ತೆನ್ನಿರ ಮೈನಾ ಅವರು ಪ್ರಾಸ್ತವಿಕವಾಗಿ ಮಾತನಾಡಿ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣಕ್ಕೆ ಬಾಡಿಗೆ ಜೀಪ್ ಚಾಲನೆ ಮಾಡಿ ಬದುಕು ಕಟ್ಟಿಕೊಂಡಿರುವ ನೂರಾರು ಕುಟುಂಬಗಳ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮಕ್ಕೆ ಪೂರಕ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಶಾಸಕರಾದ ಡಾ.ಮಂತರ್ ಗೌಡ ಅವರು ಕೊಡಗು ಫಾರೆಸ್ಟ್ ಫೌಂಡೇಶನ್ ನಿಧಿಯಿಂದ 50 ಲಕ್ಷ ರೂ ರಾಜ್ಯ ಸರ್ಕಾರದ ವನ್ಯಜೀವಿ ವಿಭಾಗದ ಅನುದಾನದಲ್ಲಿ 10 ಲಕ್ಷ ರೂಗಳು ಸೇರಿದಂತೆ ಒಟ್ಟು 60 ಲಕ್ಷ ರೂಗಳನ್ನು ಒದಗಿಸಿದ ಮೇರೆಗೆ ಇಲಾಖೆ 4 ತಿಂಗಳುಗಳ ಕಾಲ ಕಾಮಗಾರಿ ನಡೆಸಿ ಈಗ ಲೋಕಾರ್ಪಣೆ ಮಾಡಲಾಗಿದೆ ಎಂದು ವಿವರಣೆ ನೀಡಿದರು. ಹದಿನೈದು ದಿನಗಳಲ್ಲಿ ಶಾಸಕರು ಕಾಲೂರು ಗ್ರಾಮಕ್ಕೆ ಬಂದು ಗ್ರಾಮಸ್ಥರೊಂ ದಿಗೆ ಸಭೆ ನಡೆಸಲಿದ್ದಾರೆ ಎಂದರು. ಮಡಿಕೇರಿ ವಿಭಾಗದ ವಲಯ ಅರಣ್ಯ ಅಧಿಕಾರಿ (ಆರ್‌ಎಫ್‌ಒ) ಎಚ್.ಎಸ್.ಶಿವಕುಮಾರ್, ಉಪ ವಲಯ ಅರಣ್ಯಾಧಿಕಾರಿ ಭರತ್ ಎಂ.ಕೆ., ಮುಖಂಡರಾದ ಕೊಂಬಾರನ ಗಣಪತಿ, ಜಾನ್ಸನ್ ಪಿಂಟೋ, ವಕೀಲ ರೋಷನ್ ಗಣಪತಿ, ಕವನ್ ಕೊತ್ತೋಳಿ, ಅರ್ಜುನ್, ಶರಣ್, ಸ್ಥಳೀಯ ಮುಖಂಡರಾದ ಸಿದ್ದಂಡ ಪವನ್, ಚಂಡಿರ ರಾಜ, ಚೆನ್ನಪಂಡ ನರೇನ್ ಸೋಮಯ್ಯ, ನಂದಿರ ಹರಿ, ಚೆನ್ನಪಂಡ ಗಿರೀಶ್, ಚೆನ್ನಪಂಡ ನಂದ, ಚೆನ್ನಪಂಡ ಗೋವಿಂದ, ತಂಬುಕುತ್ತಿರ ರಮೇಶ್, ವಿಜು, ಕುಂಞಣ್ಣಿ, ಹಂಚೆಟ್ಟಿರ ಮನು ಮುದ್ದಪ್ಪ, ಅರಣ್ಯ ಇಲಾಖೆ ಸಿಬ್ಬಂದಿಗಳಾದ ಚೇತನ್, ಹನುಮಂತ ರಾಯಪ್ಪ ಸೇರಿದಂತೆ ಗ್ರಾಮಸ್ಥರು, ಪ್ರವಾಸಿಗರು ಉಪಸ್ಥಿತರಿದ್ದರು.

# ಮಳೆಗಾಗಿ ಪರಿಸರ ಸಂರಕ್ಷಣೆ ಅತ್ಯಗತ್ಯ

ಚಾಮರಾಜನಗರ,ತಾಲೂಕಿನ ಕೋಡಿಮೋಳೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಕೋಡಿಮೋಳೆ ಭಗತ್ ಸಿಂಗ್ ಯುವಸೇನೆ ಹಾಗೂ ಗ್ರಾಮದ ಯುವಕರ ಸಂಘದ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು.

ಇದೇವೇಳೆ ಭಗತ್ ಸಿಂಗ್ ಯುವಸೇನೆ ಅಧ್ಯಕ್ಷ ಕಾಂತರಾಜು ಮಾತನಾಡಿ, ಹೆಚ್ಚುತ್ತಿರುವ ಜನಸಂಖ್ಯೆಯ ಪರಿಣಾಮ, ಪರಿಸರ ವಿನಾಶದ ಅಂಚು ತಲುಪಿದೆ. ಆಧುನೀಕತೆಯ ನಾಗಾಲೋಟದಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಕಾಡನ್ನು ನಾಶ ಮಾಡುತ್ತಿರುವುದು ಕಾನೂನುಬಾಹಿರ, ಅರಣ್ಯದಂಚಿನಲ್ಲಿ ನಾಯಿಕೊಡೆಗಳಂತೆ ತಲೆಎತ್ತುತ್ತಿರುವ ಹೋಂಸ್ಟೇ, ರೆಸಾರ್ಟ್‌ಗಳು ಅರಣ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿವೆ. ಸರ್ಕಾರ ಇವುಗಳಿಗೆ ಕಡಿವಾಣ ಹಾಕುವ ಮೂಲಕ ಕಾಲಕಾಲಕ್ಕೆ ಮಳೆ. ಶುದ್ಧಗಾಳಿ, ಅಂತರ್ಜಲ ಹೆಚ್ಚಳಕ್ಕೆ ಗಿಡನೆಡುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕಿದೆ ಎಂದರು.

ಪ್ರತಿಯೊಬ್ಬರು ಒಂದೊಂದು ಗಿಡ ನೆಟ್ಟು ಪೊ?ಷಣೆ ಮಾಡುವುದರ ಜೊತೆಗೆ ಪರಿಸರ ಸಂರಕ್ಷಣೆಗೆ



ಮುಂದಾಗಬೇಕು ಎಂದರು.

ಇದೇ ವೇಳೆ ಸಿಲ್ವರ್, ಹೊಂಗೆ, ನೇರಳೆ, ಅಗಸೆ, ಮಹಾಗನಿ ಸೇರಿದಂತೆ 50 ಗಿಡಗಳನ್ನು ನೆಟ್ಟು ನೀರೆರೆಯಲಾಯಿತು. ಶಾಲಾ ಪ್ರಭಾರ ಮುಖ್ಯ ಶಿಕ್ಷಕಿ ರತ್ನಮ್ಮ, ಎಸ್‌ಡಿಎಂಸಿ ಅಧ್ಯಕ್ಷ ಪುಟ್ಟರಾಜು, ಭಗತ್ ಸಿಂಗ್ ಯುವಸೇನೆ ಮನು, ಮಣ ?ಶ್, ಮನು, ಶಾಂತರಾಜ್, ಶಾಲಾ ಮಕ್ಕಳು ಹಾಜರಿದ್ದರು.

## ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಜಿಲ್ಲಾಧಿಕಾರಿ ಅವರಿಗೆ ಹೆಚ್ಚುವರಿ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ

# ಯರಗಂಬಳ್ಳಿಯಲ್ಲಿ ಅಕ್ರಮ ಗಣಿಗಾರಿಕೆ ವಿರುದ್ಧ ಕ್ರಮಕ್ಕೆ ಒತ್ತಾಯ

ಚಾಮರಾಜನಗರ, ಜಿಲ್ಲೆ ಯಳಂದೂರು ತಾಲೂಕಿನ ಯರಗಂಬಳ್ಳಿ ಗ್ರಾಮದಲ್ಲಿ ಸರ್ವೆ ನಂಬರ್ 710/1ರಲ್ಲಿ ವಿಸ್ತೀರ್ಣ 28 ಗುಂಟೆ ಸರ್ಕಾರಿ ಜಮೀನು ಹಾಗೂ ಸರ್ಕಾರಿ ಕೆರೆಯನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ಕಪ್ಪುಶಿಲೆ ಗಣಿಗಾರಿಕೆ ನಡೆಸಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಯನ್ನು ವಂಚಿಸುತ್ತಿರುವ ಗಣಿ ಮಾಲೀಕರು ಹಾಗೂ ಇವರ ಜೊತೆ ಶಾಮೀಲಾಗಿ ಅಕ್ರಮ ಗಾಣಿಗಾರಿಕೆ ನಡೆಸಲು ಸಹಕರಿಸುತ್ತಿರುವ ಮೇಲೆ ಕಾನೂನು ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ

ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಜಿಲ್ಲಾಧಿಕಾರಿ ಅವರಿಗೆ ಹೆಚ್ಚುವರಿ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಿದರು. ಚಾಮರಾಜನಗರ ಜಿಲ್ಲೆ ಯಳಂದೂರು ತಾಲ್ಲೂಕು ಯರಗಂಬಳ್ಳಿ ಗ್ರಾಮದ ಸರ್ವೆ ನಂ– 710/1 ರಲ್ಲಿ ವಿಸ್ತೀರ್ಣ 28 ಗುಂಟೆ ಜಮೀನು, ಸರ್ಕಾರಿ ಜಮೀನು /ಸರ್ಕಾರಿ ಕೆರೆ ಆಗಿದ್ದು ಸರ್ಕಾರದ ಆಸ್ತಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ನಿಯಮ ಬಾಹಿರವಾಗಿ ಕಪ್ಪು ಶಿಲೆ ಗಾಣಿಗಾರಿಕೆಯನ್ನು ಹಲವು ವರ್ಷಗಳಿಂದ ನಡೆಸುತಿದ್ದು ಅಕ್ರನು ಗಾಣಿಗಾರಿಕೆಯಿಂದ



ಪ್ರಕೃತಿಯ ಮಡಿಲಿಗೆ ಗ್ರಾಮಸ್ಥರಿಗೆ, ಜಾನುವಾರುಗಳಿಗೆ ತುಂಬಾ ತೊಂದರೆಯಾಗುತ್ತಿದೆ, ಸುಮಾರು 300 ಚದರ ಮೀಟರ್ ಆಳ ತೆಗೆದು ಸರ್ಕಾರಕ್ಕೆ ವಂಚನೆ ಮಾಡಿ ಪಕ್ಕದಲ್ಲಿರುವ ಕೆರೆಯನ್ನೂ ಕೂಡ ಒತ್ತುವರಿ ಮಾಡಿಕೊಂಡಿದ್ದು, ರೈತರು ತಮ್ಮ ಜಮೀನುಗಳಿಗೆ ಓಡಾಡಲು ಇರುವ ಕಬಿನಿ ನಾಲೆ ಬದಿಯ ರಸ್ತೆಯನ್ನು ಇವರು ತಮ್ಮ ಗಣಿಗಾರಿಕೆ ಪ್ರದೇಶದಿಂದ ಕಪ್ಪುಶಿಲೆಯನ್ನು ಸಾಗಿಸಲು ಬಳಸುತ್ತಿದ್ದು, ಅತೀ ಭಾರ ತುಂಬಿದ ಗಣಿಗಾರಿಕೆ ಲಾರಿಗಳ ಓಡಾಟದಿಂದ ಕಬಿನಿ ನಾಲೆ ಬದಿಯ ರಸ್ತೆಯ ಮಣ್ಣು ಕುಸಿದು ಕಬಿನಿ ನಾಲೆಗೆ ತುಂಬಿಕೊಳ್ಳುತ್ತಿದೆ. ಇದರಿಂದ ಕಬಿನಿ ನಾಲೆಯಿಂದ ರೈತರ ಜಮೀನುಗಳಿಗೆ ನೀರು ಸರಾಗವಾಗಿ ಹರಿದುಹೋಗಲು ತೊಂದರೆಯಾಗಿರುತ್ತದೆ. ಮತ್ತು ಈಗಾಗಲೇ ಈ ಗ್ರಾಮದಲ್ಲಿ ಎಂಟು ಕುಡಿಯುವ ನೀರಿನ ಬೋರ್‌ವೆಲ್ ಗಳು ಅಂತರ್ಜಲ ಕುಸಿದು ಬತ್ತಿಹೋಗಿದ್ದು ಕುಡಿಯಲು ಯೋಗ್ಯವಲದ ಈ ನೀರನ್ನೇ ಜನರು ಕುಡಿದು ಇಲ್ಲಿನ ಜನರಿಗೆ ದೇಹಸವೆತ, ಕಿಡ್ನಿ ಸ್ಟೋನ್ ಗಳಂತಹ ಇನ್ನಿತರ ಹಲವಾರು ಕಾಯಿಲೆಗಳನ್ನು ಅನುಭವಿಸುವಂತಾಗಿದೆ. ಮತ್ತು ಈ ಗಣಿಗಾರಿಕೆಗೆ ಬಳಸುವ ಕಲುಸಿತ ನೀರನ್ನು ಕಾಲುವೆಗಳಿಗೆ ಬಿಡುತ್ತಿದ್ದು ಇದರಿಂದಲು ಸಹ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ, ಸಿಡಿಸುವ ಸಿಡಿ ಮದ್ದುಗಳಿಂದ ಮತ್ತು ಈ ಕೆಲಸ ನಿರ್ವಹಿಸುವ ವಾಹನಗಳಿಂದ ಶಬ್ದ ಮಾಲಿನ್ಯ ಮತ್ತು ನಾಯು ಮಾಲಿನ್ಯ ಉಂಟಾಗಿ ಜನ ಸಾಮಾನ್ಯರಿಗೆ ವೃದ್ಧರಿಗೆ ಮಕ್ಕಳಿಗೆ ಅನಾರೋಗ್ಯ ಉಂಟಾಗುತ್ತಿದೆ ಎಂದು ದೂರಿದ್ದಾರೆ. ಈ ಬಗ್ಗೆ ಸಂಬಂಧಿಸಿದ ತಾವು ಖುದ್ದಾಗಿ ಭೇಟಿ ನೀಡಿ ಗಾಣೆಗಾರಿಕೆಯನ್ನು ಪರಿಶೀಲಿಸಿ ತನಿಖೆ ನಡೆಸಿ ಸಂಬಂಧಿಸಿದವರ ಮೇಲೆ ಮತ್ತು ಅಕ್ರಮ ಗಾಣಿಗಾರಿಕೆಗೆ ಪ್ರತ್ಯಕ್ಷವಾಗಿ ಪರೋಕ್ಷವಾಗಿ ಕುಮ್ಮಕ್ಕು ನೀಡುತ್ತಿರುವವರ ಮೇಲೆ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಇಲ್ಲದಿದ್ದರೆ ಹೋರಾಟ ನಡೆಸುವುದಾಗಿ ಪಕ್ಷದ ಜಿಲ್ಲಾಧ್ಯಕ್ಷ ಶಿವದೇವಪ್ಪ ಎಚ್ಚರಿಸಿದ್ದಾರೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಂದಳ್ಳಿ ಮಹೇಶ್, ಜಿಲ್ಲಾ ಉಪಾಧ್ಯಕ್ಷ ಸೈಯದ್ ಸಮಿ,ಜಿಲ್ಲಾ ಸಹ ಉಸ್ತುವಾರಿ ನಾಗೇಂದ್ರ ಕೊಡಗು ಉಸ್ತುವಾರಿ ಶ್ರೀನಿವಾಸ್ ಶಾಸ್ತ್ರೀ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಶುಭಕೋರಿದ ವ್ಯವಸ್ಥಾಪಕ

ಎಚ್.ಡಿ.ಕೋಟೆ: 2026–27ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಗತಿ ಸಾಧಿಸಲಿ ಎಂದು ಸೇಂಟ್ ಜೋಸೆಫ್ ಹಾಗೂ ಸೇಂಟ್ ಮೇರಿಸ್ ಶಾಲೆಯ ವಿದ್ಯಾರ್ಥಿಗಳಿಗೆ ಹೂಗುಚ್ಛ ನೀಡಿ ವ್ಯವಸ್ಥಾಪಕ ಡಾ.ಬರ್ನಾಡ್ ಬಾರ್ನಿಸ್ ಶುಭಕೋರಿದರು.

ಸೇಂಟ್ ಜೋಸೆಫ್ ಸೆಂಟ್ರಲ್ ಶಾಲೆಯ ಮುಖ್ಯ ಶಿಕ್ಷಕಿ ಎಂ.ಪಿ. ಸವಿತಾ, ಪ್ರೌಢಶಾಲಾ ಮುಖ್ಯಸ್ಥ ಅಂತೋನಿ ಪ್ರಭು, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸಂತೋಷ್ ಕುಮಾರ್, ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗು ವಿದ್ಯಾರ್ಥಿಗಳು ಇದ್ದರು.



# ವಿದ್ಯುತ್ ಖಾಸಗಿ ಕಾರಣ ಕೈಬಿಡುವಂತೆ ಒತ್ತಾಯ



ಮೈಸೂರು: ಕರ್ನಾಟಕ ರಾಜ್ಯ ವಿದ್ಯುತ್ ಪ್ರಸರಣ ನಿಗಮವನ್ನು ಖಾಸಗಿಕರಣ ಮಾಡುವುದು ಕೃಷಿ ಮತ್ತು ರೈತ ವರ್ಗಕ್ಕೆ ತುಂಬಲಾರದ ನಷ್ಟ ಉಂಟಾಗುತ್ತದೆ ಮುಂದಿನ ದಿನಗಳಲ್ಲಿ ಖಾಸಗೀಕರಣದ ಒಡೆತದಿಂದ ಕೃಷಿ ಉತ್ಪನ್ನವು ಕುಂಠಿತವಾಗುವ ಸಾಧ್ಯತೆಗಳಿರುತ್ತವೆ ಈ ಹಿನ್ನೆಲೆಯಲ್ಲಿ ವಿದ್ಯುತ್ ಖಾಸಗೀಕರಣ ಕೈ ಬಿಡುವಂತೆ ರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘ ಒತ್ತಾಯಿಸಿತು.

ಈ ಸಂಬಂಧ ಹಿನಕಲ್‌ನಲ್ಲಿರುವ ವಿದ್ಯುತ್ ಪ್ರಸರಣದ ಕೇಂದ್ರ ಕಚೇರಿಯಲ್ಲಿ ಚೆಸ್ಕಾಂ ಎಂಡಿಯವರಿಗೆ ಮನವಿ ಪತ್ರ ಸಲ್ಲಿಸಿದ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ವಿದ್ಯುತ್ ಪೂರೈಕೆಯು ಸರ್ಕಾರದ ಮೂಲ ಜವಾಬ್ದಾರಿಯಾಗಿದ್ದು ಇದನ್ನು ಖಾಸಗಿ ಕಂಪನಿಗಳು ವಹಿಸಿಕೊಂಡಲ್ಲಿ ನಿಯಮ ಮತ್ತು ಷರತ್ತುಗಳನ್ನು ಏರುತ್ತಾರೆ. ಇದರಿಂದ ಸಮರ್ಪಕವಾದ ವಿದ್ಯುತ್ ಪೂರೈಕೆಯಾಗದೆ ಕೃಷಿ ಚಟುವಟಿಕೆ ವಿಫಲವಾಗುತ್ತದೆ. ಆಗ ರೈತರು ಕೃಷಿ ಬಿಟ್ಟು ಹೊರಬರುವ ಹಾಗೂ ಅವಕಾಶವಾದಿಯಾಗಿ ಕಾಯುತ್ತಿರುವ ಬಂಡವಾಳ ಶಾಹಿಗಳು ಮತ್ತು ಶ್ರೀಮಂತರು ಕೃಷಿ ಭೂಮಿಯನ್ನು ಆಕ್ರಮಿಸಿ ಮೂಲ ಕೃಷಿಕರನ್ನು ಕೂಲಿ ಕಾರ್ಮಿಕರಂತೆ ನೇಮಿಸಿಕೊಳ್ಳುವ ಸಾಧ್ಯತೆಗಳು ನಿರ್ಮಾಣವಾಗುತ್ತದೆ. ಆದ್ದರಿಂದ ವಿದ್ಯುತ್ ಖಾಸಗಿಕರಣವನ್ನು ಕೈಬಿಡಬೇಕೆಂದರು.

ದಿ ಟಾಟಾ ಪವರ್ ಕಂಪನಿ ಲಿಮಿಟೆಡ್ ಕರ್ನಾಟಕದಲ್ಲಿ ವಿದ್ಯುತ್ ಸಾಕಷ್ಟು ಆತಂಕ ಉಂಟು ಮಾಡುತ್ತಿದೆ ಮುಂಬೈ ಮೂಲದ ವಿದ್ಯುತ್ ಉತ್ಪಾದನಾ ಮತ್ತು ವಿತರಣ ಸಂಸ್ಥೆ ಕೆಇಆರ್‌ಸಿಗೆ 15 ಜಿಲ್ಲೆಗಳ ವಿದ್ಯುತ್ ವಿತರಣೆಗೆ ಅರ್ಜಿ ಸಲ್ಲಿಸಿದೆ ಅದರಲ್ಲಿ ಚೆಸ್ಕಾಂನ ಮೂರು ಕಂದಾಯ ಜಿಲ್ಲೆಗಳನ್ನು ಮೈಸೂರು ಚಾಮರಾಜನಗರ ಹಾಸನ ಒಳಗೊಂಡಂತಹ ಭೌಗೋಳಿಕ ಸಂಪರ್ಕಿತ ಪ್ರದೇಶಗಳನ್ನು ಕೆಪಿಟಿಸಿಎಲ್ ವಿತರಣಾ ಪರವಾನಿಗೆ ಮಂಜೂರು ಮಾಡದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಮುಂಬೈ, ದೆಹಲಿ ಮತ್ತು ಒರಿಸ್ಸಾ ಆಜ್ಮೀರ್ ನಂತಹ ನಗರಗಳಲ್ಲಿ ವಿದ್ಯುತ್ಕ ದರವು ಕರ್ನಾಟಕದ ದರಕ್ಕಿಂತ ಹೆಚ್ಚು ಇದೆ ಈ ಕಂಪನಿಯು ಖಾಸಗಿಕರಣವಾದರೆ ಕೃಷಿಗೆ ಉಚಿತ ವಿದ್ಯುತ್ ನೀಡುವ ಜವಾಬ್ದಾರಿ ಯಾರದು. ಯಾವುದೇ ಕಾರಣಕ್ಕೂ ವಿದ್ಯುತ್ ಖಾಸಗಿಕರಣವನ್ನು ಇಂತಹ ಅವೈಜ್ಞಾನಿಕ ಯೋಜನೆಯನ್ನು ಜಾರಿಗೆ ತರದೆ ಸರ್ಕಾರ ಕೈಬಿಡಬೇಕೆಂದು ಆಗ್ರಹಿಸಿದರು.

ಸಂಘದ ಎಚ್.ಎಸ್.ರಾಜು, ಒಳಗೆರೆ ಗಣೇಶ, ಕೆರೆಹುಂಡಿ ರಾಜಣ್ಣ, ಹಾಲಿನ ನಾಗರಾಜ್, ಹನುಮಯ್ಯ ಎಚ್.ಪ್ರಕಾಶ್, ಗಾಂಧಿ ಮಲಿಯೂರು, ಮಹೇಂದ್ರ, ಸೋಮಣ್ಣ, ಅಂಡುವಿನಹಳ್ಳಿ ಮಹೇಶ್, ಬಿದರಳ್ಳಿ ಮಾದಪ್ಪ, ಸ್ಯಾಂಡ್ ಹಳ್ಳಿ ಬಸವರಾಜು, ನಾಗರಾಜಪ್ಪ, ಕಿಲ್ಲಪುರ ನಂದೀಶ್, ಕೆರಹಳ್ಳಿ ರವಿ, ದೇವಿರಮ್ಮನಹಳ್ಳಿ ಪುಟ್ಟಸ್ವಾಮಿ ಇನ್ನಿತರರು ಇದ್ದರು.

# ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ





**ಚಾಮರಾಜನಗರ,** ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಶ್ರೀರೂಪಾ ಶುಕ್ರವಾರ ಚಾಲನೆ ನೀಡಿದರು.

ನಗರದ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಇನ್ನಿತರೆ ಇಲಾಖೆಗಳ ಸಹಯೋಗದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜಾಥಾ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗದಿಂದ ಸಾಗಿದ ಮೆರವಣಿಗೆ ಶ್ರೀ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮಾರ್ಗವಾಗಿ ಸಾಗಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಅಂತ್ಯವಾಯಿತು. ಬಳಿಕ ವೇದಿಕೆ ಕಾರ್ಯಕ್ರಮ ಪ್ರಾರಂಭವಾಯಿತು. ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ, ಜಿಲ್ಲಾ ಕಾರ್ಮಿಕ ಅಧಿಕಾರಿ ರಾಘವೇಂದ್ರ ಹಾಗೂ ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಹಾಜರಿದ್ದರು.

# ಮೃತ ಹಾಲು ಉತ್ಪಾದಕರ ವಾರಸುದಾರರಿಗೆ ಪರಿಹಾರ ವಿತರಣೆ

### ಖಾಸಗಿ ಡೇರಿಗಳ ಆಮಿಷಕ್ಕೆ ಒಳಗಾಗದಂತೆ ಎಚ್ಚರಿಕೆ



ಗುಂಡ್ಲುಪೇಟೆ: ಜಿಲ್ಲಾ ಸಹಕಾರ ಹಾಲು ಒಕ್ಕೂಟ ಹಾಗೂ ಚಾಮುಲ್ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಮರಣ ಹೊಂದಿದ ಹಾಲು ಉತ್ಪಾದಕ ಸದಸ್ಯರ ವಾರಸುದಾರರಿಗೆ ಪರಿಹಾರ ಧನ ವಿತರಿಸಲಾಯಿತು. ಒಟ್ಟು 38 ಫಲಾನುಭವಿಗಳಿಗೆ ತಲಾ 15 ಸಾವಿರ ರೂಪಾಯಿಗಳಂತೆ ಒಟ್ಟು 5,70,000 ರೂಪಾಯಿಗಳ ಚೆಕ್‌ಗಳನ್ನು ಚಾಮರಾಜನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರು ಹಾಗೂ ಚಾಮುಲ್ ನಿರ್ದೇಶಕರಾದ ಹೆಚ್.ಎಸ್. ನಂಜುಂಡ ಪ್ರಸಾದ್ ಹಾಗೂ ಎಂಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಮತ್ತು ಚಾಮುಲ್ ನಿರ್ದೇಶಕ ಎಂ.ಪಿ. ಸುನಿಲ್ ಅವರು ಹಸ್ತಾಂತರಿಸಿದರು.

**ಖಾಸಗಿ ಡೇರಿಗಳಲ್ಲಿ ಇಂತಹ ಸೌಲಭ್ಯಗಳಿಲ್ಲ**

ಕಾರ್ಯಕ್ರಮದಲ್ಲಿ ಮಾತನಾಡಿದ ಚಾಮುಲ್ ನಿರ್ದೇಶಕ ಹೆಚ್.ಎಸ್. ನಂಜುಂಡ ಪ್ರಸಾದ್ ಅವರು, ಮರಣ ಹೊಂದಿದ ಹಾಲು ಉತ್ಪಾದಕರ ಸಹಕಾರ ಸಂಘಗಳ ಸದಸ್ಯರ ವಾರಸುದಾರರಿಗೆ ಒಕ್ಕೂಟದ ವತಿಯಿಂದ ನೀಡಲಾಗುತ್ತಿರುವ ಈ ಪರಿಹಾರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಸಂಘಗಳಲ್ಲಿ 58 ವರ್ಷದೊಳಗಿನ ಸದಸ್ಯರಿಗೆ ಒಂದು ಲಕ್ಷ ರೂಪಾಯಿಗಳವರೆಗೆ ವಿಮಾ ಸೌಲಭ್ಯ ಲಭ್ಯವಿದೆ. ಇದರ ಜೊತೆಗೆ ರಾಸುಗಳ ತುರ್ತು ಚಿಕಿತ್ಸೆಗಾಗಿ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ರೈತರು ಇದರ ಲಾಭ ಪಡೆಯಬೇಕು. ಈ ಎಲ್ಲ ಸೌಲಭ್ಯಗಳನ್ನು ಒಕ್ಕೂಟವು ಹಾಲು ಉತ್ಪಾದಕರ ಸಂಘಗಳ ಮೂಲಕವೇ ಒದಗಿಸುತ್ತಿದ್ದು, ಇಂತಹ ಯಾವುದೇ ನೆರವು ಮತ್ತು ಭದ್ರತೆ ಖಾಸಗಿ ಡೇರಿಗಳಲ್ಲಿ ದೊರೆಯುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

**ರಾಸುಗಳ ವಿಮಾ ಯೋಜನೆಯ ಸದುಪಯೋಗಕ್ಕೆ ಕರೆ**

ನಂತರ ಮಾತನಾಡಿದ ನಿರ್ದೇಶಕ ಎಂ.ಪಿ. ಸುನಿಲ್ ಅವರು, ಸಹಕಾರ ಸಂಸ್ಥೆಗಳು ವಾಸ್ತವವಾಗಿ ಸದಸ್ಯರದ್ದೇ ಸಂಸ್ಥೆಗಳಾಗಿವೆ. ಇಲ್ಲಿ ಸಿಗುವ ಭದ್ರತೆ, ಬೋನಸ್ ಮತ್ತು ಸೌಲಭ್ಯಗಳು ಖಾಸಗಿಯವರ ಬಳಿ ಎಂದಿಗೂ ಸಿಗುವುದಿಲ್ಲ. ಹೀಗಾಗಿ ರೈತರು ಖಾಸಗಿ ಡೇರಿಗಳ ತಾತ್ಕಾಲಿಕ ಆಮಿಷಗಳಿಗೆ ಒಳಗಾಗದೆ, ತಮ್ಮದೇ ಒಡೆತನದ ಸಹಕಾರ ಸಂಘಕ್ಕೆ ನಿರಂತರವಾಗಿ ಹಾಲು ಸರಬರಾಜು ಮಾಡಬೇಕು ಎಂದು ಮನವಿ ಮಾಡಿದರು. ಇದೇ ವೇಳೆ, ಸಂಘದ ವತಿಯಿಂದ ರೈತರ ರಾಸುಗಳಿಗೆ ಎರಡು ವರ್ಷಗಳ ಅವಧಿಗೆ ವಿಮೆ ಮಾಡಿಸಲಾಗುತ್ತಿದ್ದು, ಪ್ರತಿಯೊಬ್ಬರೂ ಈ ವಿಮಾ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ಆರ್ಥಿಕ ನಷ್ಟದಿಂದ ಪಾರಾಗುವಂತೆ ಸಲಹೆ ನೀಡಿದರು. ಈ ಮಹತ್ವದ ಕಾರ್ಯಕ್ರಮದಲ್ಲಿ ತಾಲೂಕಿನ ವಿಸ್ತರಣಾಧಿಕಾರಿಗಳಾದ ಎಚ್. ಪ್ರಕಾಶ್, ಸಿದ್ದಲಿಂಗೇಶ್, ರಂಜಿತಾ, ಮುದ್ದಪ್ಪ, ಉದಯ್, ಮಂಜೇಶ್, ನೌಕರರ ಸಂಘದ ಪದಾಧಿಕಾರಿಗಳಾದ ನಾಗೇಶ್ ಹಕ್ಕಲಪುರ, ಮಹೇಂದ್ರ ಅಗತಗೌಡನಹಳ್ಳಿ, ತಾಲೂಕಿನ ವಿವಿಧ ಸಂಘಗಳ ಕಾರ್ಯದರ್ಶಿಗಳು ಹಾಗೂ ಪರಿಹಾರ ಪಡೆದ ಫಲಾನುಭವಿಗಳು ಉಪಸ್ಥಿತರಿದ್ದರು.

# ಮೈಸೂರು ಜಿಲ್ಲಾ ಪ್ರವಾಸ

ಮೈಸೂರು:- ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಎಲ್ ಇವರು ಜೂನ್ 16 ರಂದು ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಬೆಳಿಗ್ಗೆ 11.00 ಗಂಟೆಗೆ ಪ.ಜಾತಿ ಮತ್ತು ಪ.ಪಂಗಡಗಳ ಕುಂದು ಕೊರತೆಗಳನ್ನು ಪರಿಶೀಲಿಸಲು ಮೈಸೂರು ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಸೀರ್ ಸಾಬ್ ಸಭಾಂಗಣದಲ್ಲಿ ಸಭೆ ಕರೆಯಲಾಗಿದ್ದು, ಸದರಿ ಸಭೆಗೆ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿನ ಪ.ಜಾತಿ/ಪ.ಪಂಗಡಗಳ ಸಂಘ-ಸಂಸ್ಥೆಗಳ ಮುಖ್ಯಸ್ಥರು, ಮುಖಂಡರುಗಳನ್ನು ಭಾಗವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೇದಗಳ ತೊಲಗಿಸಿದರೆ ಸಮಸಮಾಜ

## ರಂಗಚಟುವಟಿಕೆಗಳು ಮನಸು-ಮನಸುಗಳನ್ನು ಬೆಸೆಯಲಿ: ಇಕ್ಬಾಲ್ ಹುಸೇನ್

ರಾಮನಗರ: ಗ್ರಾಮೀಣ ಪ್ರದೇಶದ ರಂಗಚಟುವಟಿಕೆಗಳು ಮನಸು-ಮನಸುಗಳನ್ನು ಬೆಸೆವ, ಜಾತಿ ಧರ್ಮಗಳನ್ನು ಬೇಧವನ್ನು ಹೊಡೆದೋಡಿಸುವ ನೆಲೆಯಲ್ಲಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕಾಗಿದೆ. ಆಗ ಮಾತ್ರ ಸಮಸಮಾಜ ನಿರ್ಮಾಣ ಕಾರ್ಯ ಸಾಧ್ಯ. ಇದು ನಾಡಿನಾದ್ಯಂತ ಪಸರಿಸಬೇಕಾದ ಅವಶ್ಯಕತೆ ಇದೆ ಎಂದು ಶಾಸಕ ಇಕ್ಬಾಲ್ ಹುಸೇನ್ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಕೈಲಾಂಚ ಹೋಬಳಿಯ ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್ ಕೆರೆಮೇಗಳದೊಡ್ಡಿಯ ಮುದ್ದುಶ್ರೀ ದಿಬ್ಬದಲ್ಲಿ ಆಯೋಜಿಸಿದ್ದ ಶಿವಮೊಗ್ಗ ರಂಗಾಯಣ ನಿರ್ಮಿತ ಜನಪ್ರಿಯ ಕಥೆಗಾರ ಮತ್ತು ಕಾದಂಬರಿಕಾರ ಬೋಳುವಾರು ಮಹಮ್ಮದ್ ಕುಂಞ ಅವರ ದೀರ್ಘ ಕಾದಂಬರಿ ಆಧಾರಿತ ನಾಟಕ ಸ್ವಾತಂತ್ರ್ಯದ ಓಟ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಮುದ್ದುಶ್ರೀ ದಿಬ್ಬದ ವಿಶಾಲ ಬಯಲು ರಂಗದಲ್ಲಿ ಪ್ರದರ್ಶನಗೊಂಡ ಸ್ವಾತಂತ್ರ್ಯದ ಓಟ ನಾಟಕವನ್ನು ಹಿರಿಯ ರಂಗನಿರ್ದೇಶಕ ನಟರಾಜ್ ಹೊನ್ನವಳ್ಳಿ ರಂಗಪಠ್ಯ ಸಿದ್ಧಪಡಿಸಿ, ವಿನ್ಯಾಸಗೊಳಿಸಿ ನಿರ್ದೇಶಿಸಿದ್ದಾರೆ. ಗೋಮಾರನಹಳ್ಳಿ ಮಂಜುನಾಥ್ ನಾಟಕವನ್ನು ರೂಪಾಂತರಿಸಿದ್ದಾರೆ. ಸಹನಿರ್ದೇಶನ ಸಲ್ಮಾ ದಂಡಿನ್. ಸಂಗೀತ ನಿರ್ದೇಶನ ರಾಘವ ಕಮ್ಮಾರ. ರಂಗಸಜ್ಜಿಕೆ ಮದುಸೂದನ್, ರಮೇಶ್ ಎಸ್ ಮೈಸೂರು, ಶಂಕರ್ ಕೆ. ಬೆಳಲಕಟ್ಟೆ. ಬೆಳಕಿನ ವಿನ್ಯಾಸ ಮಂಜುನಾರಾಯಣ್. ವಸ್ತ್ರವಿನ್ಯಾಸ ಸಹನಾ ಪಿಂಜಾರ್ ಎಲ್ಲರ ಶ್ರಮ ಸ್ವಾತಂತ್ರ್ಯದ ಓಟ ನಾಟಕ ಪ್ರದರ್ಶನದಲ್ಲಿ ಎದ್ದು ಕಾಣುತ್ತಿತ್ತು. ಇಪ್ಪತ್ತೈದಕ್ಕೂ ಹೆಚ್ಚು ಕಲಾವಿದರ ಮೂರುವರೆ ಗಂಟೆಗಳ ಈ ಪ್ರದರ್ಶನ ಜನಮೆಚ್ಚುಗೆಗೆ ಪಾತ್ರವಾಯಿತು.



### ಜನಮೆಚ್ಚುಗೆ ಪಡೆದಿರುವ ನಾಟಕ – ಪ್ರಸನ್ನ

ರಂಗಾಯಣದ ನಿರ್ದೇಶಕ ಪ್ರಸನ್ನ ಮಾತನಾಡಿ, ಸ್ವಾತಂತ್ರ್ಯದ ಓಟ ಈ ನಾಟಕ ಈಗಾಗಲೇ ಹದಿನೈದಕ್ಕೂ ಹೆಚ್ಚು ಪ್ರದರ್ಶನಗಳನ್ನು ನಾಡಿನ ವಿವಿಧ ಭಾಗಗಳಲ್ಲಿ ಪ್ರದರ್ಶನಗೊಂಡು ಜನಮೆಚ್ಚುಗೆಗೆ ಪಾತ್ರವಾಗಿರುವ ಈ ಯೋಜನೆಗೆ ಜನಬೆಂಬಲ ದೊರೆತಿದೆ. ಈ ಬಗೆಯ ರಂಗ ಚಟುವಟಿಕೆಗಳಿಗೆ ಸರ್ಕಾರ ಧಾರಾಳವಾಗಿ ಅನುದಾನಗಳನ್ನು ನೀಡುವ ಮೂಲಕ ಪ್ರೋತ್ಸಾಹಿಸುವ ತುರ್ತು ಅಗತ್ಯವಿದೆ ಎಂದು ಆಗ್ರಹಿಸಿದರು. ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ ಬಿ ಚೇತನ ಕುಮಾರ್ ವೇದಿಕೆಯಲ್ಲಿದ್ದರು.

### ರಂಗಭೂಮಿಗೆ ಬೇಕು ಕಾಯಕಲ್ಪ: ಡಾ.ಎಂ.ಬೈರೇಗೌಡ

ಕೆಎಸ್ ಮುದ್ದಪ್ಪ ಸ್ಮಾರಕ ಟ್ರಸ್ಟ್ ಕಾರ್ಯದರ್ಶಿ ಡಾ. ಎಂ. ಬೈರೇಗೌಡ ಮಾತನಾಡಿ ರಂಗಭೂಮಿಯ ಮೂಲಕವೇ ನಮ್ಮ ನೆಲದ ಸೊಗಡನ್ನು ಪಸರಿಸುವ ಕಾರ್ಯದಲ್ಲಿ ನಿರತರಾಗಲು ಸಾರ್ವಜನಿಕರು ಮತ್ತು ಸರ್ಕಾರದ ಸಹಭಾಗಿತ್ವ ಸಹಾಯ ಸಹಕಾರ ಈಗ ಅಗತ್ಯವಿದೆ. ಜನರ ಆಲೋಚನೆಗಳ ಅಭಿರುಚಿಯ ಅಭಿವೃದ್ಧಿಗೆ ತಕ್ಕಂತೆ ಕಾರ್ಯಕ್ರಮಗಳನ್ನು ರೂಪಿಸುವ ಹೊಣೆಗಾರಿಕೆ ಸಂಘ ಸಂಸ್ಥೆಗಳ ಮೇಲಿದೆ. ಹಾಗೆಯೇ ಸಾಮಾಜಿಕ ಸ್ವಾಸ್ಥವನ್ನು ಕಾಪಾಡಿ ಶೈಕ್ಷಣಿಕ ಬೆಳವಣಿಗೆಯಲ್ಲಿ ಮುಂಚೂಣಿಯಲ್ಲಿರುವ ರಂಗಭೂಮಿಗೆ ಕಾಯಕಲ್ಪ ಆಗಬೇಕಾಗಿದೆ. ಜನಬದುಕಿನ ರೀತಿ ರಿವಾಜುಗಳನ್ನು ತೆರೆದು ತೋರಿಸುವ ವಿಶೇಷ ಶಕ್ತಿ ರಂಗಭೂಮಿಗಿದೆ. ಇಂತಹ ಅಭೂತಪೂರ್ವ ಶಕ್ತಿ ಪಡೆದಿರುವ ರಂಗ ಚಟುವಟಿಕೆಗಳನ್ನು ಮತ್ತು ರಂಗ ಪಠ್ಯಗಳನ್ನು ಶಿಕ್ಷಣದಲ್ಲಿ ಅಳವಡಿಸಿ ಪ್ರಾತ್ಯಕ್ಷಿಕೆಗಳ ನಿರ್ಮಾಣ ಮಾಡಿದಲ್ಲಿ ರಂಗಭೂಮಿ ಎಂಬ ಪ್ರಬಲವಾದ ಮಾಧ್ಯಮವೊಂದು ಬಳಕೆಯಾಗುತ್ತದೆ. ಈ ಹಿನ್ನೆಯಲ್ಲಿ ನಾಡಿನ ಶಿಕ್ಷಣ ತಜ್ಞರು ಕಾರ್ಯ ತತ್ಪರರಾಗಬೇಕೆಂದು ಅಗ್ರಹಿಸಿದರು.

### ಸಮಾಜವನ್ನು ಸುಸ್ಥಿತಿಯಲ್ಲಿಡುವ ಶಕ್ತಿ ರಂಗಭೂಮಿಗಿದೆ

ಧರ್ಮ ಸಂಸ್ಕೃತಿ ಸೌಹಾರ್ದತೆ ಇತ್ಯಾದಿ ಬಹು ಆದರ್ಶಗಳನ್ನು ಮೈಗೂಡಿಸಿಕೊಂಡು ಸಮಾಜವನ್ನು ಸುಸ್ಥಿತಿಯಲ್ಲಿಡುವ ಮುಖ್ಯ ಕಾರ್ಯವನ್ನು ರಂಗಭೂಮಿ ನಿರ್ವಹಿಸುವ ಶಕ್ತಿ ಹೊಂದಿದೆ. ಕನ್ನಡದ ಕಥೆ-ಕಾದಂಬರಿಕಾರರು ಯಾರಿಗೂ ಕಡಿಮೆ ಇಲ್ಲದಂತೆ ಅದ್ಭುತವಾದ ವಿಚಾರಗಳನ್ನು ತಮ್ಮ ಬರಹಗಳ ಮೂಲಕ ಕಟ್ಟಿಕೊಟ್ಟಿದ್ದಾರೆ. ಅಂತವುಗಳನ್ನು ಹೀಗೆ ರಂಗಪಟ್ಟಿಗಳನ್ನಾಗಿ ನಿರ್ಮಿಸಿ ಹತ್ತಾರು ಕಡೆ ಪ್ರದರ್ಶನ ನೀಡಬೇಕಾದ ಅವಶ್ಯಕತೆ ಎಂದು ಕರೆನೀಡಿದರು. ಯಾವುದೇ ಪ್ರಚಾರಕ್ಕೆ ತಲೆಕೆಡಿಸಿಕೊಳ್ಳದೆ, ಎಲೆಮರೆಯ ಕಾಯಿಯಂತೆ ಒಂದು ಸುಂದರ ಪರಿಸರದಲ್ಲಿ ಯಾರ ಸಹಾಯ ಸಹಕಾರಗಳನ್ನೂ ಬಯಸದೆ, ತಮ್ಮ ಬದುಕಿನ ಸರ್ವಸ್ವವನ್ನೂ ಧಾರೆಯೆರೆದು ಮುದ್ದುಶ್ರೀ ದಿಬ್ಬದಂತಹ ಅಪರೂಪದ ರಂಗ ಶಿಕ್ಷಣ ಕೇಂದ್ರವನ್ನು ತೆರೆದು ಸಮಾಜಕ್ಕೆ ಅರ್ಪಿಸಿರುವ ಡಾ, ಬೈರೇಗೌಡರು ನಾಡಿಗೆ ಮಾದರಿಯಾಗಿದ್ದಾರೆಂದು ಶ್ಲಾಘಿಸಿದರು.

# ಗಡಿನಾಡ ರಕ್ಷಣಾ ಸೇನೆಯಿಂದ ಸನ್ಮಾನ



ಗುಂಡ್ಲುಪೇಟೆ : ಜುಲೈ ತಿಂಗಳಲ್ಲಿ ಮಲೇಷ್ಯಾದಲ್ಲಿ ನಡೆಯುವ ಅಂತಾರಾಷ್ಟ್ರೀಯ ಪ್ರಿಸ್ಬಿ ಕ್ರೀಡಾಕೂಟದಲ್ಲಿ ಭಾರತದ ಪರವಾಗಿ ಪ್ರತಿನಿಧಿಸುತ್ತಿರುವ ತಾಲೂಕಿನ ಶಿಂಡನಪುರ ಗ್ರಾಮದ ರೈತನ ಮಗಳು ಸಂಧ್ಯಾಗೆ ಗಡಿನಾಡ ರಕ್ಷಣಾ ಸೇನೆ ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

ವಿವಿಧ ಕನ್ನಡ ಪರ ಸಂಘಟನೆಗಳು ಹಾಗೂ ಗ್ರಾಮಸ್ಥರಿಗೆ ಧನ್ಯವಾದ ತಿಳಿಸುತ್ತೇನೆ , ಭಾರತಕ್ಕಾಗಿ ಪ್ರತಿನಿಧಿಸುತ್ತಿರುವುದು ನನ್ನ ಸೌಭಾಗ್ಯ ಎಂದು ಸಂತಸ ಹಂಚಿಕೊಂಡರು. ಈ ಸಂಧರ್ಭದಲ್ಲಿ ಸಂಘಟನೆ ರಾಜ್ಯಾಧ್ಯಕ್ಷ ಮುನೀರ್ ಪಾಷಾ, ತಾಲೂಕು ಅಧ್ಯಕ್ಷ ಅಬ್ದುಲ್ ರಷೀದ್, ಯುವ ಘಟಕ ಅದ್ಯಕ್ಷ ಇಲಿಯಾಸ್, ರಾಜ್ಯ ಉಪಾಧ್ಯಕ್ಷ ಅಲೀಂಪಾಷಾ, ಕಾರ್ಯದರ್ಶಿ ಕಾಳಿಂಗಸ್ವಾಮಿ ಸಿದ್ದಾರ್ಥ, ನೃತ್ಯ ಸಂಯೋಜಕ ಸದ್ದಾಂ , ಗ್ರಾಮದ ಮುಖಂಡರಾದ ಮಂಜುನಾಥ್, ಮಹದೇವಸ್ವಾಮಿ, ಸತ್ಯ ಸೇರಿದಂತೆ ಹಲವರು ಹಾಜರಿದ್ದರು.

# ಜಾತಿ,ಆದಾಯ ಪ್ರಮಾಣಪತ್ರ ವಿಳಂಬವಿಲ್ಲದೆ ವಿತರಿಸಿ



ಗುಂಡ್ಲುಪೇಟೆ: ಜಾತಿ ಮತ್ತು ಆದಾಯ ಪ್ರಮಾಣ ಪ್ರತಗಳಿಗೆ ಶಾಲಾ ದಾಖಲಾತಿ ಮತ್ತು ಸೂಕ್ತ ದಾಖಲಾತಿ ನೀಡಿದಾಗ ವಕೀಲರ ಪ್ರಮಾಣ ಪತ್ರ ತೆಗೆದು ಕೂಳ್ಳದೆ ಸಕಾಲದಲ್ಲಿ ಒದಗಿಸಿಬೇಕು ಎಂದು ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ತಹಸೀಲ್ದಾರ್ ಎಂ ಎಸ್ ತನ್ಮಯ್ ರವರಿಗೆ ಮನವಿ ಸಲ್ಲಿಸಿದರು

ಕರ್ನಾಟಕ ರಾಜ್ಯ ಸರ್ಕಾರವು ಸರ್ಕಾರದ ಆದೇಶ ಸಂಖ್ಯೆ ಸ. ಕಾ ಇ.8ಎಸ್ ಎಲ್ ಪಿ ದಿನಾಂಕ 2024 ಮತ್ತು - 25-08-2025 ರ ಅನ್ವಯ ಪರಿಶಿಷ್ಟ ಜಾತಿಗಳನ್ನು ಪ್ರವರ್ಗ. ಎ. ಬಿ ಸಿ ಎಂದು ವಿಭಾಗಿಸಿ ಆದೇಶಿಸಿದ್ದು ಇದರಂತೆ ಪರಿಶಿಷ್ಟ ಜಾತಿಯ ಪ್ರತಿಯೊಬ್ಬರೂ ಸರ್ಕಾರಿ ಉದ್ಯೋಗ ಸಾಲ ಸೌಲಭ್ಯ ಮತ್ತು ಶಿಕ್ಷಣಕ್ಕಾಗಿ ಪಡೆಯುವುದು ಅತ್ಯವಶ್ಯಕವಾಗಿದ್ದು ಪ್ರತಿಯೊಬ್ಬರೂ ಸಂಬಂಧಿಸಿದ ನಾಡಕಛೇರಿ ತಹಸೀಲ್ದಾರ್ ರವರ ಕಚೇರಿಯಲ್ಲಿ ಪ್ರತಿ ದಿನ ಗಂಟಗಟ್ಟಲೆ ಕಾದು ಸರತಿ ಸಾಲಿನಲ್ಲಿ ನಿಲ್ಲಬೇಕಾಗಿದೆ ಇದರ ಅನುಮೋದನೆಗೆ ಹೆಚ್ಚು ದಿನಗಳು ಬೇಕಾಗಿರುತ್ತದೆ ಇದರಿಂದ ಉದ್ಯೋಗಾಕಾಂಕ್ಷಿಗಳು ಮತ್ತು ವಿದ್ಯಾರ್ಥಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಕಾಲದಲ್ಲಿ ದೊರೆಯದೆ ಪೋಷಕರು ವಿದ್ಯಾರ್ಥಿಗಳು ಅಂತಕಕ್ಕೀಡಾಗಿದ್ದಾರೆ ಕೆಲವರ ಜಾತಿ ಪ್ರಮಾಣ ಪತ್ರಗಳನ್ನು ಕಾರಣಕೊಟ್ಟು ರದ್ದುಗೊಳಿಸುವ ಮುನ್ನ ಅರ್ಜಿದಾರರನ್ನು ಖುದ್ದಾಗಿ ಕರೆಯಿಸಿ ಅದರ ವಿವರ ತಿಳಿಸಿ ಅಗತ್ಯವಿದ್ದರೆ ಹೆಚ್ಚುವರಿ ದಾಖಲಾತಿಗಳನ್ನು ಪಡೆದುಕೊಂಡು ವಿಳಂಬ ಧೋರಣೆ ಅನುಸರಿಸದೆ ಶೀಘ್ರದಲ್ಲೇ ವಿತರಿಸಬೇಕು ಎಂದು ಪ್ರಗತಿಪರ ಸಂಘಟನೆಗಳ ಮುಖಂಡರು ಒತ್ತಾಯಿಸಿದರು

ನಂತರ ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರವರು ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜೊತೆಗೆ ಸಮಾಲೋಚನೆ ನಡೆಸಿ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಉದ್ಯೋಗದ ಹಿತ ದೃಷ್ಟಿಯಿಂದ ಜಾತಿ ಮತ್ತು ಪ್ರಮಾಣ ಪತ್ರ ಒದಗಿಸಲು ಮತ್ತು ಜಿಲ್ಲಾಧಿಕಾರಿಗಳ ಆದೇಶದಂತೆ ವಿಳಂಬ ಮಾಡದೆ ತ್ವರಿತವಾಗಿ ವಿತರಿಸುತ್ತೇವೆ ಎಂದು ಭರವಸೆ ನೀಡಿದರು ಈ ಸಂದರ್ಭದಲ್ಲಿ ಮಾನವ ಬಂಧುತ್ವ ವೇದಿಕೆ ತಾಲೂಕು ಸಂಚಾಲಕ ಅರ್ ಸೋಮಣ್ಣ. ಜಿಲ್ಲಾ ಸಂಚಾಲಕ ಸುಭಾಷ್ ಮಾಡ್ರಹಳ್ಳಿ. ಮುತ್ತಣ್ಣ. ಅರ್ ಡಿ ಉಲ್ಲಾಸ್. ವಕೀಲ ಹಂಗಳ ರಾಜೇಶ್. ಮಹದೇವ್ ಬೆಂಡಗಹಳ್ಳಿ.ಮಹೇಶ ಕಂದೇಗಾಲ. ಮಾದಪ್ಪ ಮಳವಳ್ಳಿ. ರವೀಶ ಬೆಳವಾಡಿ.ಚಿನ್ನಸ್ವಾಮಿ.ಸಿದ್ದಯ್ಯನಪುರ ರವಿ. ಲೋಕೇಶ್ ಇನ್ನೂ ಇತರರು ಇದ್ದರು

### ಪೂರ್ವಭಾವಿ ಸಭೆಯಲ್ಲಿ ಶಾಸಕ ಎಂ.ಆರ್. ಮಂಜುನಾಥ್ ಪ್ರಕಟಣೆ

# ಜೂನ್ 27ರಂದು ಸರಳವಾಗಿ ಕೆಂಪೇಗೌಡ ಜಯಂತಿ ಆಚರಣೆ



ಹನೂರು: ಹನೂರು ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ವತಿಯಿಂದ ತಾಲೂಕು ಮಟ್ಟದಲ್ಲಿ ಜೂನ್ 27ರಂದು ಸರಳವಾಗಿ ನಾಡಪ್ರಭು ಕೆಂಪೇಗೌಡ ಅವರ ಜಯಂತಿಯನ್ನು ಆಚರಿಸಲು ತೀರ್ಮಾನಿಸಲಾಗಿದೆ ಎಂದು ಕ್ಷೇತ್ರದ ಶಾಸಕ ಎಂ.ಆರ್. ಮಂಜುನಾಥ್ ಅವರು ತಿಳಿಸಿದರು.

ಪಟ್ಟಣದ ಲೋಕೋಪಯೋಗಿ ಇಲಾಖೆಯ ವಸತಿ ಗೃಹದಲ್ಲಿ ಹಮ್ಮಿಕೊಳ್ಳಲಾಗಿದ್ದ ನಾಡಪ್ರಭು ಕೆಂಪೇ ಗೌಡ ಜಯಂತಿ ಪ್ರಯುಕ್ತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಸಮುದಾಯದ ವತಿಯಿಂದ ಮುಂದಿನ ದಿನಗಳಲ್ಲಿ ಅದ್ದೂರಿ ಆಚರಣೆ**

ಸರ್ಕಾರಿ ನಿಯಮಾವಳಿಗಳ ಪ್ರಕಾರ ನಿಗದಿತ ದಿನದಂದು ಸರಳವಾಗಿ ಜಯಂತಿ ಆಚರಿಸಿದ ಬಳಿಕ, ಒಕ್ಕಲಿಗ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಒಟ್ಟಾಗಿ ಚರ್ಚಿಸಿ ಮತ್ತೊಂದು ದಿನಾಂಕವನ್ನು ನಿಗದಿಪಡಿಸಲಿದ್ದಾರೆ ಎಂದು ಶಾಸಕರು ತಿಳಿಸಿದರು. ಸಮುದಾಯದ ವತಿಯಿಂದ ಹಮ್ಮಿಕೊಳ್ಳಲಿರುವ ಆ ಕಾರ್ಯಕ್ರಮದಲ್ಲಿ ವಿವಿಧ ಕಲಾತಂಡಗಳ ಮೆರಗು, ಭವ್ಯ ಮೆರವಣಿಗೆ ಸೇರಿದಂತೆ ಅತ್ಯಂತ ಅದ್ದೂರಿಯಾಗಿ ಜಯಂತಿ ಆಚರಿಸಲು ಸಭೆಯಲ್ಲಿ ಒಮ್ಮತದ ತೀರ್ಮಾನ ಕೈಗೊಳ್ಳಲಾಗಿದ್ದು, ಈ ಅದ್ದೂರಿ ಜಯಂತ್ಯುತ್ಸವಕ್ಕೆ ತಾಲೂಕು ಆಡಳಿತ ಹಾಗೂ ತಮ್ಮ ವೈಯಕ್ತಿಕ ಸಂಪೂರ್ಣ ಸಹಕಾರ ಇರಲಿದೆ ಎಂದು ಅವರು ಭರವಸೆ ನೀಡಿದರು.

**ಕೆಂಪೇಗೌಡ ವೃತ್ತ ನಿರ್ಮಾಣ ಹಾಗೂ ಒತ್ತುವರಿ ತೆರವಿಗೆ ಸೂಚನೆ**

ಹನೂರಿನ ಮಹದೇಶ್ವರ ಬೆಟ್ಟ ಮುಖ್ಯರಸ್ತೆಯಲ್ಲಿ ನಾಡಪ್ರಭು ಕೆಂಪೇಗೌಡ ವೃತ್ತ ಮತ್ತು ಅವರ ಭವ್ಯ ಪ್ರತಿಮೆ ನಿರ್ಮಾಣ ಮಾಡುವ ಕುರಿತು ಈ ಹಿಂದೆಯೇ ಸಭೆಗಳಲ್ಲಿ ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಶಾಸಕರು ನೆನಪಿಸಿದರು. ಪ್ರಸ್ತುತ ಈ ಯೋಜನೆಗೆ ಸಂಬಂಧಿಸಿದಂತೆ ಚಾಮರಾಜನಗರ ಜಿಲ್ಲಾಡಳಿತ ಮಟ್ಟದಲ್ಲಿ ಕಾನೂನಾತ್ಮಕ ಪ್ರಕ್ರಿಯೆಗಳು ನಡೆಯುತ್ತಿದ್ದು, ತದನಂತರ ಮುಂದಿನ ಅನುಮೋದನೆಗಾಗಿ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡಲು ಪ್ರಾಮಾಣಿಕ ಶ್ರಮ ವಹಿಸಲಾಗುವುದು ಎಂದರು. ವೃತ್ತ ಹಾಗೂ ಪ್ರತಿಮೆ ನಿರ್ಮಾಣಕ್ಕೆ ಸೂಕ್ತ ಜಾಗದ ಅಗತ್ಯವಿದ್ದು, ಇದಕ್ಕಾಗಿ ಗೊತ್ತುಪಡಿಸಿರುವ ಸ್ಥಳದಲ್ಲಿ ಕಂಡುಬಂದಿರುವ ಸರ್ಕಾರಿ ಜಾಗದ ಒತ್ತುವರಿಯನ್ನು ತಕ್ಷಣವೇ ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು. ಇದೇ ವೇಳೆ ಕೊಳ್ಳೇಗಾಲ ಪಟ್ಟಣದಿಂದ ಹನೂರು ಮಾರ್ಗವಾಗಿ ಸಿಗುವ ಮಧುವನಹಳ್ಳಿಯಲ್ಲಿ ರಸ್ತೆ ಕಿರಿದಾಗಿದ್ದು, ಆ ಭಾಗದಲ್ಲಿ ಅಪಘಾತಗಳನ್ನು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವಂತೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

**ಸಭೆಗೆ ಗೈರಾಗುವ ಅಧಿಕಾರಿಗಳಿಗೆ ನೋಟಿಸ್ ನೀಡಲು ಒತ್ತಾಯ**

ಇದಕ್ಕೂ ಮುನ್ನ ಸಭೆಯಲ್ಲಿ ಮಾತನಾಡಿದ ವಿವಿಧ ಸಂಘಟನೆಗಳ ಮುಖಂಡರು, ತಾಲೂಕಿನಲ್ಲಿ ಹಲವು ಮಹನೀಯರ ಜಯಂತಿ ಆಚರಣೆಗಳಿಗೆ ಸಂಬಂಧಿಸಿದಂತೆ ಹನೂರು ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯಿಂದ ಮಹತ್ವದ ಸಭೆಗಳನ್ನು ಕರೆಯಲಾಗುತ್ತದೆ. ಆದರೆ, ಹಲವು ಪ್ರಮುಖ ಇಲಾಖೆಗಳ ಅಧಿಕಾರಿಗಳು ಇಂತಹ ಸಭೆಗಳಿಗೆ ಸತತವಾಗಿ ಗೈರುಹಾಜರಾಗುತ್ತಿದ್ದಾರೆ. ಆಡಳಿತ ವ್ಯವಸ್ಥೆಯ ಈ ಬೇಜವಾಬ್ದಾರಿತನದ ನಡೆ ಸರಿಯಲ್ಲ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಮುಖಂಡರು, ಸಭೆಗೆ ಗೈರಾದ ಅಧಿಕಾರಿಗಳಿಗೆ ಕಡ್ಡಾಯವಾಗಿ ಶೋಕಾಸ್ ನೋಟಿಸ್ ಜಾರಿ ಮಾಡಬೇಕು ಎಂದು ತಹಸೀಲ್ದಾರ್ ಅವರನ್ನು ಬಲವಾಗಿ ಒತ್ತಾಯಿಸಿದರು.

**ಸಭೆಯಲ್ಲಿ ಉಪಸ್ಥಿತರಿದ್ದ ಗಣ್ಯರು ಹಾಗೂ ಅಧಿಕಾರಿಗಳು**

ಈ ಪೂರ್ವಭಾವಿ ಸಭೆಯಲ್ಲಿ ಹನೂರು ತಾಲೂಕು ಗ್ಯಾರಂಟಿ ಯೋಜನೆಗಳ???ಷ್ಠಾನ ಸಮಿತಿ ಅಧ್ಯಕ್ಷ ಪಾಳ್ಯ ರಾಚಪ್ಪ, ತಹಸೀಲ್ದಾರ್ ಚೈತ್ರಾ, ತಾಲೂಕು ಶಿಕ್ಷಣಾಧಿಕಾರಿ (ಬಿಇಒ) ಪ್ರತಿಭಾ, ಕೆ-ಶಿಪ್ ಇಲಾಖೆಯ ಎಇಇ ಲಕ್ಷ್ಮಿ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರೇಖಾ, ಲೋಕೋಪಯೋಗಿ ಇಲಾಖೆಯ ಎಇಇ ಚಿನ್ನಣ್ಣ, ಕುಮಾರ್ ಪಾಲ್ಗೊಂಡಿದ್ದರು. ಇವರೊಂದಿಗೆ ಜೆಜೆಎಂ ಇಲಾಖೆಯ ಎಇಇ ಸುದನ್ವ ನಾಗ್, ಪೂರ್ಣಿಮಾ, ಕಾವೇರಿ ನೀರಾವರಿ ನಿಗಮದ ಎಇಇ ಕರುಣಾಮಯಿ, ಚೆಸ್ಕಾಂ ಎಇಇ ರಂಗಸ್ವಾಮಿ, ಉಪನೋಂದಣಾಧಿಕಾರಿ ಉಷಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ ಅಂಬಿಕಾ ಹಾಗೂ ಪ್ರಮುಖ ಮುಖಂಡರುಗಳಾದ ಮಂಜೇಶ್ ಗೌಡ, ರಾಜೂಗೌಡ, ಆನಂದ್ ಕುಮಾರ್, ಮಹಾದೇಶ್ ಗೌಡ, ನಾಗಣ್ಣ, ನಟರಾಜು ಗೌಡ, ನಾಗೇಂದ್ರ ಮತ್ತು ಹರೀಶ್ ಗೌಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿ

### ರಾಜ್ಯಮಟ್ಟದ ಪುರುಷ ಮತ್ತು ಮಹಿಳೆಯರ ನೆಟ್‌ಬಾಲ್ ಪಂದ್ಯಾವಳಿ



**ಮಂಡ್ಯ:** ಕರ್ನಾಟಕ ಅಮೆಚುರ್ ನೆಟ್‌ಬಾಲ್ ಅಸೋಸಿಯೇಷನ್ ಮತ್ತು ಮಂಡ್ಯ ನೆಟ್‌ಬಾಲ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ಜೂ.14ರಂದು ಬೆಳಗ್ಗೆ 10 ಗಂಟೆಗೆ ರಾಜ್ಯಮಟ್ಟದ ಪುರುಷ ಮತ್ತು ಮಹಿಳೆಯರ ನೆಟ್‌ಬಾಲ್ ಪಂದ್ಯಾವಳಿಯು ನಗರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಮಂಡ್ಯ ನೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ಎಂ.ಆರ್.ಮಂಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ಜಿಲ್ಲೆಯಲ್ಲಿ ನಡೆಯಲಿರುವ ಮೊದಲ ರಾಜ್ಯಮಟ್ಟದ ಫಾಸ್ಟ್ ಫೈವ್ ನೆಟ್‌ಬಾಲ್ ಪಂದ್ಯಾವಳಿಯಾಗಿದೆ. ಪುರುಷರು ಮತ್ತು ಮಹಿಳೆಯರ ತಲಾ 15 ತಂಡಗಳು ಭಾಗಿಯಾಗಲಿದ್ದು, 500ಕ್ಕೂ ಹೆಚ್ಚು ಮಂದಿ ಭಾಗವಹಿಸಲಿದ್ದಾರೆ ಎಂದರು.

ಪಂದ್ಯಾವಳಿಯನ್ನು ಶಾಸಕ ಪಿ.ರವಿಕುಮಾರ್ ಗೌಡ ಉದ್ಘಾಟಿಸುವರು. ಎಸ್.ಬಿ.ಎಜುಕೇಷನ್ ಟ್ರಸ್ಟ್‌ನ ಕಾರ್ಯದರ್ಶಿ ಡಾ.ಮೀರಾ ಶಿವಲಿಂಗಯ್ಯ ತಂಡಗಳ ಪರಿಚಯ ಮತ್ತು ಕ್ರೀಡಾ ಜ್ಯೋತಿ ಸ್ವೀಕಾರ ಮಾಡುವರು. ವಿಶೇಷ ಆಹ್ವಾನಿತರಾಗಿ ಎಸ್ಪಿ ಡಾ.ವಿ.ಜೆ.ಶೋಭರಾಣಿ, ಹಂಪಿ ಪ್ರಾಧಿಕಾರದ ಆಯುಕ್ತ ಆರ್.ಯೋಗಾನಂದ, ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ನಾಗೇಶ್ ಭಾಗವಹಿಸುವರು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಅಮೆಚುರ್ ನೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ಅರ್ಶಫ್ ಅಹಮದ್, ಉಪಾಧ್ಯಕ್ಷ ಅನಿಲ್‌ಕುಮಾರ, ಕಾರ್ಯದರ್ಶಿ ರಫೀಕ್ ಉಲ್ಲಾ, ಜಿಲ್ಲಾ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಮನುಜಶ್ರೀ, ನೆಟ್‌ಬಾಲ್ ಫೌಂಢೇಷನ್ ಆಫ್ ಇಂಡಿಯಾದ ಸಿ.ಗಿರೀಶ್‌ಗೌಡ, ರೋಟರಿ ವಿದ್ಯಾಸಂಸ್ಥೆಯ ಅಧ್ಯಕ್ಷ ಸಿ.ಮಾದಪ್ಪ, ಜಿಲ್ಲಾ ದೈಹಿಕ ಶಿಕ್ಷಣ ಇಲಾಖೆಯ ಮಾಜಿ ಕಾರ್ಯದರ್ಶಿ ಶಿವಲಿಂಗಯ್ಯ ಉಪಸ್ಥಿತರಿರುವರು ಎಂದು ವಿವರಿಸಿದರು.

ಸಂಜೆ.6ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು ಮಾಂಡವ್ಯ ಎಕ್ಸಲೆನ್ಸ್ ಪಿಯು ಕಾಲೇಜಿನ ಶೈಕ್ಷಣಿಕ ಪಾಲುದಾರ ಚೇತನ್ ಕೃಷ್ಣ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡುವರು. ಮುಖ್ಯ ಅತಿಥಿಗಳಾಗಿ ಕಾಲೇಜಿನ ಪ್ರಾಂಶುಪಾಲ ಶ್ರೀನಿವಾಸ್, ಕರ್ನಾಟಕ ಅಮೆಚುರ್ ನೆಟ್‌ಬಾಲ್ ಅಸೋಸಿಯೇಷನ್ ಉಪಾಧ್ಯಕ್ಷ ಅನಿಲ್‌ಕುಮಾರ, ನೆಟ್‌ಬಾಲ್ ಫೌಂಢೇಷನ್ ಆಫ್ ಇಂಡಿಯಾದ ಸಿ.ಗಿರೀಶ್‌ಗೌಡ, ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಮಾಜಿ ಕಾರ್ಯದರ್ಶಿ ಶಿವಲಿಂಗಯ್ಯ ಭಾಗವಹಿಸುವರು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ನಿರ್ದೇಶಕರಾದ ಎಂ.ಸಚಿನ್, ಎಂ.ಬಿ.ಮೋಹನ್ ಇದ್ದರು.

### ಹುದುಗೂರು ಮತ್ತು ಹೊಸಹಳ್ಳಿ ಸಸ್ಯಕ್ಷೇತ್ರ; ಗಿಡ ವಿತರಣೆ

**ಮಡಿಕೇರಿ:** ಸೋಮವಾರಪೇಟೆ ಸಾಮಾಜಿಕ ಅರಣ್ಯ ವಲಯದ ಹುದುಗೂರು ಮತ್ತು ಹೊಸಹಳ್ಳಿ ಸಸ್ಯಕ್ಷೇತ್ರದಲ್ಲಿ 2026–27ನೇ ಸಾಲಿನ ಮಳೆಗಾಲದಲ್ಲಿ ನೆಡಲು ವಿವಿಧ ಹಣ್ಣಿನ, ಔಷಧೀಯ ಹಾಗೂ ಕಾಡು ಜಾತಿಯ ಸಸಿಗಳನ್ನು ಬೆಳೆಸಲಾಗಿದ್ದು, ಮಹಾಗನಿ, ಹೆಬ್ಬೇವು, ಬಿದಿರು, ನೇರಳೆ, ಸಿಲ್ವರ್, ರಕ್ತಚಂದನ, ಲಾವಂಚ, ತೇಗ ಮುಂತಾದ ಗಿಡಗಳಿದ್ದು, 6*9 ಅಳತೆಯ ಗಿಡ ಒಂದಕ್ಕೆ ರೂ.3 ರಂತೆ ಹಾಗೂ 8*12 ಅಳತೆಯ ಗಿಡ ಒಂದಕ್ಕೆ ರೂ.6 ರಂತೆ ವಿವಿಧ ಅಳತೆಯ ಗಿಡ ವಿತರಣಾ ಕಾರ್ಯವನ್ನು ಜೂನ್, 15 ರಿಂದ ಪ್ರಾರಂಭಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಉಪ ವಲಯ ಅರಣ್ಯಾಧಿಕಾರಿ(ಗಣೇಶ ಎಂ.)9164303717, ಉಪ ವಲಯ ಅರಣ್ಯಾಧಿಕಾರಿ(ಹರೀಶ್ ಕುಮಾರ ಎನ್.ಬಿ) 9449186823, ಗಸ್ತು ಅರಣ್ಯ ಪಾಲಕರು(ಸೋಮಶೇಖರ ನೀಲಕಂಠ ಉಪ್ಪಾರ( 7026469099 ಹಾಗೂ ವಲಯ ಕಚೇರಿಯ ದೂ.ಸಂ. 08276–242018 ನ್ನು ಸಂಪರ್ಕಿಸಬಹುದು ಎಂದು ಸೋಮವಾರಪೇಟೆ ಸಾಮಾಜಿಕ ಅರಣ್ಯ ವಲಯದ ವಲಯ ಅರಣ್ಯಾಧಿಕಾರಿ ಅವರು ತಿಳಿಸಿದ್ದಾರೆ.

## ಶಾಲಾ ಮಕ್ಕಳಿಗೆ ಶುಚಿ-ಪೌಷ್ಟಿಕ ಆಹಾರ ಒದಗಿಸಿ : ನಂದಿನಿ

# ಮಕ್ಕಳ ಸಂರಕ್ಷಣೆ ನಮ್ಮ ಜವಾಬ್ದಾರಿ

**ಮಂಡ್ಯ:** ಜಿಲ್ಲೆಯ ಜಿಲ್ಲೆಯ ಎಲ್ಲಾ ಶಾಲಾ ಮಕ್ಕಳಿಗೆ ಗುಣಮಟ್ಟದ ಮತ್ತು ಪೌಷ್ಟಿಕ ಆಹಾರವನ್ನು ನೀಡುವುದು ಅತ್ಯಗತ್ಯವಾಗಿದ್ದು ಮಕ್ಕಳಿಗೆ ಮೂಲ ಭೂತ ಸೌಕರ್ಯಗಳ ನೀಡುವುದರ ಜೊತೆಗೆ ಮಕ್ಕಳ ಸಂರಕ್ಷಣೆ ನಮ್ಮ ಜವಾಬ್ದಾರಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಆರ್. ನಂದಿನಿ ರವರು ತಿಳಿಸಿದರು.

ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಎಸ್.ಎಸ್.ಎಲ್.ಸಿ. ಫಲಿತಾಂಶ ಉತ್ತಮಪಡಿಸಲು ಹಾಗೂ ಶಾಲಾ ಕಟ್ಟಡ ಸುರಕ್ಷತೆಗೆ ಸಂಬಂಧ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಾಲೆಗಳಲ್ಲಿ ನೀಡುವ ಬಿಸಿಯೂಟ ಯೋಜನೆ ಮತ್ತು ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮಗಳು



ಮಕ್ಕಳ ಆರೋಗ್ಯವನ್ನು ಉತ್ತಮವಾಗಿಡಲು ಸಹಾಯ ಮಾಡುತ್ತವೆ ಎಂದು ತಿಳಿಸಿದ ಅವರು ಆಹಾರ ತಯಾರಿಸುವ ಜಾಗ ಮತ್ತು ಪಾತ್ರೆಗಳು ಯಾವಾಗಲೂ ಸ್ವಚ್ಛವಾಗಿರಬೇಕು ಹಾಗೂ ಶಾಲೆಗಳಲ್ಲಿ ಮಕ್ಕಳಿಗೆ ಶುದ್ಧ ಕುಡಿಯುವ ನೀರು ಸಿಗುವಂತೆ ಮಾಡಬೇಕು ಎಂದು ಅವರು ತಿಳಿಸಿದರು.

ಜಿಲ್ಲೆಯ ಎಲ್ಲಾ ಶಾಲೆಯಗಳಲ್ಲೂ ಶೌಚಾಲಯಗಳ ಸುಚಿತ್ವ ಹಾಗೂ ಸ್ವಚ್ಛತೆಯನ್ನು ಕಾಪಾಡಬೇಕು. ಗಂಡು – ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ನಿರ್ಮಿಸಬೇಕು. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಕಟ್ಟಡ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಅವರು ತಿಳಿಸಿದರು.

ಶಾಲಾ ಕಟ್ಟಡಗಳು ಮತ್ತು ಕೊಠಡಿಗಳು ಸುಸ್ಥಿತಿಯಲ್ಲಿವೆಯೇ ಎಂದು ಪರಿಶೀಲಿಸಿ ಶಿಥಿಲವಾದ ಶಾಲಾ ಕಟ್ಟಡಗಳನ್ನು ಗುರುತಿಸಿ ದುರಸ್ಥಿ ಗೊಳಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಅವರು ತಿಳಿಸಿದರು.

ಮಕ್ಕಳು ಊಟ ಮಾಡುವ ಸಂದರ್ಭದಲ್ಲಿ ಮಕ್ಕಳಿಗೆ ಕುಳಿತು ಊಟ ಮಾಡಲು ಮ್ಯಾಟ್ ಗಳನ್ನು ಅಳವಡಿಸುವಂತೆ ಸೂಚಿಸಿದರು ಹಾಗೂ ಶಾಲಾ ಅವರಣವನ್ನು ಸ್ವಚ್ಛತೆಯಿಂದ ನೋಡಿಕೊಳ್ಳಬೇಕು ಎಂದು ತಿಳಿಸಿದ ಅವರು ಮಕ್ಕಳ ಪಠ್ಯ – ಪುಸ್ತಕ ಹಾಗೂ ಸಮವಸ್ತ್ರದ ಕೊರತೆಯಾಗದಂತೆ ನೋಡಿಕೊಳ್ಳಬೇಕು ಮತ್ತು ಶಾಲೆಗಳಲ್ಲಿ ಪಠ್ಯೇತರ ಚಟುವಟಿಕೆ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದರು.

ಸಭೆಯಲ್ಲಿ ಡಯಟ್ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರಾದ ಯೋಗೇಶ್, ಡಿಡಿಪಿಐ ಲೋಕೇಶ್, ಬಿಇಒ ಮಹದೇವ್, ಶಿಕ್ಷಣಾಧಿಕಾರಿಗಳಾದ ರವಿಕುಮಾರ್ ರವರು ಉಪಸ್ಥಿತರಿದ್ದರು.

## ಮದ್ದೂರು, ಮಳವಳ್ಳಿ ಪಟ್ಟಣಗಳಿಗೆ ಸಮರ್ಕವಾಗಿ ನೀರು ಸರಬರಾಜು ಮಾಡಿ: ಡೀಸಿ ಡಾ. ಕುಮಾರ

**ಮಂಡ್ಯ:** ಮಳವಳ್ಳಿ ಮತ್ತು ಮದ್ದೂರು ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಜಾಕ್ವೆಲ್ ಮತ್ತು ಜಲ ಶುದ್ದೀಕರಣ ಘಟಕಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾರ್ಗವನ್ನು ಅಳವಡಿಸುವ ಮೂಲಕ ನಾಗರೀಕರಿಗೆ ಸಾರ್ವಜನಿಕರಿಗೆ ನೀರು ಸರಬರಾಜುವಿನಲ್ಲಿ ಸುಗಮಗೊಳಿಸುವಂತೆ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಕುಮಾರ ರವರು ತಿಳಿಸಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಮಳವಳ್ಳಿ ಮತ್ತು ಮದ್ದೂರು ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಜಾಕ್ವೆಲ್ ಮತ್ತು ಜಲ ಶುದ್ದೀಕಾರಣ ಘಟಕಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾರ್ಗವನ್ನು ಅಳವಡಿಸುವ ಸಂಬಂಧ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳು ಹಾಗೂ ಚೆಸ್ಕಾಂ ಮತ್ತು ಮದ್ದೂರು ನಗರ ಸಭೆಯ ಅಧಿಕಾರಿಗಳೊಂದಿಗೆ



ಸಭೆ ನಡೆಸಿದರು.

ಮದ್ದೂರು ಮತ್ತು ಮಳವಳ್ಳಿ ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಶುದ್ಧಿಕರಣ ಘಟಕಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾರ್ಗವನ್ನು ಅಳವಡಿಸುವ ಕಾಮಗಾರಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅನುಮತಿ ಪಡೆದು ಚೆಸ್ಕಾಂ ವತಿಯಿಂದ 3 ದಿನಗಳಲ್ಲಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮತ್ತು 1 ವಾರದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ವಿದ್ಯುತ್ ಮಾರ್ಗ ಅಳವಡಿಸಲು ಅಗತ್ಯ ಅನುಮೋದನೆಯನ್ನು ನೀಡಲು ಕ್ರಮ ವಹಿಸುವಂತೆ ಸೂಚಿಸಿದರು.

ಸಭೆಯಲ್ಲಿ ಮದ್ದೂರು ವಿಧಾನ ಸಭೆ ಶಾಸಕರಾದ ಕೆ.ಎಂ ಉದಯ, ರಾಷ್ಟ್ರೀಯ ಪ್ರಾಧಿಕಾರದ ಯೋಜನಾ ನಿರ್ದೇಶಕರಾದ ಗಂಗಾಧರ್, ನಗರಸಭೆಯ ಕಾರ್ಯಪಾಲಕ ಅಭಿಯಂತರರು ಪ್ರತಾಪ್, ಚೆಸ್ಕಾಂ ನ ಅಧೀಕ್ಷಕ ಅಭಿಯಂತರಾದ ಸೋಮಶೇಖರ್, ಮದ್ದೂರು ನಗರಸಭೆಯ ಆಯುಕ್ತರಾದ ರಾಧಿಕಾ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತಿ ಜಾಥಾಗೆ ಚಾಲನೆ

**ಮಂಡ್ಯ:** ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ (ಜೂನ್ 12) ಅಂಗವಾಗಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮತ್ತು ಜಾಗೃತಿ ಮೂಡಿಸಲು ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತಿ ಜಾಥಾಗೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಸುಬ್ರಮಣ್ಯ ಜೆ.ಎನ್ ರವರು ಚಾಲನೆ ನೀಡಿದರು.



ಈ ವೇಳೆ ಮಾತನಾಡಿದ ಸುಬ್ರಮಣ್ಯ ಅವರು ಮಕ್ಕಳಿಗೆ ಶಿಕ್ಷಣ ಕಡ್ಡಾಯವಾಗಿ ನೀಡಬೇಕು. ಹಾಗೂ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಲ್ಲಾ ಮಕ್ಕಳು ಶಿಕ್ಷಣದ ಮಹತ್ವ ತಿಳಿದು ಶಿಕ್ಷಣ ಪಡೆಯಬೇಕು ಎಲ್ಲರಿಗೂ ಶಿಕ್ಷಣ ಒದಗಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ಆನಂದ್, ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ. ಸವಿತಾ, ಜಿಲ್ಲಾ ಕಾರ್ಮಿಕ ಇಲಾಖೆ ಯೋಜನಾಧಿಕಾರಿಗಳಾದ ಪ್ರಭಾಕರ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಮಂಜುಳಾ ಇಟ್ಟಿ ನುಡಿ

# ಗುಣಮಟ್ಟದ ಶಿಕ್ಷಣ, ಸುರಕ್ಷಿತ ಬಾಲ್ಯ ಒದಗಿಸುವುದು ಸಮಾಜದ ಕರ್ತವ್ಯ

**ಮಂಡ್ಯ:** ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಸುರಕ್ಷಿತ ಬಾಲ್ಯವನ್ನು ಒದಗಿಸುವುದು ಸಮಾಜದ ಕರ್ತವ್ಯವಾಗಿದೆ. ಮಕ್ಕಳು ದೇಶದ ಭವಿಷ್ಯ. ಅವರಿಗೆ ಉತ್ತಮ ವಾತಾವರಣ ನಿರ್ಮಿಸಿಕೊಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುಳಾ ಇಟ್ಟಿ ಅವರು ತಿಳಿಸಿದರು.

ಗಾಂಧಿಭವನದಲ್ಲಿ ಶುಕ್ರವಾರ ಮಂಡ್ಯ ಜಿಲ್ಲಾ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ,ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ(ರಿ) ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ – 2026 ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಕೈಯಲ್ಲಿ ಪುಸ್ತಕವಿರಬೇಕು. ಮಕ್ಕಳಲ್ಲಿ ಕಣ್ಣಲ್ಲಿ ಕನಸುಗಳು ಇರಬೇಕು ಹಾಗೂ ಭವಿಷ್ಯದ ಬಗ್ಗೆ ಯೋಚಿಸುವ ಮನಸ್ಸು ಇರಬೇಕು. ಮಕ್ಕಳ ಕಣ್ಣಲ್ಲಿ ಜೀವನದ ದುಖದ ಭಾರ ಇರಬಾರದು. ಮನೆಯ ತೊಂದರೆ, ಕೆಲಸದ ಸಲಕರಣೆಗಳು ಇರಬಾರದು. ಇತಂಹ ಬಾಲ ಕಾರ್ಮಿಕ



ಪದ್ಧತಿಯನ್ನು ಎಲ್ಲರೂ ವಿರೋಧಿಸಬೇಕು.

ಇಂದಿಗೂ ವಿಶ್ವದಲ್ಲಿ ಶಾಲೆಗೆ ಹೋಗುವ ಬದಲು ಕಾರ್ಖಾನೆಗಳಲ್ಲಿ, ಹೋಟೇಲ್ ಗಳಲ್ಲಿ, ಮನೆಗಳಲ್ಲಿ ಗಣಿ ಪ್ರದೇಶಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಈ ಎಲ್ಲ ಮಕ್ಕಳನ್ನು ಶಾಲೆಗೆ ಕರೆದುಕೊಂಡುಹೋಗುವುದು ನಮ್ಮೆಲ್ಲರ ಧರ್ಮ ಹಾಗೂ ಕರ್ತವ್ಯವಾಗಿದೆ ಎಂದು ಅವರು ತಿಳಿಸಿದರು.

ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕು ಎಂಬ ಉದ್ದೇಶದಿಂದ ಜೂನ್ 12 ರಂದು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಲೆ ಹೋಗುವ ಮಕ್ಕಳ ವಯಸ್ಸಿನಲ್ಲಿ ಮಾನಸಿಕ, ದೈಹಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಬೆಳವಣಿಗೆಗೆ ಹಾನಿಯಾಗುವಂತಹ ಕೆಲಸಗಳಿಗೆ ತೊಡಗಿಕೊಳ್ಳುವುದನ್ನು ಬಾಲ ಕಾರ್ಮಿಕತ್ವ ಅಂತಾ ಕರೆಯಲಾಗುವುದು. ಇದಕ್ಕೆ ಬಡತನ ಕಾರಣವಾಗಿದ್ದು ಪೋಷಕರಲ್ಲಿ ಶಿಕ್ಷಣದ ಕೊರತೆ ಸಾಮಾಜಿಕ ಅಸಮಾನತೆ ಹಾಗೂ ಮಕ್ಕಳ ಹಕ್ಕುಗಳ ಬಗ್ಗೆ ಅರಿವಿನ ಕೊರತೆ ಈ ಎಲ್ಲಾ ಕಾರಣಗಳಿಂದ ಬಾಲಕಾರ್ಮಿಕ ಪದ್ಧತಿ ಇರುವುದು ಮುಂದುವರೆಯುತ್ತಿರುವುದನ್ನು ಕಾಣಬಹುದಾಗಿದೆ ಎಂದು ಅವರು ತಿಳಿಸಿದರು.

ಬಾಲಕಾರ್ಮಿಕ ಪದ್ಧತಿಯಿಂದ ಮಕ್ಕಳಲ್ಲಿ ದೈಹಿಕ ಹಾಗೂ ಮಾನಸಿಕ ಶೋಷಣೆ ಉಂಟಾಗಿ ಅವರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಭವಿಷ್ಯದಲ್ಲಿ ಉತ್ತಮ ಅವಕಾಶ ಕಳೆದುಕೊಳ್ಳುತ್ತಾರೆ. ಇದರಿಂದ ಕೊನೆಯದಾಗಿ ದೇಶದ ಮಾನವ ಸಂಪನ್ಮೂಲದಕ್ಕೆ ಹಿನ್ನೆಡೆಯಯಾಗುತ್ತದೆ. ಆದುದರಿಂದ 14 ವರ್ಷ ಒಳಗಿನ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ತೊಡಗಿಸಿಕೊಳ್ಳಬಾರದು ಎಂದು ಅವರು ತಿಳಿಸಿದರು.

ಇಡೀ ದೇಶದ ನಿಜವಾದ ಸಂಪತ್ತು ಮತ್ತು ಭವಿಷ್ಯದ ಅಡಿಪಾಯ. ದೇಶದ ಪ್ರಗತಿ ಮತ್ತು ಅಭಿವೃದ್ಧಿಯು ಮಕ್ಕಳ ಉತ್ತಮ ಶಿಕ್ಷಣ, ಆರೋಗ್ಯ ಅವಲಂಬಿಸಿರುತ್ತದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಸವಿತಾ ಅವರು ಮಾತನಾಡಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಉದ್ದಿಮೆಗಳಲ್ಲಿ ಕೆಲಸಕ್ಕೆ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಅವರು ತಿಳಿಸಿದರು.

ಅಷ್ಟೇ ಅಲ್ಲದೇ, 14ರಿಂದ 18ರ ನಡುವಿನ ವಯೋಮಾನದ ಮಕ್ಕಳನ್ನು ಅಪಾಯಕಾರಿ ಕೆಲಸಕ್ಕೆ ಇರಿಸಿಕೊಳ್ಳುವುದೂ ಅಪರಾಧವಾಗಿದೆ. ಗಣಿಗಾರಿಕೆ, ಸ್ಫೋಟಕ ಮತ್ತು ದಹ್ಯ ಪದಾರ್ಥಗಳು ಒಳಗೊಂಡಿರುವ ಯಾವುದೇ ರೀತಿಯ ಕೆಲಸಗಳಲ್ಲಿ ಮಕ್ಕಳನ್ನು ತೊಡಗಿಸುವುದೂ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಅವರು ತಿಳಿಸಿದರು.

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಗೋಡೆ ಬರಹ, ಆಟೋ ಪ್ರಚಾರ ಹಾಗೂ ಜಾಥಾಗಳ ಮೂಲಕ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ಆನಂದ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್, ಮಂಡ್ಯ ಜಿಲ್ಲಾ ವಕೀಲರ ಸಂಘದ ಪ್ರಸ್ತುತ ಅಧ್ಯಕ್ಷರು ಟಿ.ಎಸ್. ಸತ್ಯಾನಂದ, ಡಿಡಿಪಿಎ ಲೋಕೇಶ್ ಹಾಗೂ ಜಿಲ್ಲಾ ಕಾರ್ಮಿಕ ಯೋಜನಾ ನಿರ್ದೇಶಕ ಪ್ರಭಾಕರ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೂ.16 ಮಂಡ್ಯದಲ್ಲಿ ನಾಟಿ ಹಸು ಆಧಾರಿತ ಎಸ್‌ಪಿಕೆ ಕೃಷಿ ಕ್ಷೇತ್ರೋತ್ಸವ



**ಮಂಡ್ಯ:** ನಾಟಿಹಸು (ಹಳ್ಳಿಕಾರ್) ಆಧಾರಿತ ಸುಭಾಷ್ ಪಾಳೇಕರ್ ಕೃಷಿ ಪದ್ಧತಿಯ (ಎಸ್‌ಪಿಕೆ) ಕಬ್ಬಿನ ಬೆಳೆಯಲ್ಲಿ ಅಂತರ ಬೆಳೆಗಳ ಕ್ಷೇತ್ರೋತ್ಸವ ಕಾರ್ಯಕ್ರಮವನ್ನು ಜೂ.16 ಮತ್ತು 19ರಂದು ಆಯೋಜಿಸಲಾಗಿದೆ ಎಂದು ಸುಭಾಷ್ ಪಾಳೇಕರ್ ಕೃಷಿ ಜನಾಂದೋಳನದ ಜಿಲ್ಲಾ ಪ್ರಧಾನ ಸಂಚಾಲಕ ಅನಂತ್‌ರಾವ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ಯುದ್ದದ ಪರಿಣಾಮ ವಿಶ್ವದೆಲ್ಲೆಡೆ ಕಚ್ಚಾತೈಲದ ಸರಬರಾಜಿನಲ್ಲಿ ವ್ಯತ್ಯಯವಾಗಿದೆ. ಇದರಿಂದ ಕಚ್ಚಾತೈಲ ಆಧಾರಿತ ಉತ್ಪನ್ನಗಳ ಬೆಲೆ ಏರಿಕೆಯಾಗಿದ್ದು, ರಸಗೊಬ್ಬರವೂ ದುಬಾರಿಯಾಗಿ ರೈತರು ಸಾಲಗಾರರಾಗುವ ಪರಿಸ್ಥಿತಿ ಎದುರಾಗಿದೆ ಎಂದರು.

ಈ ಸಂದರ್ಭದಲ್ಲಿ ಎಸ್‌ಪಿಕೆ ಸರಿಯಾದ ನೈಸರ್ಗಿಕ ಮಾದರಿಯ ರೈತರ ನೇರ ಸುಪರ್ಧಿಯಲ್ಲಿ ನಡೆಯುವ ಕೃಷಿ ಪದ್ಧತಿಯಾಗಿದೆ. ಎಲ್ಲ ರೀತಿಯ ಬೆಳೆಗಳಲ್ಲಿ ರೈತರ ಜತೆಗೂಡಿ ರಾಷ್ಟ್ರವೇ ಸ್ವಾವಲಂಬಿಯಾಗುವ ಏಕೈಕ ಮಾರ್ಗ ಇದಾಗಿದೆ. ಆದ್ದರಿಂದ ರೈತರು ಇದನ್ನ ಸುಸಂದರ್ಭವಾಗಿ ತಿಳಿದು ಸಾವಯವ ಕೃಷಿ ಪದ್ಧತಿಗೆ ಬದಲಾಗುವಂತೆ ಮನವಿ ಮಾಡಿದರು.

ಮೊದಲ ಕ್ಷೇತ್ರೋತ್ಸವವು ಜೂ.16 ರಂದು ತಾಲೂಕಿನ ಉಮ್ಮಡಹಳ್ಳಿ ಮತ್ತು ಕೀಲಾರ ಮುಖ್ಯರಸ್ತೆಯಲ್ಲಿನ ಶೇಖರ್ ಅವರ ಜಮೀನಿನಲ್ಲಿ ನಡೆಯಲಿದೆ. ದ್ವಿತೀಯದಾಗಿ ಜೂ.19ರಂದು ತಾಲೂಕಿನ ಕೆರಗೋಡು ಗ್ರಾಮದ ಕೆ.ಗೋಪಾಲರಾವ್ ಅವರ ಜಮೀನಿನಲ್ಲಿ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಸಾವಯವ ಕೃಷಿಯ ಬೆಳೆಗಳಿಗೆ ಬೆಂಗಳೂರಿನ ರಾಜರಾಜೇಶ್ವರಿ ನಗರ ಹಾಗೂ ಕನಕಪುರ ರಸ್ತೆಯ ರಾಗಿಕಣದಲ್ಲಿ ಸಂತೆ ವ್ಯವಸ್ಥೆ ಮಾಡಲಾಗಿದೆ. ಇನ್ನೂ 3 ಕಡೆ ಸಂತೆ ನಡೆಸಲು ಸಿದ್ಧತೆ ನಡೆಸಿದ್ದು, ಒಟ್ಟಾರೆ 10 ಸಂತೆಗಳನ್ನು ತೆರೆಯುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಚಂದಗಾಲು ಶಿವಣ್ಣ, ಸೋಮಶೇಖರ್, ಚನ್ನೇಗೌಡ, ಶಿವಲಿಂಗೇಗೌಡ, ಉಮ್ಮಡಹಳ್ಳಿ ಶೇಖರ್, ಶಿವರಾಂ, ಕರಿಗೌಡ ಇದ್ದರು.

## ಜೂ.14ರಂದು ಬೆಸಗರಹಳ್ಳಿ ರಾಮಣ್ಣ ಕಥಾ ಸಂಕಲನ ಪ್ರಶಸ್ತಿ ಪ್ರದಾನ ಸಮಾರಂಭ

**ಮಂಡ್ಯ:** ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದಿಂದ ಡಾ.ಬೆಸಗರಹಳ್ಳೀ ರಾಮಣ್ಣ ಕಥಾ ಸಂಕಲನ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ 'ಕಕರುಡಿ ಉಗಾದಿ" ತೆಲುಗು ಅನುವಾದ ಕೃತಿ ಬಿಡುಗಡೆ ಕಾರ್ಯಕ್ರಮವನ್ನು ಜೂ.14ರಂದು ಬೆಳಗ್ಗೆ 11.30ಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ರಾಜೇಂದ್ರ ಪ್ರಸಾದ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮಕ್ಕೂ ಮುನ್ನ ಬೆಳಗ್ಗೆ 10 ಗಂಟೆಗೆ ಹಿಂದೂಸ್ತಾನಿ ಗಾಯಕ ಅನಿರುದ್ಧ ಐತಾಳ ಮತ್ತು ಸಂಗಡಿಗರಿಂದ ಭಾವಗಾಯನ ನೆರವೇರಲಿದೆ. 2025ನೇ ಸಾಲಿನ ಬೆಸಗರಹಳ್ಳಿ ರಾಮಣ್ಣ ಕಥಾಸಂಕಲನ ಪ್ರಶಸ್ತಿಗೆ ಲೇಖಕ ಚ.ಹ.ರಘುನಾಥ್ ಅವರ 'ಇಲ್ಲಿಂದ ಮುಂದೆಲ್ಲ ಕಥೆ' ಕೃತಿಯನ್ನು ಆಯ್ಕೆ ಮಾಡಲಾಗಿದೆ ಎಂದರು.

ಹಿರಿಯ ಸಾಹಿತಿ ಮತ್ತು ಚಿಂತಕ ನಾಡೋಜ ಬರಗೂರು ರಾಮಚಂದ್ರಪ್ಪ ಅವರು ಲೇಖಕ ಚ.ಹ.ರಘುನಾಥ್ ಅವರಿಗೆ 50 ಸಾವಿರ ನಗದಿನೊಂದಿಗೆ ಪ್ರಶಸ್ತಿ ಪ್ರದಾನ ಮಾಡುವರು. ರಂಗನಾಥ ರಾಮಚಂದ್ರರಾವ್ ಅವರು ಅನುವಾದಿಸಿರುವ 'ಕಕರುಡಿ ಉಗಾದಿ' ಕೃತಿಯನ್ನು ಹಿರಿಯ ಸ್ತ್ರೀವಾದಿ ಚಿಂತಕಿ ಮತ್ತು ಲೇಖಕಿ ಡಾ.ಸಬಿಹಾ ಭೂಮಿಗೌಡ ಬಿಡುಗಡೆ ಮಾಡುವರು.ಕನ್ನಡ ಪ್ರಾಧ್ಯಾಪಕ ಡಾ.ನಿತ್ಯಾನಂದ ಬಿ.ಶೆಟ್ಟಿ ಪ್ರಶಸ್ತಿ ವಿಜೇತ ಕೃತಿಯ ಕುರಿತು ಮಾತನಾಡುವರು. ಟ್ರಸ್ಟ್‌ನ ಅಧ್ಯಕ್ಷೆ ಎಚ್.ಆರ್.ಸುಜಾತಾ ಅಧ್ಯಕ್ಷತೆ ವಹಿಸುವರು. ಟ್ರಸ್ಟ್‌ನ ಅಜೀವ ಪೋಷಕಿ ಡಿ.ಪಿ.ರಾಜಮ್ಮ ರಾಮಣ್ಣ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಟ್ರಸ್ಟ್‌ನ ಅಧ್ಯಕ್ಷೆ ಎಚ್.ಆರ್.ಸುಜಾತಾ, ಸದಸ್ಯರಾದ ಲೋಕಾನಂದ, ರಾಕೇಶ್ ಇದ್ದರು.





## ಸ್ವಯಂ ರಕ್ತದಾನದ ಮೂಲಕ ಶಾಸಕರಿಂದ ಸ್ವಯಂ ಅರಿವು

**ಮೈಸೂರು:** ಸ್ವಯಂ ರಕ್ತದಾನ ಮಾಡಿದ ಶಾಸಕ ಅನಿಲ್ ಚಿಕ್ಕಮಾದು ರಕ್ತದಾನ ಮಾಡುವುದರಿಂದ ಆರೋಗ್ಯ ಮತ್ತಷ್ಟು ಉತ್ತಮವಾಗುತ್ತದೆ ಎಂಬ ಸಂದೇಶ ಸಾರಿದರು.

ನಗರದ ನ್ಯೂ ಸಯಾಜಿರಾವ್ ರಸ್ತೆಯಲ್ಲಿರುವ ಜೀವದಾರ ರಕ್ತ ನಿಧಿ ಕೇಂದ್ರಕ್ಕೆ ಭೇಟಿ ನೀಡಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ರಕ್ತದಾನ ಜಾಗೃತಿಗೆ ಚಾಲನೆ ನೀಡಿದರು. ದಾನಗಳಲ್ಲಿ ಶ್ರೇಷ್ಠ ದಾನ ಎಂದರೆ ಅದು ರಕ್ತದಾನ, ರಕ್ತದಾನಕ್ಕೆ ಯಾರು ಬೆಲೆ ಕಟ್ಟಲು ಸಾಧ್ಯವಿಲ್ಲ, ರಕ್ತದಾನ ಮಾಡಿದರೆ ಆರೋಗ್ಯ ಲಾಭಗಳಿವೆ. ಹಾಗಾಗಿ ಯುವಕರು ಹಾಗೂ ಆರೋಗ್ಯವಂತರು ಹೆಚ್ಚಾಗಿ ರಕ್ತದಾನ ಮಾಡುವ ಮೂಲಕ ಇತರರ ಪ್ರಾಣವನ್ನು ಕಾಪಾಡಬೇಕು, ಕೆಲವು ಸಂದರ್ಭದಲ್ಲಿ ಎಷ್ಟೇ ಕೋಟಿ ಇದ್ದರೂ ಸಹ ನಮಗೆ ಬೇಕಾದ ರಕ್ತ ಸಿಗುವುದಿಲ್ಲ, ಆ ಕಾರಣ ರಕ್ತವು ಬಹಳ ಅಮೂಲ್ಯ, ಇತ್ತೀಚಿನ ದಿನಗಳಲ್ಲಿ ಕೆಲ ಯುವಕರು ಮಧ್ಯ ಸೇವನೆ ಸೇರಿದಂತೆ ಅನೇಕ ದುಷ್ಚಟಗಳಿಂದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ, ಚಟಗಳಿಗೆ ಬಲಿಯಾಗದೆ ಆರೋಗ್ಯವಂತರಾಗಿ ಬಾಳಬೇಕು, ನಾನು ಸಹ ಈಗಾಗಲೇ 20 ಬಾರಿ ರಕ್ತದಾನ ಮಾಡಿದ್ದೇನೆ ಪ್ರತಿ ವರ್ಷ 3 ಬಾರಿ ರಕ್ತದಾನ ಮಾಡುತ್ತೇನೆ ಎಂದು ರಕ್ತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರು.

# ವ್ಯಾಯಾಮದ ಹೊಸ ಪರಿಕಲ್ಪನೆ: ಸ್ನ್ಯಾಕ್ ಎಕ್ಸಸೈಸಿಂಗ್



ಇಂದಿನ ಯಾಂತ್ರಿಕ ಹಾಗೂ ಬಿಡುವಿಲ್ಲದ ಜೀವನಶೈಲಿಯಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಒಂದು ದೊಡ್ಡ ಸವಾಲಾಗಿದೆ. "ದಿನಕ್ಕೆ ಕನಿಷ್ಠ ಅರ್ಧ ಗಂಟೆಯಾದರೂ ಸತತವಾಗಿ ವ್ಯಾಯಾಮ ಮಾಡಬೇಕು" ಎಂಬ ಸಾಂಪ್ರದಾಯಿಕ ನಿಯಮವನ್ನು ಪಾಲಿಸಲು ಹಲವರಿಗೆ ಸಮಯದ ಅಭಾವ ಅಥವಾ ನಿರಾಸಕ್ತಿ ಅಡ್ಡಿಯಾಗುತ್ತದೆ. ಇಂತಹ ಸಂದರ್ಭದಲ್ಲಿ ಜಾಗತಿಕವಾಗಿ ಮುಂಚೂಣಿಗೆ ಬರುತ್ತಿರುವ ಒಂದು ವಿನೂತನ ಹಾಗೂ ವೈಜ್ಞಾನಿಕ ಪರಿಕಲ್ಪನೆಯೇ ಸ್ನ್ಯಾಕ್ ಎಕ್ಸಸೈಸಿಂಗ್ (Snack Exercising) ಅಥವಾ ಲಘು ವ್ಯಾಯಾಮ. ನಾವು ಹಸಿವಾದಾಗ ನಡುವೆ ಲಘು ಉಪಹಾರ (ಸ್ನ್ಯಾಕ್ಸ್) ಸೇವಿಸುವಂತೆ, ದಿನದ ವಿವಿಧ ಅವಧಿಗಳಲ್ಲಿ ಸಿಗುವ ಸಣ್ಣ ಸಣ್ಣ ಬಿಡುವಿನಲ್ಲಿ ಮಾಡುವ ಅಲ್ಪಾವಧಿಯ ಶಾರೀರಿಕ ಚಟುವಟಿಕೆಯೇ ಈ ವ್ಯಾಯಾಮದ ತುತ್ತು .

**ಸ್ನ್ಯಾಕ್ ಎಕ್ಸಸೈಸಿಂಗ್ ಎಂದರೇನು**

ಸತತವಾಗಿ 30 ರಿಂದ 40 ನಿಮಿಷಗಳ ಕಾಲ ಜಿಮ್‌ನಲ್ಲಿ ಕಳೆಯುವ ಬದಲಾಗಿ, ಇಡೀ ದಿನದಲ್ಲಿ ಸಿಗುವ ಸಣ್ಣ ಬಿಡುವನ್ನು ಬಳಸಿಕೊಂಡು 1 ರಿಂದ 5 ನಿಮಿಷಗಳ ಕಾಲ ತೀವ್ರ ಅಥವಾ ಮಧ್ಯಮ ಗತಿಯ ಶಾರೀರಿಕ ಚಟುವಟಿಕೆಯಲ್ಲಿ ತೊಡಗುವುದನ್ನು ಇದು ಸೂಚಿಸುತ್ತದೆ. ವೈದ್ಯಕೀಯ ಜಗತ್ತಿನಲ್ಲಿ ಇದನ್ನು VILPA (Vigorous Intermittent Physical Activity – ತೀವ್ರ ತರಹದ ಬಿಟ್ಟು ಬಿಟ್ಟು ಮಾಡುವ ಶಾರೀರಿಕ ಚಟುವಟಿಕೆ) ಎಂದು ಕರೆಯಲಾಗುತ್ತದೆ. ಇದಕ್ಕಾಗಿ ಯಾವುದೇ ವಿಶೇಷ ಉಪಕರಣಗಳಾಗಲಿ ಅಥವಾ ಜಿಮ್‌ನ ಉಡುಪುಗಳಾಗಲಿ ಬೇಕಾಗಿಲ್ಲ. ಕಚೇರಿಯಲ್ಲೋ, ಮನೆಯಲ್ಲೋ ಇದ್ದ ಜಾಗದಲ್ಲೇ ಇದನ್ನು ಸುಲಭವಾಗಿ ಮಾಡಬಹುದು.

ಕುಳಿತುಕೊಳ್ಳುವಿಕೆ ಎಂಬ ನಿಧಾನ ಸಾವು (The Danger of Sitting) ಆಧುನಿಕ ಜಗತ್ತಿನಲ್ಲಿ "ಕುಳಿತುಕೊಳ್ಳುವುದು ಹೊಸ ಧೂಮಪಾನಕ್ಕೆ ಸಮ (Sitting is the new smoking)" ಎಂಬ ಮಾತು ಚಾಲ್ತಿಯಲ್ಲಿದೆ. ಬೆಳಿಗ್ಗೆ ಒಂದು ಗಂಟೆ ಜಿಮ್‌ಗೆ ಹೋಗಿ, ನಂತರದ 9 ಗಂಟೆಗಳನ್ನು ಕುಳಿತೇ ಕಳೆಯುವ ವ್ಯಕ್ತಿಗಿಂತ, ದಿನವಿಡೀ ಸಕ್ರಿಯವಾಗಿರುವ ವ್ಯಕ್ತಿಯ ಚಯಾಪಚಯ ಕ್ರಿಯೆ (Metabolism) ಉತ್ತಮವಾಗಿರುತ್ತದೆ. ದೀರ್ಘಕಾಲ ಒಂದೇ ಕಡೆ ಕುಳಿತುಕೊಳ್ಳುವುದರಿಂದ ದೇಹದಲ್ಲಿ ಕೊಬ್ಬನ್ನು ಕರಗಿಸುವ 'ಲಿಪೊಪ್ರೋಟೀನ್ ಲಿಪೇಸ್' (Lipoprotein Lipase) ಎಂಬ ಕಿಣ್ವದ ಉತ್ಪತ್ತಿ ಕುಂಠಿತಗೊಳ್ಳುತ್ತದೆ. 'ಸ್ನ್ಯಾಕ್ ಎಕ್ಸಸೈಸಿಂಗ್' ಈ ಜಡತ್ವದ ಸರಪಳಿಯನ್ನು ಪ್ರತಿ ಗಂಟೆಗೊಮ್ಮೆ ಮುರಿಯುವ ಕೆಲಸ ಮಾಡುತ್ತದೆ.

**ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವ ಪ್ರಾಯೋಗಿಕ ವಿಧಾನಗಳು:** ನಮ್ಮ ದಿನಚರಿಯನ್ನು ಸೂಕ್ಷ್ಮವಾಗಿ ಗಮನಿಸಿದರೆ, ಇಂತಹ ಲಘು ವ್ಯಾಯಾಮಗಳಿಗೆ ಸಾಕಷ್ಟು ಅವಕಾಶಗಳು ಸಿಗುತ್ತವೆ:

ಮೆಟ್ಟಿಲು ಹತ್ತುವುದು : ಕಚೇರಿ ಅಥವಾ ಅಪಾರ್ಟ್‌ಮೆಂಟ್‌ಗಳಲ್ಲಿ ಲಿಫ್ಟ್ ಬಳಸುವ ಬದಲಿಗೆ ದಿನಕ್ಕೆ ಎರಡು ಬಾರಿಯಾದರೂ 2–3 ಮಹಡಿಗಳನ್ನು ತೀವ್ರ ಗತಿಯಲ್ಲಿ ಮೆಟ್ಟಿಲುಗಳ ಮೂಲಕ ಹತ್ತುವುದು. ಇದು ಅತ್ಯುತ್ತಮ ಕಾರ್ಡಿಯೋ (Cardio) ವ್ಯಾಯಾಮ.

ಡೆಸ್ಕ್ ವಿರಾಮ: ಸತತವಾಗಿ ಕಂಪ್ಯೂಟರ್ ಮುಂದೆ ಕುಳಿತು ಕೆಲಸ ಮಾಡುವವರು ಪ್ರತಿ ಒಂದು ಗಂಟೆಗೊಮ್ಮೆ ಅಲಾರಾಂ ಇಟ್ಟುಕೊಂಡು ಎದ್ದು ನಿಲ್ಲಬೇಕು. ಕೇವಲ 1 ನಿಮಿಷ ವೇಗವಾಗಿ ಇದ್ದ ಜಾಗದಲ್ಲೇ ಹೆಜ್ಜೆ ಹಾಕುವುದು (Spot Walking) ಅಥವಾ 10–12 ಬಾರಿ ಕುಳಿತು ಏಳುವುದು (Squats) ದೇಹದ ಕೆಳಭಾಗದ ಸ್ನಾಯುಗಳನ್ನು ಜಾಗೃತಗೊಳಿಸುತ್ತದೆ.

**ಸಂವಹನದ ನಡಿಗೆ:** ಕಚೇರಿಯ ಫೋನ್ ಕರೆಗಳಲ್ಲಿ ಮಾತನಾಡುವಾಗ ಅಥವಾ ಸಣ್ಣ ಸಭೆಗಳ ಸಮಯದಲ್ಲಿ ಕುಳಿತುಕೊಳ್ಳುವ ಬದಲಿಗೆ ನಿಂತು ನಡೆದಾಡುವ ಹವ್ಯಾಸ ರೂಢಿಸಿಕೊಳ್ಳುವುದು.

**ಮನೆಯ ಕೆಲಸಗಳ ವೇಗ:** ಮನೆಯಲ್ಲಿ ತರಕಾರಿ ತರಲು ವಾಹನ ಬಳಸದೆ ನಡೆದುಕೊಂಡು ಹೋಗುವುದು, ಅಥವಾ ಕಸ ಗುಡಿಸುವಿಕೆ, ಒರೆಸುವಿಕೆಯಂತಹ ದೈನಂದಿನ ಕೆಲಸಗಳನ್ನು ತುಸು ವೇಗವಾಗಿ ಮಾಡುವುದರಿಂದ ದೇಹದಲ್ಲಿ ರಕ್ತಚಲನೆ ಹೆಚ್ಚುತ್ತದೆ.

ಪ್ರಮುಖ ಆರೋಗ್ಯಕಾರಿ ಪ್ರಯೋಜನಗಳು

1. **ರಕ್ತದ ಸಕ್ಕರೆ ಪ್ರಮಾಣದ ನಿಯಂತ್ರಣ:** ಪ್ರತಿ ಬಾರಿ ನಾವು ಆಹಾರ ಸೇವಿಸಿದಾಗಲೂ ರಕ್ತದಲ್ಲಿ ಗ್ಲುಕೋಸ್ ಮಟ್ಟ ಏರುತ್ತದೆ. ಪ್ರಖ್ಯಾತ ಕ್ರೀಡಾ ವಿಜ್ಞಾನ ಸಂಸ್ಥೆಗಳ ಪ್ರಕಾರ, ಆಹಾರ ಸೇವಿಸಿದ ನಂತರ ಕೇವಲ 2 ರಿಂದ 5 ನಿಮಿಷಗಳ ಕಾಲ ಲಘುವಾಗಿ ನಡೆದಾಡುವುದರಿಂದ ಇನ್ಸುಲಿನ್ ಕಾರ್ಯಕ್ಷಮತೆ ಹೆಚ್ಚಿ, ಸಕ್ಕರೆಯ ಮಟ್ಟ ತಕ್ಷಣವೇ ಸಮತೋಲನಕ್ಕೆ ಬರುತ್ತದೆ. ಇದು ಮಧುಮೇಹಿಗಳಿಗೆ ಅತ್ಯಂತ ಪ್ರಯೋಜನಕಾರಿ.
2. **ಹೃದಯ ಮತ್ತು ರಕ್ತನಾಳಗಳ ರಕ್ಷಣೆ:** ಅಲ್ಪಾವಧಿಯ ತೀವ್ರ ನಡಿಗೆಯು ಹೃದಯದ ಬಡಿತವನ್ನು (Heart Rate) ಕ್ಷಣಕಾಲ ಹೆಚ್ಚಿಸುತ್ತದೆ. ಇದು ರಕ್ತನಾಳಗಳ ಸ್ಥಿತಿಸ್ಥಾಪಕತ್ವವನ್ನು (Elasticity) ಕಾಪಾಡಿಕೊಳ್ಳಲು ನೆರವಾಗುತ್ತದೆ ಮತ್ತು ದೀರ್ಘಾವಧಿಯಲ್ಲಿ ಅಧಿಕ ರಕ್ತದೊತ್ತಡದ (Hypertension) ಅಪಾಯವನ್ನು ಕಡಿಮೆ ಮಾಡುತ್ತದೆ.



3. **ಮಾನಸಿಕ ಆಯಾಸ ನಿವಾರಣೆ:** ನಿರಂತರ ಬೌದ್ಧಿಕ ಕೆಲಸದಿಂದ ಮೆದುಳಿಗೆ ಆಯಾಸವಾದಾಗ, ಕೇವಲ 2 ನಿಮಿಷಗಳ ಶಾರೀರಿಕ ಚಟುವಟಿಕೆಯು ಮೆದುಳಿಗೆ ಆಮ್ಲಜನಕದ ಪೂರೈಕೆಯನ್ನು ಹೆಚ್ಚಿಸುತ್ತದೆ. ಇದು ಎಂಡಾರ್ಫಿನ್ (Endorphins) ಹಾರ್ಮೋನ್‌ಗಳನ್ನು ಬಿಡುಗಡೆ ಮಾಡಿ, ಆಲಸ್ಯವನ್ನು ದೂರಾಗಿಸಿ ಏಕಾಗ್ರತೆಯನ್ನು ಮರುಸ್ಥಾಪಿಸುತ್ತದೆ.

ವೈಚಾರಿಕ ತಡೆಗೋಡೆಗಳನ್ನು ದಾಟುವುದು ನಮ್ಮಲ್ಲಿ ಅನೇಕರಿಗೆ ವ್ಯಾಯಾಮ ಎಂದರೆ ಅದಕ್ಕೊಂದು ನಿರ್ದಿಷ್ಟ ಸಮಯ, ಉಡುಪು ಮತ್ತು ವಾತಾವರಣ ಇರಬೇಕು ಎಂಬ ಮಾನಸಿಕ ಚೌಕಟ್ಟಿದೆ. ಆದರೆ ಪ್ರಕೃತಿಯ ದೃಷ್ಟಿಯಲ್ಲಿ ದೇಹದ ಚಲನೆಯಷ್ಟೇ ಮುಖ್ಯ. "ಸ್ವಲ್ಪ ಮಾಡುವುದು ಏನನ್ನೂ ಮಾಡದಿರುವುದಕ್ಕಿಂತ ಎಷ್ಟೋ ಮೇಲು" ಎಂಬ ತತ್ವ ಇಲ್ಲಿ ಅನ್ವಯವಾಗುತ್ತದೆ. ದಿನಕ್ಕೆ ಮೂರು ಬಾರಿ ಮಾಡುವ 5 ನಿಮಿಷಗಳ ಲಘು ಚಟುವಟಿಕೆಯು, ವಾರದ ಕೊನೆಯಲ್ಲಿ 105 ನಿಮಿಷಗಳ ಸಕ್ರಿಯ ಚಲನೆಯಾಗಿ ಬದಲಾಗುತ್ತದೆ.

ಆರೋಗ್ಯ ರಕ್ಷಣೆ ಎನ್ನುವುದು ಕಠಿಣ ನಿಯಮಗಳ ಜೈಲಾಗಬೇಕಾಗಿಲ್ಲ. "ಸಮಯವಿಲ್ಲ" ಎಂಬ ನೆಪದ ಹಿಂದೆ ಸರಿಯುವ ಮುನ್ನ, ದಿನದ ಇಪ್ಪತ್ತನಾಲ್ಕು ಗಂಟೆಗಳಲ್ಲಿ ಸಿಗುವ ಸಣ್ಣ ಸಣ್ಣ ನಿಮಿಷಗಳನ್ನು ಒಟ್ಟುಗೂಡಿಸಿ ದೇಹಕ್ಕೆ ಶ್ರಮ ನೀಡುವುದು ಬುದ್ಧಿವಂತಿಕೆ. ದೊಡ್ಡ ಗುರಿಗಳನ್ನು ಇಟ್ಟುಕೊಂಡು ಅರ್ಧಕ್ಕೆ ಕೈಬಿಡುವುದಕ್ಕಿಂತ, ಇಂತಹ ಸಣ್ಣ ಮತ್ತು ಪ್ರಾಯೋಗಿಕ ಬದಲಾವಣೆಗಳು ನಮ್ಮ ಬದುಕಿನ ಶೈಲಿಯನ್ನೇ ಬದಲಿಸಬಲ್ಲವು. ಹನಿ ಹನಿ ಸೇರಿದರೆ ಹಳ್ಳ ಎಂಬಂತೆ, ಈ ವ್ಯಾಯಾಮದ ತುತ್ತುಗಳು ದೀರ್ಘಾಯುಷ್ಯದ ಹಾದಿಗೆ ಗಟ್ಟಿ ಬುನಾದಿಯಾಗಬಲ್ಲವು.

ಆರೋಗ್ಯ ಭಾಗ್ಯ



| ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com

# ತಾಯಿ (ಅತ್ತೆ)ಯ ಮಮತೆ, ಮಗಳ (ಸೊಸೆ) ಪ್ರೀತಿ ವೃದ್ಧಾಶ್ರಮಗಳಿಗೆ ವಿದಾಯ



| ಶಿವಬಸಪ್ಪ ಗು ಜಂಗಾಲಿ
ಲೇಖಕರು




ಮಾನವ ಜೀವನದಲ್ಲಿ ಸಂಬಂಧಗಳಷ್ಟು ಅಮೂಲ್ಯವಾದ ಸಂಪತ್ತು ಮತ್ತೊಂದಿಲ್ಲ. ಹಣ, ಆಸ್ತಿ, ಅಧಿಕಾರ ಮತ್ತು ಖ್ಯಾತಿ ಎಲ್ಲವೂ ಕಾಲದೊಂದಿಗೆ ಬದಲಾಗಬಹುದು. ಆದರೆ ಹೃದಯಗಳನ್ನು ಜೋಡಿಸುವ ಪ್ರೀತಿ, ಮಮತೆ ಮತ್ತು ಆತ್ಮೀಯತೆಯ ಬಂಧ ಮಾತ್ರ ಶಾಶ್ವತವಾಗಿ ಉಳಿಯುತ್ತದೆ. ಒಂದು ಕುಟುಂಬದ ನಿಜವಾದ ಶ್ರೀಮಂತಿಕೆ ಅದರ ಬ್ಯಾಂಕ್ ಖಾತೆಯಲ್ಲಿ ಇರುವ ಹಣದಿಂದ ಅಳೆಯಲ್ಪಡುವುದಿಲ್ಲ; ಅದರ ಸದಸ್ಯರ ನಡುವೆ ಇರುವ ಪ್ರೀತಿ, ಪರಸ್ಪರ ಗೌರವ ಮತ್ತು ವಿಶ್ವಾಸದಿಂದ ಅಳೆಯಲ್ಪಡುತ್ತದೆ.

ಇಂದು ಸಮಾಜವು ವಿಜ್ಞಾನ, ತಂತ್ರಜ್ಞಾನ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಅಪೂರ್ವವಾದ ಪ್ರಗತಿಯನ್ನು ಸಾಧಿಸಿದೆ. ಜನರ ಜೀವನಮಟ್ಟ ಸುಧಾರಿಸಿದೆ. ಮನೆಗಳು ದೊಡ್ಡದಾಗಿವೆ. ಸೌಲಭ್ಯಗಳು ಹೆಚ್ಚಾಗಿವೆ. ಆದರೆ ಈ ಎಲ್ಲ ಬೆಳವಣಿಗೆಗಳ ಮಧ್ಯೆ ಕೆಲವು ಅಮೂಲ್ಯವಾದ ಕುಟುಂಬ ಮೌಲ್ಯಗಳು ನಿಧಾನವಾಗಿ ಮರೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಅದರ ಅತ್ಯಂತ ನೋವಿನ ಪ್ರತಿಫಲವೇ ಹೆಚ್ಚುತ್ತಿರುವ ವೃದ್ಧಾಶ್ರಮಗಳು.

ತಮ್ಮ ಮಕ್ಕಳ ಭವಿಷ್ಯಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟ ತಂದೆ–ತಾಯಿಗಳು, ವಯಸ್ಸಾದಾಗ ತಮ್ಮ ಮನೆಯ ಬದಲು ವೃದ್ಧಾಶ್ರಮದಲ್ಲಿ ಆಶ್ರಯ ಪಡೆಯಬೇಕಾಗಿರುವುದು ಕೇವಲ ವೈಯಕ್ತಿಕ ದುರಂತವಲ್ಲ; ಅದು ಸಾಮಾಜಿಕವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕಾದ ವಿಷಯವಾಗಿದೆ. ಮಕ್ಕಳು ನಡೆಯಲು ಕಲಿತಾಗ ಕೈಹಿಡಿದವರು ತಂದೆ–ತಾಯಿಗಳು. ಅವರು ಬಿದ್ದು ಅಳುವಾಗ ಎತ್ತಿಕೊಂಡವರು ತಂದೆ ತಾಯಿಗಳು. ತಮ್ಮ ಸಂತೋಷಗಳನ್ನು ತ್ಯಾಗ ಮಾಡಿ ಮಕ್ಕಳ ಕನಸುಗಳಿಗೆ ರೆಕ್ಕೆ ಕೊಟ್ಟವರು ಅವರೇ. ಆದರೆ ಜೀವನದ ಸಂಧ್ಯಾಕಾಲದಲ್ಲಿ ಅವರ ಕಣ್ಣಲ್ಲಿ ಕಾಣಿಸಿಕೊಳ್ಳುವ ಏಕಾಂತದ ನೆರಳು ನಮ್ಮ ಸಮಾಜದ ಸಂವೇದನಾಶೀಲತೆಯ ಮೇಲೆಯೇ ಪ್ರಶ್ನಾರ್ಥಕ ಚಿಹ್ನೆ ಮೂಡಿಸುತ್ತದೆ.

ಕುಟುಂಬದಲ್ಲಿ ಅತ್ತೆ–ಸೊಸೆ ಸಂಬಂಧವನ್ನು ಸಾಮಾನ್ಯವಾಗಿ ಸಂಘರ್ಷ, ಭಿನ್ನಾಭಿಪ್ರಾಯ ಮತ್ತು ಕಲಹಗಳ ದೃಷ್ಟಿಯಿಂದ ನೋಡುವ ಪ್ರವೃತ್ತಿ ಇದೆ. ಅನೇಕ ಧಾರಾವಾಹಿಗಳು, ಕಥೆಗಳು ಮತ್ತು ಸಾಮಾಜಿಕ ಚರ್ಚೆಗಳು ಈ ಸಂಬಂಧವನ್ನು ನಕಾರಾತ್ಮಕವಾಗಿ ಚಿತ್ರಿಸುತ್ತವೆ. ಆದರೆ ವಾಸ್ತವದಲ್ಲಿ ಅತ್ತೆ–ಸೊಸೆ ಸಂಬಂಧವು ಕುಟುಂಬವನ್ನು ಗಟ್ಟಿಗೊಳಿಸುವ ಅತ್ಯಂತ ಶಕ್ತಿಯುತ ಬಾಂಧವ್ಯವಾಗುವ ಸಾಮರ್ಥ್ಯವನ್ನು ಹೊಂದಿದೆ.

ಒಬ್ಬ ಮಹಿಳೆ ಮದುವೆಯಾಗಿ ಹೊಸ ಮನೆಗೆ ಬಂದಾಗ, ಆಕೆ ಕೇವಲ ವಿಳಾಸವನ್ನು ಬದಲಾಯಿಸುವುದಿಲ್ಲ. ತನ್ನ ಬಾಲ್ಯದ ನೆನಪುಗಳು, ತಂದೆ–ತಾಯಿಯ ಮಮತೆ ಮತ್ತು ಪರಿಚಿತ ವಾತಾವರಣವನ್ನು ಬಿಟ್ಟು ಸಂಪೂರ್ಣ ಹೊಸ ಬದುಕಿಗೆ ಕಾಲಿಡುತ್ತಾಳೆ. ಆಕೆಯ ಮನಸ್ಸಿನಲ್ಲಿ ಅನೇಕ ಪ್ರಶ್ನೆಗಳು, ನಿರೀಕ್ಷೆಗಳು ಮತ್ತು ಕನಸುಗಳು ಇರುತ್ತವೆ. ಅಂತಹ ಸಂದರ್ಭದಲ್ಲಿ ಅತ್ತೆಯ ಪ್ರೀತಿ ಆಕೆಗೆ ಹೊಸ ಬದುಕಿನ ಧೈರ್ಯ ನೀಡುತ್ತದೆ. ಅತ್ತೆ ಸೊಸೆಯನ್ನು ಕೇವಲ ಮನೆಯ ಸದಸ್ಯಳಾಗಿ ಅಲ್ಲ, ತನ್ನ ಮಗಳಾಗಿ ಸ್ವೀಕರಿಸಿದಾಗ ಆಕೆಯ ಭಯ ಕರಗುತ್ತದೆ ಮತ್ತು ಆತ್ಮೀಯತೆ ಮೊಳೆಯುತ್ತದೆ.

ಸೊಸೆ ಎಂಬ ಪದದಲ್ಲಿ ಸಂಬಂಧದ ಗುರುತು ಇದೆ. ಆದರೆ ಮಗಳು ಎಂಬ ಪದದಲ್ಲಿ ಹೃದಯದ ಸ್ಪರ್ಶವಿದೆ. ಅತ್ತೆಯ ಮನಸ್ಸಿನಲ್ಲಿ ಸೊಸೆ ಮಗಳ ಸ್ಥಾನ ಪಡೆದಾಗ ಮನೆಯ ವಾತಾವರಣವೇ ಬದಲಾಗುತ್ತದೆ. ಆದೇಶಗಳ ಜಾಗದಲ್ಲಿ ಆತ್ಮೀಯತೆ ಬರುತ್ತದೆ. ದೂರಗಳ ಜಾಗದಲ್ಲಿ ವಿಶ್ವಾಸ ಬೆಳೆಯುತ್ತದೆ. ಅನುಮಾನಗಳ ಜಾಗದಲ್ಲಿ ಪ್ರೀತಿ ನೆಲೆಸುತ್ತದೆ.

ಹಾಗೆಯೇ ಸೊಸೆಯ ಪಾತ್ರವೂ ಅಷ್ಟೇ ಮಹತ್ವದ್ದಾಗಿದೆ. ಅತ್ತೆಯನ್ನು ಕೇವಲ ಗಂಡನ ತಾಯಿಯಾಗಿ ನೋಡುವುದಕ್ಕಿಂತ, ಜೀವನದ ಅನುಭವಗಳನ್ನು ಹೊಂದಿರುವ ಹಿರಿಯೆಯಾಗಿ, ತಾಯಿಯ ಸಮಾನ ಗೌರವಕ್ಕೆ ಅರ್ಹಳಾಗಿ ಕಾಣುವ ಮನೋಭಾವನೆ ಬೆಳೆಸಿಕೊಳ್ಳಬೇಕು. ಪ್ರತಿಯೊಬ್ಬ ತಾಯಿಯಂತೆ ಅತ್ತೆಯೂ ತನ್ನ ಮಗನ ಬಗ್ಗೆ ಅಪಾರ ಪ್ರೀತಿ ಹೊಂದಿರುತ್ತಾಳೆ. ಆ ಪ್ರೀತಿಯನ್ನು ಅರ್ಥಮಾಡಿಕೊಳ್ಳುವ ಪ್ರಯತ್ನವೇ ಅತ್ತೆ–ಸೊಸೆ ಸಂಬಂಧವನ್ನು ಸುಂದರಗೊಳಿಸುತ್ತದೆ.

ಸಂಬಂಧಗಳನ್ನು ಉಳಿಸುವುದು ರಕ್ತದ ಸಂಬಂಧಗಳಲ್ಲ; ಪರಸ್ಪರ ಅರ್ಥಮಾಡಿಕೊಳ್ಳುವಿಕೆಯಾಗಿದೆ. ಒಂದು ಕುಟುಂಬದಲ್ಲಿ ಭಿನ್ನಾಭಿಪ್ರಾಯಗಳು ಬರುವುದು ಸಹಜ. ಆದರೆ ಅವುಗಳನ್ನು ಅಹಂಕಾರದಿಂದಲ್ಲ, ಪ್ರೀತಿಯಿಂದ ಪರಿಹರಿಸುವ ಮನಸ್ಸು ಇರಬೇಕು. ಕೆಲವೊಮ್ಮೆ ಒಂದು ನಗು, ಒಂದು ಸಾಂತ್ವನದ ಮಾತು ಅಥವಾ ಒಂದು ಕ್ಷಮೆ ವರ್ಷಗಳ ಅಂತರವನ್ನು ಕ್ಷಣಾರ್ಧದಲ್ಲಿ ಕಡಿಮೆ ಮಾಡಬಲ್ಲದು.

ವೃದ್ಧಾಶ್ರಮಗಳಲ್ಲಿರುವ ಅನೇಕ ಹಿರಿಯರ ಜೀವನ ಕಥೆಗಳು ಒಂದೇ ಸಂದೇಶವನ್ನು ಹೇಳುತ್ತವೆ. ಅವರಿಗೆ ಬೇಕಾಗಿರುವುದು ದುಬಾರಿ ಸೌಲಭ್ಯಗಳಲ್ಲ. ಅವರ ಆಸೆ ಕೇವಲ ತಮ್ಮ ಮಕ್ಕಳೊಂದಿಗೆ ಕೆಲವು ಕ್ಷಣಗಳನ್ನು ಕಳೆಯುವುದು. ಮೊಮ್ಮಕ್ಕಳ ನಗುವನ್ನು ಕೇಳುವುದು. ಮನೆಯ ಗದ್ದಲದಲ್ಲಿ ತಮ್ಮ ಬದುಕಿನ ಉಳಿದ ದಿನಗಳನ್ನು ಸಂತೋಷದಿಂದ ಕಳೆಯುವುದು. ಅವರ ಹೃದಯದ ಅತ್ಯಂತ ದೊಡ್ಡ ಆಸೆ ಎಂದರೆ "ನಾನು ನನ್ನವರ ನಡುವೆ ಇರಬೇಕು" ಎಂಬುದಾಗಿದೆ.

ಮನೆಯ ಹಿರಿಯರು ಕುಟುಂಬದ ಇತಿಹಾಸದ ಜೀವಂತ ಪುಟಗಳಂತವರು. ಅವರ ಅನುಭವಗಳು ಮುಂದಿನ ಪೀಳಿಗೆಗೆ ದಾರಿದೀಪವಾಗುತ್ತವೆ. ಅವರು ಎದುರಿಸಿದ ಕಷ್ಟಗಳು, ಸಾಧಿಸಿದ ಯಶಸ್ಸುಗಳು ಮತ್ತು ಕಲಿತ ಜೀವನ ಪಾಠಗಳು ಕುಟುಂಬದ ಅಮೂಲ್ಯವಾದ ಸಂಪತ್ತಾಗಿವೆ. ಅವರನ್ನು ನಿರ್ಲಕ್ಷಿಸುವುದು ಎಂದರೆ ನಮ್ಮದೇ ಬೇರುಗಳನ್ನು ದುರ್ಬಲಗೊಳಿಸುವಂತಾಗಿದೆ.

ಇಂದಿನ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಅಗತ್ಯ. ಆದರೆ ಅದಕ್ಕಿಂತಲೂ ಮುಖ್ಯವಾಗಿ ಅವರಿಗೆ ಮಾನವೀಯ ಮೌಲ್ಯಗಳನ್ನು ಕಲಿಸಬೇಕು. ಹಿರಿಯರನ್ನು ಗೌರವಿಸುವುದು, ಕುಟುಂಬದ ಜವಾಬ್ದಾರಿಗಳನ್ನು ಅರ್ಥಮಾಡಿಕೊಳ್ಳುವುದು ಮತ್ತು ಸಂಬಂಧಗಳ ಮೌಲ್ಯವನ್ನು ಅರಿಯುವುದು ಜೀವನದ ನಿಜವಾದ ಶಿಕ್ಷಣವಾಗಿದೆ. ಯಾಕೆಂದರೆ ಮಕ್ಕಳು ನಾವು ಹೇಳುವುದಕ್ಕಿಂತ ನಾವು ಬದುಕುವುದನ್ನು ಹೆಚ್ಚು ಕಲಿಯುತ್ತಾರೆ.

ತಾಯಿ(ಅತ್ತೆ)ಯ ಮಮತೆ ಮತ್ತು ಮಗಳ(ಸೊಸೆ) ಪ್ರೀತಿ ಒಂದಾಗುವ ಕುಟುಂಬದಲ್ಲಿ ವೃದ್ಧಾಶ್ರಮಗಳಿಗೆ ಸ್ಥಳವೇ ಇರುವುದಿಲ್ಲ. ಅಲ್ಲಿ ಹಿರಿಯರು ಗೌರವದಿಂದ ಬದುಕುತ್ತಾರೆ. ಮಕ್ಕಳು ಸಂಸ್ಕಾರದ ವಾತಾವರಣದಲ್ಲಿ ಬೆಳೆಯುತ್ತಾರೆ. ಕುಟುಂಬದ ಪ್ರತಿಯೊಬ್ಬ ಸದಸ್ಯನು ತನ್ನನ್ನು ಸುರಕ್ಷಿತವಾಗಿ ಮತ್ತು ಪ್ರೀತಿಯಿಂದ ಸ್ವೀಕರಿಸಲ್ಪಟ್ಟವನಾಗಿ ಅನುಭವಿಸುತ್ತಾನೆ.

ಪ್ರೀತಿ ಇರುವಲ್ಲಿ ಸಂಬಂಧಗಳು ಅರಳುತ್ತವೆ. ಗೌರವ ಇರುವಲ್ಲಿ ಮನಸ್ಸುಗಳು ಹತ್ತಿರವಾಗುತ್ತವೆ. ಕರುಣೆ ಇರುವಲ್ಲಿ ಏಕಾಂತ ಕರಗುತ್ತದೆ. ಕುಟುಂಬದ ಈ ಮೂರು ಮೌಲ್ಯಗಳು ಜೀವಂತವಾಗಿರುವವರೆಗೆ ಯಾವುದೇ ಹಿರಿಯರು ಆಶ್ರಮದ ಬಾಗಿಲು ತಟ್ಟುವ ಪರಿಸ್ಥಿತಿ ಎದುರಾಗುವುದಿಲ್ಲ.

ಆದ್ದರಿಂದ ಪ್ರತಿಯೊಂದು ಮನೆಯಲ್ಲು ಒಂದು ಸಂಕಲ್ಪ ಮೂಡಬೇಕು. ಅತ್ತೆ ಸೊಸೆಯನ್ನು ಮಗಳಂತೆ ಪ್ರೀತಿಸಬೇಕು. ಸೊಸೆ ಅತ್ತೆಯನ್ನು ತಾಯಿಯಂತೆ ಗೌರವಿಸಬೇಕು. ಈ ಭಾವನೆಗಳು ಕೇವಲ ಮಾತುಗಳಲ್ಲಿ ಅಲ್ಲ, ದೈನಂದಿನ ಜೀವನದಲ್ಲಿ ಪ್ರತಿಫಲಿಸಬೇಕು. ಆಗ ಮಾತ್ರ ಕುಟುಂಬಗಳು ಇನ್ನಷ್ಟು ಗಟ್ಟಿಯಾಗುತ್ತವೆ. ಸಮಾಜ ಮತ್ತಷ್ಟು ಮಾನವೀಯವಾಗುತ್ತದೆ.

ಯಾಕೆಂದರೆ ಜಗತ್ತಿನ ಅತ್ಯುತ್ತಮ ಆಶ್ರಯ ಯಾವ ಕಟ್ಟಡವೂ ಅಲ್ಲ; ಅದು ಪ್ರೀತಿಯಿಂದ ತುಂಬಿದ ಮನೆ. ಹಿರಿಯರಿಗೆ ಅತ್ಯಂತ ಸುರಕ್ಷಿತ ಸ್ಥಳ ಯಾವ ಸಂಸ್ಥೆಯು ಅಲ್ಲ; ಅದು ತಮ್ಮವರ ಹೃದಯ. ತಾಯಿ(ಅತ್ತೆ)ಯ ಮಮತೆ ಮತ್ತು ಮಗಳ(ಸೊಸೆ) ಪ್ರೀತಿ ಒಂದಾಗುವ ದಿನ, ವೃದ್ಧಾಶ್ರಮಗಳ ಅಗತ್ಯವೇ ಕಡಿಮೆಯಾಗುತ್ತದೆ. ಆ ದಿನವೇ ನಮ್ಮ ಕುಟುಂಬ ವ್ಯವಸ್ಥೆಯ ನಿಜವಾದ ಗೆಲುವಿನ ದಿನವಾಗಿರುತ್ತದೆ.

# "ಸೋಲಿಗೆ ಶರಣಾಗದ ಕನ್ನಡಿಗ: ಕೆ.ಎಲ್. ರಾಹುಲ್"



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಪೂರ್ತಿ ಸುಧೆ - 43

ಯಶಸ್ಸು ಎಂದರೆ ಗೆಲುವಿನ ಗರಿಮೆಯಲ್ಲ;ಅದು ನೂರಾರು ಅವಮಾನಗಳನ್ನು ಮೌನವಾಗಿ ನುಂಗಿ ಸಾಧಿಸುವ ತಪಸ್ಸು. ಕ್ರಿಕೆಟ್ ಲೋಕದ ಸ್ಟೈಲಿಶ್ ಬ್ಯಾಟರ್ ಕೆ.ಎಲ್. ರಾಹುಲ್ ಅವರ ಬದುಕು ಇದಕ್ಕೆ ಜೀವಂತ ಸಾಕ್ಷಿ. ಮಂಗಳೂರಿನ ಶಿಸ್ತಿನ ಮನೆಯಿಂದ ಮೈದಾನಕ್ಕೆ ಇಳಿದ ಅವರ ಪಯಣ ಹೂವಿನ ಹಾದಿಯಾಗಿರಲಿಲ್ಲ.

ಆಸ್ಟ್ರೇಲಿಯದಂತಹ ಘಟಾನುಘಟಿಗಳ ಎದುರು ಪದಾರ್ಪಣೆಯಲ್ಲೇ 3 ರನ್‌ಗೆ ಪೆವಿಲಿಯನ್ ಸೇರಿದಾಗ ಜಗತ್ತು ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ಇವನು ಲಾಯಕ್ಕಲ್ಲ ಎಂದು ಮೂದಲಿಸಿತು. ಆದರೆ ರಾಹುಲ್ ಕುಗ್ಗಲಿಲ್ಲ. ಮರು ಪಂದ್ಯದಲ್ಲೇ ಶತಕ ಸಿಡಿಸಿ ಟೀಕಾಕಾರರ ದನಿ ಅಡಗಿಸಿದ. ಗಾಯದ ಸರಮಾಲೆ, ಫಾರ್ಮ್‌ನ ಏರಿಳಿತ, ತಂಡದಲ್ಲಿ ಅನಿಶ್ಚಿತ ಸ್ಥಾನ, ವಿಕೆಟ್ ಕೀಪಿಂಗ್‌ನ ಹೆಚ್ಚುವರಿ ಹೊರೆ ಎಲ್ಲವನ್ನೂ ನಗುಮುಖದಿಂದ ಸ್ವೀಕರಿಸಿದ. ಸಾಮಾಜಿಕ ಜಾಲತಾಣದ ಕೂಗಾಟಕ್ಕೆ ಉತ್ತರವನ್ನು ಬ್ಯಾಟ್‌ನ ಅಂಚಿನಲ್ಲಿ ಬರೆದ. ಗಂಭೀರ ಶಸ್ತ್ರಚಿಕಿತ್ಸೆಯ ನಂತರ ಮತ್ತೆ ಅಬ್ಬರಿಸಿದ ಅವನ ಜಿಗುಟುತನ ಅನನ್ಯ.




ರಾಹುಲ್ ಕಲಿಸುವ ಪಾಠ ಸರಳ:ಕೆಟ್ಟ ದಿನಗಳಲ್ಲಿ ಜಗತ್ತು ಕೈಬಿಟ್ಟರೂ ನೀನು ನಿನ್ನನ್ನು ಕೈಬಿಡಬೇಡ.ಟೀಕೆಗಳು ಅಣಕಿಸಿದಾಗ ಕಿರುಚುವ ಬದಲು ಮೌನದ ಸಾಧನೆ ಮೊಳಗಲಿ. ಸತತ ಶ್ರಮ, ವಿನಯ ಇದ್ದರೆ ಕಷ್ಟದ ಕಡಲು ದಾಟಿ ಯಶಸ್ಸಿನ ದಡ ಸೇರಬಹುದು ಎಂಬುದಕ್ಕೆ ನಮ್ಮ ಹೆಮ್ಮೆಯ ಕನ್ನಡಿಗ ರಾಹುಲ್ ಅಪ್ರತಿಮ ಪ್ರೇರಣೆ.

# ಬೀಜೋಪಚಾರ–ರಸಗೊಬ್ಬರಗಳ ಸಮರ್ಪಕ ಬಳಕೆ ಕುರಿತು ತರಬೇತಿ

**ಮೈಸೂರು:** ಜಿಲ್ಲಾ ಕೃಷಿ ತರಬೇತಿ ಕೇಂದ್ರ, ನಾಗನಹಳ್ಳಿ ವತಿಯಿಂದ 2026–27ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ನಂಜನಗೂಡು ತಾಲೂಕಿನ ಕಸಬಾ ಹೋಬಳಿಯ ಕಸುವಿನಹಳ್ಳಿ ಗ್ರಾಮದಲ್ಲಿ ಕೃಷಿ ಬೆಳೆಗಳಲ್ಲಿ ಬೀಜೋಪಚಾರದ ಮಹತ್ವ ಹಾಗೂ ರಸಗೊಬ್ಬರಗಳ ಸಮರ್ಪಕ ಬಳಕೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ನಿವೃತ್ತ ವಿಜ್ಞಾನಿ ಡಾ.ಜಿ.ಜಿ.ರಾಜಣ್ಣ ಅವರು, ಮಣ್ಣಿನ ಆರೋಗ್ಯ ಕಾಪಾಡುವಲ್ಲಿ ಸಮತೋಲಿತ ಪೋಷಕಾಂಶಗಳ ಬಳಕೆ ಅಗತ್ಯವಾಗಿದ್ದು, ಶಿಫಾರಸು ಮಾಡಿದ ಪ್ರಮಾಣದಲ್ಲೇ ರಸಗೊಬ್ಬರಗಳನ್ನು ಬಳಸಬೇಕು ಎಂದು ತಿಳಿಸಿದರು. ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕೃಷಿ ಅಧಿಕಾರಿ ಮಂಜುಳ ಎಂ.ಬಿ. ಮಾತನಾಡಿ, ರೈತರು ವೈಜ್ಞಾನಿಕ ವಿಧಾನದಲ್ಲಿ ರಸಗೊಬ್ಬರಗಳನ್ನು ಬಳಸುವುದರಿಂದ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬಹುದು. ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಗುಣಮಟ್ಟ ಕುಸಿಯುವ ಸಾಧ್ಯತೆ ಇರುವುದರಿಂದ ಸಾವಯವ ಗೊಬ್ಬರ ಹಾಗೂ ಹಸಿರು ಗೊಬ್ಬರಗಳ ಬಳಕೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.ಸುತ್ತೂರಿನ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ದಿವ್ಯಾ ಅವರು ಕೃಷಿ ಬೆಳೆಗಳಲ್ಲಿ ಬೀಜೋಪಚಾರದ ಮಹತ್ವ, ಅದರ ಪ್ರಯೋಜನಗಳು ಹಾಗೂ ಬೆಳೆಗಳ ಆರಂಭಿಕ ಬೆಳವಣಿಗೆಯಲ್ಲಿ ಅದರ ಪಾತ್ರದ ಕುರಿತು ಮಾಹಿತಿ ನೀಡಿದರು.

ಸಸ್ಯರೋಗ ತಜ್ಞೆ.ಡಾ.ಪುಷ್ಪಾ ಆರ್.ಎನ್. ಅವರು ಪ್ರಮುಖ ಕೀಟ ಹಾಗೂ ರೋಗಗಳ ನಿಯಂತ್ರಣ ಕ್ರಮಗಳ ಬಗ್ಗೆ ರೈತರಿಗೆ ವಿವರಿಸಿದರು. ಕಸಬಾ ಹೋಬಳಿಯ ಕೃಷಿ ಅಧಿಕಾರಿ ಮಾಧುರಿ ಅವರು ಕೃಷಿ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ರೈತರು ಹಾಗೂ ರೈತ ಮಹಿಳೆಯರು ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಂಡರು.




Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,